ಸಂಪುಟ : 4 ಸಂಚಿಕೆ : 08 ಪುಟ : 4 ಬೆಲೆ : ರೂ. 4 ಗುರುವಾರ, ಫೆಬ್ರುವರಿ, 16, 2023 E-mail: newsbelagavi@gmail.com Mobile No-9900332089

ಬೆಳಗಾವಿ ಮತ್ತು ಬೆಂಗಳೂರಿನಿಂದ ಏಕ ಕಾಲದಲ್ಲಿ ಪ್ರಕಟಿತ



# ಬೆಳಗಾವಿ ವರದಿ

BELAGAVI VARADI KANNADA DAILY

ಕರ್ನಾಟಕ ಕನ್ನಡ ದಿನಪತ್ರಿಕೆ

ಸಂಪಾದಕರು : ಸತೀಶ್.ಬಿ.ಜಿ

Volume : 4 Issue : 08 Pages : 4 Rate : 4 Rs Thursday, February 16, 2023 RNI : KARKAN/2020/79084 Post Regn.No:G-2/PMG/KA/NK/BM/139/2021-23 belagavivaradi@gmail.com

## ನಿಮ್ಮ ಹಗಲುಗನಸು ನನಸಾಗಲು ಇದು ಬಿಹಾರ, ಉತ್ತರ ಪ್ರದೇಶವಲ್ಲ: ಅಮಿತ್ ಶಾಗೆ ಕುಮಾರಸ್ವಾಮಿ ವಾರ್ನಿಂಗ್



ಧಾರವಾಡ: ಅಧಿಕಾರ ಸಿಕ್ಕಾಗ ರಾಜ್ಯದ ಜನರು ಮತ್ತು ರೈತರ ಪರವಾಗಿ ಜೆಡಿಎಸ್ ಧ್ವನಿ ಎತ್ತಿದೆ. ಆದರೆ ಎಂದಿಗೂ ಬಿಜೆಪಿಯವರಂತೆ ಎಂದೂ ನರಹತ್ಯೆಯ ರಾಜಕೀಯ ಮಾಡಿಲ್ಲ ಎಂದು ಜೆಡಿಎಸ್ ಮುಖಂಡ ಎಚ್.ಡಿ.ಕುಮಾರಸ್ವಾಮಿ ಹೇಳಿದರು.

ನಗರದ ಮಹಾನಗರ ಪಾಲಿಕೆ ಕೇಂದ್ರ ಕಚೇರಿ ಆವರಣದಲ್ಲಿ ಮಂಗಳವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನಮಗೆ ಅಧಿಕಾರ ಸಿಕ್ಕಾಗ ರೈತರ ಸಾಲ ಮನ್ನಾ ಮಾಡಿದ್ದೇವೆ. ಪ್ರಾಮಾಣಿಕವಾಗಿ ಜನಗಳ ನೋವಿಗೆ ಸ್ಪಂದಿಸುವ ಕೆಲಸ ಮಾಡಿದ್ದೇವೆ. ಆದರೆ ಬಿಜೆಪಿ ನಾಯಕರಂತೆ ಅಮಾಯಕರನ್ನು ಬಲಿ ಪಡೆದು ರಾಜಕೀಯ ಮಾಡಿಲ್ಲ. ಹೀಗಾಗಿ ರಾಜ್ಯ ಹಾಗೂ ದೇಶದಲ್ಲಿ ಜನರು ಏನು ತೀರ್ಮಾನ ತೆಗೆದುಕೊಳ್ಳುತ್ತಾರೆ ಎಂಬುದನ್ನು ಕಾದು ನೋಡಿ ಎಂದರು.

ಭಾರತದ ಸಂವಿಧಾನದಲ್ಲಿ ಯಾರು ಯಾವ ವೃತ್ತಿಯಾದರೂ ಆರಿಸಿಕೊಳ್ಳಬಹುದು. ಚುನಾವಣೆ ಬಂದಾಗ ಯಾರಾದರೂ ನಿಲ್ಲಬಹುದು. ಸಂವಿಧಾನದ ವ್ಯವಸ್ಥೆ ಬಗ್ಗೆ ಅಮಿತ್ ಶಾ ತಿಳಿದುಕೊಂಡಿದ್ದಾರಾ. ಇದನ್ನ ನಾನು ಅವರಿಗೆ ಕೇಳಲು ಬಯಸುತ್ತೇನೆ. ಜನರ ಆಶೀರ್ವಾದಿಂದ ಜನಪ್ರತಿನಿಧಿ ಆಗ್ತಾರೆ. ನಾವು ಯಾರೂ ಹಿಂಬಾಗಿಲಲ್ಲಿ ಪ್ರವೇಶ ಮಾಡಿಲ್ಲ. ಜನ ಸ್ವೀಕಾರ ಮಾಡಿದ ಮೇಲೆ ನಾವು ಜನಪ್ರತಿನಿಧಿ ಆಗಿದ್ದೇವೆ. ಅದಕ್ಕೆ ನಾವು ಇವರಿಂದ ಪರ್ಮಿಷನ್ ತಗೊಬೇಕಾ ಎಂದು ಕುಮಾರಸ್ವಾಮಿ ಕೇಳಿದ್ದಾರೆ.

ರಾಜ್ಯಕ್ಕೆ ಬಂದು ಬರೀ ಭಾಷಣ ಬಿಗಿಯುವ ಕೇಂದ್ರ ಗೃಹ ಸಚಿವ ಅಮಿತ್ ಶಾ, ಕರ್ನಾಟಕಕ್ಕಾಗಲಿ, ಇಲ್ಲಿನ ಜನತೆಗಾಗಲಿ ಏನಾದರೂ ಕೊಡುಗೆ ನೀಡಿದ್ದಾರೆಯೇ? ಮಹದಾಯಿ ಸಮಸ್ಯೆ ಸರಿಪಡಿಸಿದ್ದಾರಾ? ರಾಜ್ಯ-ಕ್ಕೆ ಏನಾದರೂ ಕೊಡುಗೆ ಕೊಟ್ಟಿದ್ದಾರಾ? ಎಂದು ಪ್ರಶ್ನೆಗಳ ಸುರಿಮಳೆಗರೆದರು.

ರಾಜ್ಯದಲ್ಲಿ ಬಿಜೆಪಿ ವಿರುದ್ಧ ಜನ ರೊಚ್ಚಿಗೆದ್ದಿದ್ದಾರೆ. ಇಷ್ಟು ದಿನ ಏನೂ ಮಾಡದೇ ಚುನಾವಣೆಯ ಹಿನ್ನೆಲೆ ಕಾಟಾಚಾರಕ್ಕಾಗಿ ಮಹದಾಯಿ ಬಗ್ಗೆ ಘೋಷಣೆ ಮಾಡಿ, ಗೋವಾದವರಿಂದ ತಕರಾರು ತೆಗೆಸಿದ್ದಾರೆ. ಇಂಥವರಿಂದ ಕರ್ನಾಟಕದ ಜನತೆ ಏನು ನಿರೀಕ್ಷಿಸಲು ಸಾಧ್ಯವಿಲ್ಲ ಎಂದರು.

## ಶೀಘ್ರದಲ್ಲೇ ದೇಶದಲ್ಲಿ ಯಾವುದೇ ಮಾಧ್ಯಮ ಇರುವುದಿಲ್ಲ: ಬಿಬಿಸಿ ಮೇಲೆ ಐಟಿ ದಾಳಿಗೆ ಮಮತಾ ಕಿಡಿ




ಕೋಲ್ಕತಾ: ಬಿಬಿಸಿ ಇಂಡಿಯಾದ ಕಚೇರಿಗಳ ಮೇಲೆ ಆದಾಯ ತೆರಿಗೆ ಇಲಾಖೆ ಸಮೀಕ್ಷೆ(ದಾಳಿ) ಅತ್ಯಂತ ದುರದೃಷ್ಟಕರ ಎಂದಿರುವ ಪಶ್ಚಿಮ ಬಂಗಾಳ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಅವರು, ಇದು ಬಿಜೆಪಿ ನೇತೃತ್ವದ ಕೇಂದ್ರ ಸರ್ಕಾರದ ರಾಜಕೀಯ ಸೇಡು ಎಂದು ಆರೋಪಿಸಿದ್ದಾರೆ.

ಇದು ಅತ್ಯಂತ ದುರದೃಷ್ಟಕರ; ಇದು ಬಿಜೆಪಿ ಸರ್ಕಾರದ ರಾಜಕೀಯ ಸೇಡಿನ ಕ್ರಮವಾಗಿದೆ" ಎಂದು ಪಶ್ಚಿಮ ಬಂಗಾಳ ಅಸೆಂಬ್ಲಿಯಲ್ಲಿ ಮಮತಾ ಬ್ಯಾನರ್ಜಿ ಹೇಳಿದ್ದಾರೆ.

ಇಂತಹ ಕ್ರಮಗಳು ಪತ್ರಿಕಾ ಸ್ವಾತಂತ್ರ್ಯದ ಮೇಲೆ ಪರಿಣಾಮ ಬೀರುತ್ತವೆ, ಕೇಸರಿ ಪಕ್ಷವು ಮಾಧ್ಯಮವನ್ನು ನಿಯಂತ್ರಿಸುತ್ತಿದೆ. ಒಂದು ದಿನ ದೇಶದಲ್ಲಿ ಮಾಧ್ಯಮವೇ ಇಲ್ಲದಂತೆ ಮಾಡುತ್ತಾರೆ. ಅವರು(ಬಿಜೆಪಿ ನಾಯಕರು) ಜನಾದೇಶದ ಬಗ್ಗೆ ಕಾಳಜಿ ವಹಿಸುವುದಿಲ್ಲ, ಅವರ ಏಕೈಕ ಜನಾದೇಶ ಸರ್ವಾಧಿಕಾರ. (ಅವರು) ಹಿಟ್ಲರ್‌ಗಿಂತ ಹೆಚ್ಚು" ಪಶ್ಚಿಮ ಬಂಗಾಳ ಸಿಎಂ ವಾಗ್ದಾಳಿ ನಡೆಸಿದರು.

ಭಾರತದಲ್ಲಿ ಬ್ರಿಟಿಷ್ ಬ್ರಾಡ್‌ಕಾಸ್ಟರ್ ವಿರುದ್ಧ ಆಪಾದಿತ ತೆರಿಗೆ ವಂಚನೆಯ ತನಿಖೆಯ ಭಾಗವಾಗಿ ತೆರಿಗೆ ಇಲಾಖೆಯು ಮಂಗಳವಾರ ಬಿಬಿಸಿಯ ದೆಹಲಿ ಮತ್ತು ಮುಂಬೈ ಕಚೇರಿಗಳಲ್ಲಿ ಸಮೀಕ್ಷೆಯನ್ನು ಪ್ರಾರಂಭಿಸಿದೆ. ಬುಧವಾರವೂ ಐಟಿ ಕಾರ್ಯಾಚರಣೆ ಮುಂದುವರಿದಿದೆ.




## ಬಿಜೆಪಿ ಸರ್ಕಾರದಿಂದ ಟೆಂಡರ್ ಹಗರಣ, ಸಾವಿರಾರು ಕೋಟಿ ರೂಪಾಯಿ ಲೂಟಿ: ಕಾಂಗ್ರೆಸ್ ನಾಯಕರ ಆರೋಪ

ಬೆಂಗಳೂರು: ರಾಜ್ಯ ಚುನಾವಣೆ ಹೊಸ್ತಿಲಿನಲ್ಲಿ ರಾಜಕೀಯ ಪಕ್ಷಗಳ ರಾಜಕೀಯ ಚಟುವಟಿಕೆಗಳು, ಆಡಳಿತ ಪಕ್ಷವನ್ನು ಇಕ್ಕಟ್ಟಿಗೆ ಸಿಲುಕಿಸುವ, ಆರೋಪ ಮಾಡುವ ಪ್ರತಿಪಕ್ಷಗಳ ತಂತ್ರ ಮುಂದುವರಿದಿದೆ. ಇಂದು ಕಾಂಗ್ರೆಸ್ ನಾಯಕರು ಬೆಂಗಳೂರಿನಲ್ಲಿ ತುರ್ತು ಸುದ್ದಿಗೋಷ್ಠಿ ಕರೆದರು.

ರಾಜ್ಯ ಬಿಜೆಪಿ ಸರ್ಕಾರದ ಮೇಲೆ ಹಿಂದಿನಿಂದಲೂ ಭ್ರಷ್ಟಾಚಾರ, 40 ಪರ್ಸೆಂಟ್ ಕಮಿಷನ್ ಆರೋಪವಿದೆ. ಗುತ್ತಿಗೆ ಕಾಮಗಾರಿಯಲ್ಲಿ ಸಚಿವರು, ಶಾಸಕರು ಗುತ್ತಿಗೆದಾರರಿಂದ ಶೇಕಡಾ 40ರವರೆಗೆ ಕಮಿಷನ್ ಪಡೆಯುತ್ತಾರೆ ಎಂದು ಗುತ್ತಿಗೆದಾರರ ಸಂಘದ ಅಧ್ಯಕ್ಷರೇ ಈ ಹಿಂದೆ ಆರೋಪಿಸಿದ್ದರು.

ಈ ಆರೋಪದ ಮೇಲೆ ಕೆ ಎಸ್ ಈಶ್ವರಪ್ಪ ಸಚಿವ ಸ್ಥಾನ ಕಳೆದುಕೊಂಡರು. ಗುತ್ತಿಗೆದಾರರ ಸಂಘದ ಆರೋಪಕ್ಕೆ ಕಾಂಗ್ರೆಸ್ ಬೆಂಬಲವಿದೆ.



ಇದೇ ವಿಷಯಕ್ಕೆ ಸಂಬಂಧಪಟ್ಟಂತೆ ಬೆಂಗಳೂರಿನ ಸದಾಶಿವನಗರದಲ್ಲಿರುವ ಡಿ ಕೆ ಶಿವಕುಮಾರ್ ನಿವಾಸದಲ್ಲಿ ಕಾಂಗ್ರೆಸ್ ನಾಯಕರು ತುರ್ತು ಸುದ್ದಿಗೋಷ್ಠಿ ಕರೆದು ಬಿಜೆಪಿ ಸರ್ಕಾರ, ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಮೇಲೆ ಆರೋಪಗಳ ಸುರಿಮಳೆಗೈದರು.

ವಿಪಕ್ಷ ನಾಯಕ ಸಿದ್ದರಾಮಯ್ಯ ಮಾತನಾಡಿ, ರಾಜ್ಯದ ಬೊಕ್ಕಸವನ್ನು ಸರ್ಕಾರವೇ ಲೂಟಿ ಮಾಡ್ತಿದೆ, ಯದ್ವಾತದ್ವಾ ಎಲ್ಲಾ ಪ್ರಾಜೆಕ್ಟ್ ಗಳಿಗೆ ಒಪ್ಪಿಗೆ ನೀಡುತ್ತಿದ್ದಾರೆ. ಜನರ ತೆರಿಗೆ ಹಣ ರಕ್ಷಣೆ ನಮ್ಮ ಜವಾಬ್ದಾರಿಯಾಗಿದೆ. ಟೆಂಡರ್ ಹಣ ಹೆಚ್ಚು ಮಾಡಿದ್ರೆ ಹೆಚ್ಚು ಕಮಿಷನ್ ನೀಡುತ್ತಿದ್ದಾರೆಂದು ಗುಡುಗಿದರು.

ಮಂತ್ರಿಗಳು ಹೆಚ್ಚು ಕಮಿಷನ್ ಕೊಡುವವರಿಗೆ ಗುತ್ತಿಗೆ ಕೊಡುತ್ತಿದ್ದಾರೆ. 40 ಪರ್ಸೆಂಟ್ ಕಮಿಷನ್ ಹಗರಣದ ಮುಂದುವರೆದ ಭಾಗ ಇದು. ಕಾಂಟ್ರಾಕ್ಟರ್, ಅಧಿಕಾರಿಗಳಿಗೆ ವಾರ್ನ್ ಮಾಡ್ತಿದ್ದೇನೆ. ನಾವು ಇದನ್ನು ಲಾಜಿಕಲ್ ಎಂಡ್ಗೆ ತಗೆದುಕೊಂಡು ಹೋಗುತ್ತೇವೆ.

ಕಾಂಟ್ರಾಕ್ಟರ್ಗಳು, ಅಧಿಕಾರಿಗಳ ವಿರುದ್ಧ ಕ್ರಿಮಿನಲ್ ಮೊಕದ್ದಮೆ ಹಾಕ್ತೀವಿ. ಯಾರನ್ನೂ ಬಿಡಲ್ಲ, ಎಲ್ಲರನ್ನೂ ಜೈಲಿಗೆ ಹಾಕ್ತೀವಿ. ಅಧಿಕಾರಕ್ಕೆ ಬಂದ ತಕ್ಷಣ ಎಲ್ಲಾ ಕಾಮಗಾರಿಗಳ ತನಿಖೆ ಮಾಡಿಸ್ತೇವೆ. ಅಧಿಕಾರಕ್ಕೆ ಬಂದ ತಕ್ಷಣ 40% ಕಮಿಷನ್ ಹಗರಣ ತನಿಖೆ ಮಾಡಿಸುತ್ತೇವೆ ಎಂದರು.

ಒಂದೇ ದಿನದಲ್ಲಿ 18,000 ಕೋಟಿ ಬಿಲ್ ಆಗಿದೆ. ಬಿಜೆಪಿ ಎಂಎಲ್ಎ ಗೂಳಿಹಟ್ಟಿ ಶೇಖರ್ ಸರ್ಕಾರಕ್ಕೆ ಪತ್ರ ಬರೆದಿದ್ದಾರೆ. ಎಲೆಕ್ಷನ್ ಫಂಡ್ ರೈಸ್ ಮಾಡಲು ಟೆಂಡರ್ ಹಗರಣ ಮಾಡುತ್ತಿದ್ದಾರೆ ಎಂದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಡಿ ಕೆ ಶಿವಕುಮಾರ್, ಚುನಾವಣೆ ಹೊಸ್ತಿಲಿನಲ್ಲಿ ಬಿಜೆಪಿಯಿಂದ ಸಾವಿರಾರು ಕೋಟಿ ಟೆಂಡರ್ ಅಕ್ರಮ ಬಯಲಿಗೆ ಬಂದಿದೆ ಎಂದು ಹೊಸ ಬಾಂಬ್ ಸಿಡಿಸಿದರು.

ಅಸಮಾಧಾನಿತ ಶಾಸಕರ ಸಮಾಧಾನಕ್ಕೆ ಟೆಂಡರ್ ಹಣವಿದ್ದು, ಮಂತ್ರಿ ಸ್ಥಾನ ಸಿಗದವರಿಗೆ ಟೆಂಡರ್ ಆಫರ್ ನೀಡಿದ್ದಾರೆ. ಇದು ಅಂತಿಂಥ ಹಗರಣವಲ್ಲ ಸಾವಿರಾರು ಕೋಟಿ ಲೂಟಿ ಮಾಡಿದ್ದಾರೆ.

ವಸೂಲಿ ಹಣದಲ್ಲಿ ಎಲೆಕ್ಷನ್ ಮಾಡಲು ಹೊರಟಿದ್ದಾರೆಂದು ಸರ್ಕಾರದ ವಿರುದ್ಧ ಕೆಪಿಸಿಸಿ ಅಧ್ಯಕ್ಷ ಡಿಕೆ ಶಿವಕುಮಾರ್ ವಾಗ್ದಾಳಿ ನಡೆಸಿ ರಾಜ್ಯ ಸರ್ಕಾರ ಭ್ರಷ್ಟಾಚಾರದಲ್ಲಿ ಮುಳುಗಿ ಹೋಗಿದೆ ಎಂದು ಆಪಾದಿಸಿದರು.

## ಮಾತುಕತೆ ಆಗಿದ್ದು ನಿಜ, ಎರಡೂ ಕಡೆ ಆಪ್ತರೇ ಇರುವಾಗ ನಿರ್ಧಾರ ಕಷ್ಟ: ಮೌನ ಮುರಿದ ಸುದೀಪ್



ಬೆಂಗಳೂರು: ನಟ ಸುದೀಪ್ ರಾಜ್ಯ ರಾಜಕಾರಣಕ್ಕೆ ಪ್ರವೇಶಿಸಲಿದ್ದಾರೆ ಎಂಬ ಮಾತುಗಳು ಕಳೆದ ಕೆಲವು ದಿನಗಳಿಂದ ಕೇಳಿ ಬರುತ್ತಿವೆ, ಕೆಪಿಸಿಸಿ ಅಧ್ಯಕ್ಷ ಡಿಕೆ ಶಿವಕುಮಾರ್ ಅವರು ಇತ್ತೀಚೆಗೆ ಭೇಟಿ ಮಾಡಿದ್ದು ಇದಕ್ಕೆ ಪುಷ್ಠಿ ನೀಡುವಂತಿತ್ತು.

ರಾಜಕೀಯ ಪ್ರವೇಶದ ಬಗ್ಗೆ ನಟ ಕಿಚ್ಚ ಸುದೀಪ್ ಮೊದಲ ಬಾರಿಗೆ ಪ್ರತಿಕ್ರಿಯೆ ನೀಡಿದ್ದಾರೆ. ರಾಜಕೀಯ ನಾಯಕರು ಮಾತುಕತೆಗೆ ಬಂದಿದ್ದು ನಿಜ ಎಂದು ಅವರು ಹೇಳಿದ್ದಾರೆ. ಆದರೆ ರಾಜಕೀಯಕ್ಕೆ ಎಂಟ್ರಿ ನೀಡಬೇಕೋ ಬೇಡವೋ ಎಂಬ ಬಗ್ಗೆ ತಾವು ಇನ್ನೂ ತೀರ್ಮಾನ ತೆಗೆದುಕೊಂಡಿಲ್ಲ ಎಂದು ಸುದೀಪ್ ಸ್ಪಷ್ಟಪಡಿಸಿದ್ದಾರೆ.

ನಾನೊಬ್ಬ ಕಲಾವಿದ. ಹಂಡ್ರೆಡ್ ಪರ್ಸೆಂಟ್ ಮಾತುಕತೆಗೆ ಬಂದಿದ್ದರು. ಇಲ್ಲ ಅಂತ ಹೇಳೋಕೆ ಹೋಗಲ್ಲ. ಇತ್ತೀಚೆಗೆ ಪೊಲಿಟಿಕಲ್ ನಾಯಕರಿಗೆ ನಂಬಿಕೆ ಬಂದಿದೆ. ಡಿಕೆ ಶಿವಕುಮಾರ್, ಸುಧಾಕರ್, ಬಸವರಾಜ ಬೊಮ್ಮಾಯಿ, ರಮ್ಯಾ ಅವರು ನನ್ನ ಸ್ನೇಹಿತರು. ನಾನು ಇನ್ನೂ ನಿರ್ಧಾರ ತಗೊಂಡಿಲ್ಲ. ಎರಡೂ ಕಡೆ ಆಪ್ತರು ಇರುವಾಗ ನಿರ್ಧಾರ ತೆಗೆದುಕೊಳ್ಳುವುದು ಕಷ್ಟ ಆಗುತ್ತದೆ' ಎಂದು ಕಿಚ್ಚ ಸುದೀಪ್ ಹೇಳಿದ್ದಾರೆ.

## ಬಿಜೆಪಿ ಶಾಸಕ ಸತೀಶ್ ರೆಡ್ಡಿ ಹತ್ಯೆಗೆ ಸುಪಾರಿ: ಇಬ್ಬರ ಬಂಧನ



ಬೆಂಗಳೂರು: ಬೊಮ್ಮನಹಳ್ಳಿ ಬಿಜೆಪಿ ಶಾಸಕ ಸತೀಶ್ ರೆಡ್ಡಿ ಹತ್ಯೆಗೆ ಸುಪಾರಿ ನೀಡಿರುವ ಆರೋಪದ ಮೇಲೆ ಪೊಲೀಸರು ಇಬ್ಬರು ಆರೋಪಿಗಳನ್ನು ಬಂಧಿಸಿದ್ದಾರೆ.

ಸತೀಶ್ ರೆಡ್ಡಿ ಹತ್ಯೆಗೆ ಕುಖ್ಯಾತ ರೌಡಿ ಗ್ಯಾಂಗ್ ಸ್ಕೆಚ್ ಹಾಕಿದ್ದ ಸ್ಫೋಟಕ ವಿಷಯ ಬಹಿರಂಗಗೊಂಡಿದೆ. ನಗರದ ವಿಲ್ಸನ್ ಗಾರ್ಡನ್ ನಾಗನ ತಂಡ ಶಾಸಕನ ಹತ್ಯೆಗೆ 2 ಕೋಟಿಗೆ ಸುಪಾರಿ ಪಡೆದಿದ್ದು ಶಾಸಕರ ಚಲನವಲನಗಳ ಬಗ್ಗೆ ನಿಗಾವಹಿಸಿದ್ದರು. ಆದರೆ ದಾಳಿಗೂ ಮುಂಚೆ ರೌಡಿಶೀಟರ್ ನಾಗನ ತಂಡದಿಂದಲೇ ವಿಷಯ ಬಹಿರಂಗಗೊಂಡಿದೆ.

ನಾಗನ ತಂಡದಲ್ಲಿದ್ದ ಚಿತ್ರದುರ್ಗದ ಮೂಲದ ಆಕಾಶ್ ಕೊಲೆಯ ಸುಳಿವು ಬಿಟ್ಟು ಕೊಟ್ಟಿದ್ದಾನೆ. ಸತೀಶ್ ರೆಡ್ಡಿ ಬೆಂಬಲಿಗ ಚಂದ್ರು ಕರೆ ಮಾಡಿದ್ದಾಗ ಆಕಾಶ್ ಕೊಲೆಯ ಸಂಚು ಬಾಯ್ಬಿಟ್ಟಿದ್ದಾನೆ. ನಂತರ ಎಚ್ಚೆತ್ತ ಶಾಸಕರು ಪೊಲೀಸರಿಗೆ ದೂರು ನೀಡಿದ್ದಾರೆ.

ತಮ್ಮ ವಿರುದ್ಧ ದೂರು ದಾಖಲಾಗುತ್ತಿದ್ದಂತೆ ರೌಡಿ ನಾಗನ ತಂಡ ತಲೆಮರೆಸಿಕೊಂಡಿದ್ದಾರೆ. ಇನ್ನು ನಾಗನ ತಂಡವನ್ನು ಪತ್ತೆ ಹಚ್ಚಲು ವಿಶೇಷಗಳನ್ನು ತಂಡಗಳನ್ನು ರಚಿಸಿದೆ.


## ರಾಜಕೀಯ ಪಕ್ಷಗಳ ದೇಣಿಗೆ ಭರ್ಜರಿ ಹೆಚ್ಚಳ: ಕಳೆದ ವರ್ಷ 614 ಕೋಟಿ ಸಂಗ್ರಹಿಸಿದ ಬಿಜೆಪಿ, ಕಾಂಗ್ರೆಸ್ ಗೆ ಕೇವಲ 95 ಕೋಟಿ

ನವದೆಹಲಿ: ರಾಷ್ಟ್ರೀಯ ರಾಜಕೀಯ ಪಕ್ಷಗಳಿಗೆ ನೀಡುವ ದೇಣಿಗೆಯಲ್ಲಿ ಗಣನೀಯ ಪ್ರಮಾಣದಲ್ಲಿ ಏರಿಕೆಯಾಗಿದ್ದು, ಕಳೆದ ವರ್ಷ ಆಡಳಿತರೂಢ ಬಿಜೆಪಿ ಬರೋಬ್ಬರಿ 614 ಕೋಟಿ ರೂಪಾಯಿ ಸಂಗ್ರಹಿಸುವ ಮೂಲಕ ಮೊದಲ ಸ್ಥಾನದಲ್ಲಿ. ಇನ್ನೂ ದೇಶದ ಅತ್ಯಂತ ಹಳೆಯ ಪಕ್ಷ ಕಾಂಗ್ರೆಸ್ ಕೇವಲ ಕೇವಲ 95 ಕೋಟಿ ರೂ. ದೇಣಿಗೆ ಸಂಗ್ರಹ ಮಾಡಲಷ್ಟೇ ಶಕ್ತವಾಗಿದೆ ಎಂದು ಅಸೋಸಿಯೇಷನ್ ಫಾರ್ ಡೆಮಾಕ್ರಟಿಕ್ ರಿಫಾರ್ಮ್ಸ್(ಎಡಿಆರ್) ಹೇಳಿದೆ.

ಅಸೋಸಿಯೇಷನ್ ಫಾರ್ ಡೆಮಾಕ್ರಟಿಕ್ ರಿಫಾರ್ಮ್ಸ್ ವರದಿಯ ಪ್ರಕಾರ, 2021-22ರ ಆರ್ಥಿಕ ವರ್ಷದಲ್ಲಿ ರಾಷ್ಟ್ರೀಯ ಪಕ್ಷಗಳಿಗೆ ಒಟ್ಟು 187.03 ಕೋಟಿ ರೂಪಾಯಿ ದೇಣಿಗೆ ಪಡೆದಿದ್ದು, ಇದು ಹಿಂದಿನ ಹಣಕಾಸು ವರ್ಷಕ್ಕಿಂತ ಶೇ 31.50 ರಷ್ಟು ಹೆಚ್ಚಳವಾಗಿದೆ.

ಬಿಜೆಪಿಯು ಒಟ್ಟು 4,957 ದೇಣಿಗೆಗಳ ಮೂಲಕ ಒಟ್ಟು 614.63 ಕೋಟಿ ರೂ. ಸಂಗ್ರಹ ಮಾಡಿರೋದಾಗಿ ಘೋಷಿಸಿದೆ. ಇನ್ನು ಕಾಂಗ್ರೆಸ್ ಪಕ್ಷವು 1,255 ದೇಣಿಗೆಗಳ ಮೂಲಕ ಒಟ್ಟು 95.46 ಕೋಟಿ ರೂ. ಸಂಗ್ರಹ ಮಾಡಿರೋದಾಗಿ ಘೋಷಿಸಿದೆ.

ಬಿಜೆಪಿಯು ಘೋಷಣೆ ಮಾಡಿರುವ ಒಟ್ಟು ದೇಣಿಗೆಯ ಪ್ರಮಾಣ



ಕಾಂಗ್ರೆಸ್ ಪಕ್ಷಕ್ಕಿಂತಾ 3 ಪಟ್ಟು ಅಧಿಕ ಇರೋದು ಕಂಡು ಬರುತ್ತೆ. ಇದಲ್ಲದೆ, ಎನ್‌ಸಿಪಿ, ಸಿಪಿಐ, ಸಿಪಿಎಂ, ಎನ್‌ಪಿಇಪಿ ಹಾಗೂ ಎಐಟಿಸಿ ಪಕ್ಷಗಳೂ ಕೂಡಾ ಅಲ್ಪ ಪ್ರಮಾಣದ ದೇಣಿಗೆ ಗಿಟ್ಟಿಸಿವೆ.

ಬಹುಜನ ಸಮಾಜ ಪಕ್ಷ(ಬಿಎಸ್ ಪಿ) ಕಳೆದ 16 ವರ್ಷಗಳಿಂದ ಘೋಷಿಸುತ್ತಿರುವಂತೆ 2021-22ರ ಅವಧಿಯಲ್ಲೂ ತನಗೆ 20,000 ರೂ.ಗಿಂತ ಮೇಲ್ಪಟ್ಟು ಯಾವೊಂದು ದೇಣಿಗೆಯೂ ಬಂದಿಲ್ಲ ಎಂದು ಘೋಷಿಸಿರುವುದಾಗಿ ಎಂದು ಎಡಿಆರ್ ವರದಿ ಮಾಡಿದೆ.

## ಫೆ.17ರಂದು ರಾಜ್ಯ ಬಜೆಟ್ ಮಂಡನೆ


ಬೆಂಗಳೂರು: ನಾಡಿದ್ದು, ಇದೇ ಫೆಬ್ರವರಿ 17ರಂದು ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಈ ಸರ್ಕಾರದ ಕೊನೆಯ ಬಜೆಟ್ ಮಂಡಿಸಲಿದ್ದಾರೆ.

ಬಜೆಟ್ ಮಂಡನೆಗೆ ಮುನ್ನ ದಿ ಕ್ಯಾಪಿಟಲ್ ಹೋಟೆಲ್‌ನಲ್ಲಿ ಇಂದು ಸಂಜೆ 7 ಗಂಟೆಗೆ ಶಾಸಕಾಂಗ ಪಕ್ಷದ ಸಭೆಯನ್ನು ಕರೆದಿರುವ ಬಿಜೆಪಿ, ಬಜೆಟ್ ಗೆ ಯಾವುದೇ ತೊಂದರೆಯಿಲ್ಲದೆ ಅಂಗೀಕಾರ ಪಡೆಯುವುದನ್ನು ಖಚಿತಪಡಿಸಿಕೊಳ್ಳಲು ಕಾರ್ಯತಂತ್ರಗಳ ಬಗ್ಗೆ ಚರ್ಚಿಸುವ ಸಾಧ್ಯತೆಯಿದೆ.

ಫೆಬ್ರವರಿ 23 ರಂದು ಅಧಿವೇಶನ ಮುಕ್ತಾಯಗೊಳ್ಳಬಹುದು, ಹೀಗಾಗಿ ಶಾಸಕರು ತಮ್ಮ ಕ್ಷೇತ್ರಗಳಿಗೆ ಮರಳಬಹುದು ಎಂಬ ಚರ್ಚೆ ಇದೆ. ಆಡಳಿತ ಮತ್ತು ವಿರೋಧ ಪಕ್ಷಗಳ ಶಾಸಕರು ತಮ್ಮ ಕ್ಷೇತ್ರಗಳ ಮೇಲೆ ಕೇಂದ್ರೀಕರಿಸುತ್ತಿರುವುದರಿಂದ ಬಜೆಟ್ ಅಧಿವೇಶನದಲ್ಲಿ ಪೂರ್ಣ ಪ್ರಮಾಣದಲ್ಲಿ ಭಾಗವಹಿಸುವುದು ಅನುಮಾನವಾಗಿದೆ. ಅನೇಕರು ಇಡೀ ಅಧಿವೇಶನದಲ್ಲಿ ಭಾಗವಹಿಸಲು ತಮ್ಮ ಅಸಹಾಯಕತೆ ವ್ಯಕ್ತಪಡಿಸಿದ್ದು, ತಂತಮ್ಮ ಪಕ್ಷದ ನಾಯಕರಿಗೆ ತಿಳಿಸಿದ್ದಾರೆ.

ಬಿಜೆಪಿಯು ಬಜೆಟ್ ಅಧಿವೇಶನದಲ್ಲಿ ಅನೇಕ ಮಸೂದೆಗಳಿಗೆ ಅಂಗೀಕಾರವನ್ನು ಬಯಸುತ್ತದೆ. ಕಲಾಪವನ್ನು ಬೇಗ ಮುಗಿಸುವಂತೆ ಹಲವು ಶಾಸಕರು ಸಲಹೆ ನೀಡಿದ್ದಾರೆ ಎಂದು ಮೂಲಗಳು ತಿಳಿಸಿವೆ. ಬಿಜೆಪಿ ಪ್ರಧಾನ ಕಾರ್ಯದರ್ಶಿ ರವಿಕುಮಾರ್ ಮಾತನಾಡಿ, ಸದನದ ಕಲಾಪವನ್ನು ಎಲ್ಲರೂ ಅರ್ಥಮಾಡಿಕೊಂಡಿದ್ದು ಪವಿತ್ರವಾಗಿದ್ದು, ಶಾಸಕಾಂಗ ಪಕ್ಷ ಸಭೆಯಲ್ಲಿ ಪ್ರಮುಖ ವಿಷಯಗಳ ಕುರಿತು ಚರ್ಚೆ ನಡೆಯಲಿದೆ ಎಂದು ಹೇಳಿದರು.

## ಚುನಾವಣೆ ಬಹಿಷ್ಕಾರಕ್ಕೆ ಮುಂದಾದ ಚೂಡಹಳ್ಳಿ ಗ್ರಾಮಸ್ಥರು



ನವದೆಹಲಿ: ಆನೇಕಲ್ ತಾಲೂಕಿನಲ್ಲಿ ಮೂಲಸೌಕರ್ಯ ವಂಚಿತ ಚೂಡಹಳ್ಳಿ ಗ್ರಾಮಸ್ಥರು ಈ ಬಾರಿಯ ವಿಧಾನಸಭಾ ಚುನಾವಣೆಯಲ್ಲಿ ಮತದಾನ ಬಹಿಷ್ಕರಿಸಲು ನಿರ್ಧರಿಸಿದ್ದಾರೆ.

60 ವರ್ಷಗಳಿಂದ ಗ್ರಾಮ ಮೂಲಭೂತ ಸೌಕರ್ಯ ವಂಚಿತವಾಗಿದ್ದು, ಚುನಾವಣಾ ಸಮಯದಲ್ಲಿ ಜನಪ್ರತಿನಿಧಿಗಳ ಸುಳ್ಳು ಭರವಸೆಗಳಿಗೆ ತುತ್ತಾಗಿರುವುದಕ್ಕೆ ಗ್ರಾಮಸ್ಥರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಸುಳ್ಳು ಭರವಸೆಗಳಿಂದ ಬೇಸತ್ತಿರುವ ಗ್ರಾಮಸ್ಥರು, ಸಾಮೂಹಿಕವಾಗಿ ಚುನಾವಣೆಯನ್ನು ಬಹಿಷ್ಕರಿಸುತ್ತಿರುವುದಾಗಿ ಘೋಷಿಸಿದ್ದಾರೆ. ಗ್ರಾಮಸ್ಥರಿಗೆ ಚುನಾವಣೆಯನ್ನು ಬಹಿಷ್ಕರಿಸಲು ಕರೆ ನೀಡಲಾಗಿದೆ.

ತಮ್ಮ ನಿರ್ಧಾರವನ್ನು ತಹಶೀಲ್ದಾರ್ ಅವರಿಗೆ ಪತ್ರದ ಮೂಲಕ ತಿಳಿಸಿರುವ ಗ್ರಾಮಸ್ಥರು, "ಗ್ರಾಮದಲ್ಲಿ 5 ನೇ ತರಗತಿವರೆಗೂ ಶಾಲೆ ಇದ್ದರೂ ಶಿಕ್ಷಕರು ಈ ಗ್ರಾಮ ತಲುಪುವುದಕ್ಕೆ ಅತ್ಯಂತ ಪ್ರಯಾಸ ಪಡುತ್ತಾರೆ.

6 ನೇ ತರಗತಿಗೆ ಕಾಡು ರಸ್ತೆಯನ್ನು ಹಾದು ಚಿಕ್ಕ ಹೊಸಹಳ್ಳಿ ಇಂಡ್ಲವಾಡಿ ಅಥವಾ ಆನೇಕಲ್ ಗೆ ಬರಬೇಕು ಆ ರಸ್ತೆಯ ಗುಣಮಟ್ಟವೂ ತೀರಾ ಹದಗೆಟ್ಟಿದೆ" ಎಂದು ಆರೋಪಿಸಿದ್ದಾರೆ.

ವಿದ್ಯಾರ್ಥಿಗಳು ಶಾಲೆಗೆ ಹೋಗುವುದಕ್ಕೆ ಯುವಕರು ಕಾರ್ಖಾನೆಗಳಿಗೆ ಹೋಗುವುದಕ್ಕೆ, ಸರಕು ಸಾಗಣೆಗೂ ಇದೇ ಮಾರ್ಗ ಬಳಸಬೇಕಾಗಿದ್ದು, ಹದಗೆಟ್ಟ ರಸ್ತೆಯಲ್ಲಿ ಬಿದ್ದು ಅನೇಕರು ಕಾಲು ಮುರಿದುಕೊಂಡಿದ್ದಾರೆ. ಇನ್ನೂ ಕೆಲವೆಡೆ ಅರಣ್ಯ ಇಲಾಖೆಯವರು ಜಮೀನುಗಳನ್ನು ನಮಗೆ ಸೇರಿದೆ ಎಂದು ಗ್ರಾಮಸ್ಥರಿಗೆ ಕೃಷಿ ಚಟುವಟಿಕೆಗೆ ಅವಕಾಶ ನೀಡುತ್ತಿಲ್ಲ.

ಈ ಬಗ್ಗೆ ಪರಿಶೀಲಿಸಬೇಕು" ಎಂದು ತಮ್ಮ ಸಮಸ್ಯೆಗಳನ್ನು ತಿಳಿಸಿದ್ದಾರೆ. ಇತ್ತೀಚಿನ ಮಾಹಿತಿಯ ಪ್ರಕಾರ ತಹಶೀಲ್ದಾರ್ ಅವರು ಸ್ಥಳ ಪರಿಶೀಲನೆಗೆ ಸೂಚನೆ ನೀಡಿದ್ದಾರೆ.



## ಫೆ.20 ರಂದು ಶೃಂಗೇರಿ ಮಠಕ್ಕೆ ಬಿಜೆಪಿ ರಾಷ್ಟ್ರಾಧ್ಯಕ್ಷ ಜೆಪಿ ನಡ್ಡಾ ಭೇಟಿ

ಬೆಂಗಳೂರು: ವಿಧಾನಸಭಾ ಚುನಾವಣೆಯ ಹಿನ್ನೆಲೆಯಲ್ಲಿ ರಾಜ್ಯಕ್ಕೆ ಬಿಜೆಪಿ ಹೈಕಮಾಂಡ್ ನಾಯಕರು ಹೆಚ್ಚು ಭೇಟಿ ನೀಡುತ್ತಿದ್ದು, ಬಿಜೆಪಿ ರಾಷ್ಟ್ರಾಧ್ಯಕ್ಷ ಜೆಪಿ ನಡ್ಡಾ ಫೆ.20 ರಂದು ಶೃಂಗೇರಿ ಮಠಕ್ಕೆ ಭೇಟಿ ನೀಡಲಿದ್ದಾರೆ.

ಫೆ.20 ರಂದು ರಾತ್ರಿ ಶೃಂಗೇರಿಯಲ್ಲಿ ತಂಗಲಿರುವ ಜೆಪಿ ನಡ್ಡಾ, ಶಾರದಾಂಬೆಯ ದರ್ಶನದ ಬಳಿಕ ಜಗದ್ಗುರುಗಳನ್ನು ಭೇಟಿ ಮಾಡಲಿದ್ದಾರೆ.

ಜಗದ್ಗುರುಗಳ ಭೇಟಿಗೆ ಜೆಪಿ ನಡ್ಡಾ 20 ನಿಮಿಷಗಳ ಕಾಲಾವಕಾಶ ಕೋರಿದ್ದಾರೆ. ಶೃಂಗೇರಿ ಮಠದ ಮೇಲೆ ದಾಳಿ ಮಾಡಿದ ಪೇಶ್ವೆ ಸಮುದಾಯಕ್ಕೆ ಸಂಬಂಧಪಟ್ಟವರನ್ನು ಬಿಜೆಪಿ ರಾಜ್ಯದಲ್ಲಿ ಸಿಎಂ ಮಾಡಲು ಹೊರಟಿದೆ ಎಂದು ಬಿಜೆಪಿ ವಿರುದ್ಧ ವಾಗ್ದಾಳಿ ನಡೆಸುವ ಭರದಲ್ಲಿ ಮಾಜಿ ಸಿಎಂ ಹೆಚ್ ಡಿ ಕುಮಾರಸ್ವಾಮಿ ಹೇಳಿದ್ದರು.

ಈ ಹಿನ್ನೆಲೆಯಲ್ಲಿ ಜೆಪಿ ನಡ್ಡಾ ಶೃಂಗೇರಿಗೆ ಭೇಟಿ ನೀಡಿ ಜಗದ್ಗುರುಗಳೊಂದಿಗೆ ಮಾತನಾಡಲು ಮುಂದಾಗಿರುವುದು ಕುತೂಹಲ ಮೂಡಿಸಿದೆ.

## ಜೆಡಿಎಸ್ ನಾಯಕ ಪ್ರಭಾಕರ್ ರೆಡ್ಡಿ ನಿವಾಸದ ಮೇಲೆ ಐಟಿ ದಾಳಿ

ಬೆಂಗಳೂರು: ಆದಾಯ ತೆರಿಗೆ ಇಲಾಖೆ ಅಧಿಕಾರಿಗಳು ಫೆ.15 ರಂದು ಜೆಡಿಎಸ್ ನಾಯಕ ಪ್ರಭಾಕರ ರೆಡ್ಡಿ ನಿವಾಸದ ಮೇಲೆ ದಾಳಿ ನಡೆಸಿದ್ದಾರೆ.

ಎಲೆಕ್ಟ್ರಾನಿಕ್ ಸಿಟಿ ಬಳಿ ಇರುವ ಮೈಲಸಂದ್ರದಲ್ಲಿರುವ ನಿವಾಸದ ಮೇಲೆ ಐಟಿ ದಾಳಿ ನಡೆದಿದ್ದು, ಹೆಚ್ ಎಸ್ ಆರ್ ಲೇಔಟ್ ನಲ್ಲಿರುವ ಕಚೇರಿ, ಕೋಣನಕುಂಟೆಯಲ್ಲಿರುವ ಫ್ಲಾಟ್ ಮೇಲೆಯೂ ದಾಳಿ ನಡೆದಿದೆ.

ಪ್ರಭಾಕರ ರೆಡ್ಡಿ ರಿಲಯ್ ಎಸ್ಟೇಟ್ ಉದ್ಯಮಿಯಾಗಿದ್ದು, ಈ ಹಿಂದೆಯೂ ಹಲವು ಬಾರಿ ಅವರ ನಿವಾಸದ ಮೇಲೆ ಐಟಿ ದಾಳಿ ನಡೆದಿತ್ತು, ವಿಧಾನಸಭಾ ಚುನಾವಣೆ-2023 ರಲ್ಲಿ ಪ್ರಭಾಕರ ರೆಡ್ಡಿ ಬೆಂಗಳೂರು ದಕ್ಷಿಣದಿಂದ ಟಿಕೆಟ್ ಆಕಾಂಕ್ಷಿಯಾಗಿದ್ದಾರೆ.

ಪ್ರಭಾಕರ್ ರೆಡ್ಡಿ ಉದ್ಯಮಕ್ಕೆ ಸಂಬಂಧಿಸಿದ ದಾಖಲೆಗಳನ್ನು ಅಧಿಕಾರಿಗಳು ಪರಿಶೀಲಿಸುತ್ತಿದ್ದಾರೆ. ವಿಧಾನಸಭಾ ಚುನಾವಣೆ ಹಿನ್ನೆಲೆಯಲ್ಲಿ ಈ ದಾಳಿ ಮಹತ್ವ ಪಡೆದು-ಕೊಂಡಿದ್ದರೆ.

ಚುನಾವಣೆ ಸಂದರ್ಭದಲ್ಲಿ ಇಂತಹ ದಾಳಿಗಳು ಸಾಮಾನ್ಯ ಎಂದು ಜೆಡಿಎಸ್ ನಾಯಕ, ಮಾಜಿ ಸಿಎಂ ಕುಮಾರಸ್ವಾಮಿ ಹೇಳಿದ್ದಾರೆ.

## ಕಲುಷಿತ ನೀರು ಸೇವಿಸಿ ಮಹಿಳೆಯರಿಬ್ಬರ ಸಾವು, 34ಕ್ಕೂ ಹೆಚ್ಚು ಮಂದಿ ಅಸ್ವಸ್ಥ, ಆಸ್ಪತ್ರೆಗೆ ದಾಖಲು

ಯಾದಗಿರಿ: ಕಳೆದ 24 ಗಂಟೆಗಳಲ್ಲಿ ಗುರುಮಠಕಲ್ ತಾಲೂಕಿನ ಅನುಪುರ ಗ್ರಾಮದಲ್ಲಿ ಕಲುಷಿತ ನೀರು ಸೇವಿಸಿ ಇಬ್ಬರು ಸಾವನ್ನಪ್ಪಿದ್ದು, 34 ಮಂದಿ ಅಸ್ವಸ್ಥರಾಗಿದ್ದಾರೆ.

ಯಾದಗಿರಿ ಜಿಲ್ಲಾ ಆರೋಗ್ಯಾಧಿಕಾರಿ ಡಾ.ಗುರುರಾಜ ಹಿರೇಗೌಡರ ಅವರು ದೂರವಾಣಿ ಮೂಲಕ ಮಾತನಾಡಿ, ಕಳೆದ 24 ಗಂಟೆಗಳಲ್ಲಿ ಗುರುಮಠಕಲ್ ತಾಲೂಕಿನ ಅನಪುರ ಗ್ರಾಮದಲ್ಲಿ ಕಲುಷಿತ ನೀರು ಸೇವಿಸಿ ಮಕ್ಕಳು ಸೇರಿದಂತೆ 34 ಮಂದಿ ಅಸ್ವಸ್ಥರಾಗಿದ್ದಾರೆ. ಈ ಪೈಕಿ 15 ಮಂದಿಯನ್ನು ಯಾದಗಿರಿ ಜಿಲ್ಲಾ ಸರ್ಕಾರಿ ಆಸ್ಪತ್ರೆಗೆ ದಾಖಲಿಸಲಾಗಿದೆ. ಉಳಿದವರನ್ನು ಅನುಪುರ ಗ್ರಾಮದ ಸಮೀಪದ ನಾರಾಯಣಪೇಟೆ ಆಸ್ಪತ್ರೆಗೆ ದಾಖಲಿಸಲಾಗಿದೆ. ಮಂಗಳವಾರ ಬೆಳಗ್ಗೆ ನಾರಾಯಣಪೇಟೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾಗ 35 ವರ್ಷದ ಮಹಿಳೆ ಸಾವಿತ್ರಮ್ಮ ಮೃತಪಟ್ಟಿದ್ದಾರೆ. ಇಂದು ನಾರಾಯಣಪೇಟೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದ 72 ವರ್ಷದ ಸಾಯಮ್ಮ ಅವರ ಸ್ಥಿತಿ ಹದಗೆಟ್ಟಿದ್ದರಿಂದ ಅವರನ್ನು ತೆಲಂಗಾಣ ರಾಜ್ಯದ ಮಹೆಬೂಬ್‌ನಗರದ ಆಸ್ಪತ್ರೆಗೆ ಸ್ಥಳಾಂತರಿಸಲಾಗಿತ್ತು ಆದ-ರೆ ಚಿಕಿತ್ಸೆ ಫಲಕಾರಿಯಾಗದೆ ಮೃತಪಟ್ಟಿದ್ದಾರೆ. ಅಗತ್ಯವಿರುವವರಿಗೆ ಚಿಕಿತ್ಸೆ ನೀಡಲು 3 ವೈದ್ಯರನ್ನು ಒಳಗೊಂಡ 15 ಸದಸ್ಯರ ವೈದ್ಯಕೀಯ ತಂಡವನ್ನು ಅನುಪುರಕ್ಕೆ ಕಳುಹಿಸಲಾಗಿದೆ. ಬುಧವಾರ ಮಧ್ಯಾಹ್ನದಿಂದ ಯಾವುದೇ ಹೊಸ ಪ್ರಕರಣಗಳು ವರದಿಯಾಗಿಲ್ಲ ಎಂದು ಅನುಪುರದಲ್ಲಿ ಬೀಡುಬಿಟ್ಟಿರುವ ಹಿರೇಗೌಡರು ತಿಳಿಸಿದ್ದಾರೆ. ಡಾ.ಹಿರೇಗೌಡರ ಮಾತನಾಡಿ, ಅನುಪುರ ಗ್ರಾಮಕ್ಕೆ ನೀರಿನ ಟ್ಯಾಂಕ್ ನಿಂದ ಪೈಪ್ ಲೈನ್ ಮೂಲಕ ಕುಡಿಯುವ ನೀರು ಪೂರೈಸಲಾಗುತ್ತಿದೆ. ಮಾರೆಮ್ಮ ದೇವಸ್ಥಾನ ಹಾಗೂ ಎಸ್‌ಸಿ ಓಣಿ ಬಳಿ 2 ಕಡೆ ಪೈಪ್‌ನಿಂದ ನೀರು ಸೋರಿಕೆಯಾಗಿದೆ. ಪೈಪ್ ಲೈನ್ ದುರಸ್ತಿ ಕಾರ್ಯ ಆರಂಭವಾಗಿದೆ ಎಂದರು.

## 75 ರಷ್ಟು ಹಣವನ್ನು ದೇಶಿ ಸಂಸ್ಥೆಗಳಿಂದ ರಕ್ಷಣಾ ಸಾಮಗ್ರಿಗಳ ಖರೀದಿಗೆ ಬಳಕೆ: ರಾಜನಾಥ್ ಸಿಂಗ್



ಬೆಂಗಳೂರು: 2023-24ನೇ ಸಾಲಿನಲ್ಲಿ ರಕ್ಷಣಾ ಇಲಾಖೆಗೆ ಹಂಚಿಕೆಯಾಗಿರುವ ಒಟ್ಟು ಬಂಡವಾಳದಲ್ಲಿ ಶೇಕಡಾ 75 ರಷ್ಟು ಹಣವನ್ನು ದೇಶಿ ಸಂಸ್ಥೆಗಳಿಂದ ರಕ್ಷಣಾ ಸಾಮಗ್ರಿಗಳ ಖರೀದಿಗೆ ಖರ್ಚು ಮಾಡಲಾಗುವುದು ಎಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರು ಬುಧವಾರ ಹೇಳಿದ್ದಾರೆ. ಈ ನಿರ್ಧಾರವು ಭಾರತೀಯ ರಕ್ಷಣಾ ಸಾಮಾಗ್ರಿಗಳ ತಯಾರಕರಿಗೆ ಮತ್ತು ಸಲಕರಣೆಗಳ ಖರೀದಿಗೆ ಸುಮಾರು 100,000 ಕೋಟಿ ರೂಪಾಯಿಗಳನ್ನು ಮೀಸಲಿಡುತ್ತದೆ ಎಂದು ರಕ್ಷಣಾ ಸಚಿವರು ತಿಳಿಸಿದರು.

ಏರೋ ಇಂಡಿಯಾ 2023 ರಲ್ಲಿ ಭಾಗವಹಿಸಿದ ಹೆಚ್ಚಿನ ಸಂಖ್ಯೆಯ ರಕ್ಷಣಾ ಕಂಪನಿಗಳ ಜೊತೆ ಹಲವಾರು ಒಪ್ಪಂದಗಳು ಮತ್ತು ತಂತ್ರಜ್ಞಾನ ವರ್ಗಾವಣೆ ಒಪ್ಪಂದಗಳನ್ನು ಮಾಡಿಕೊಳ್ಳಲಾಗಿದೆ ರಾಜನಾಥ್ ಸಿಂಗ್ ಹೇಳಿದ್ದಾರೆ.

ಇದು ಅತ್ಯಂತ ಮಹತ್ವದ ನಿರ್ಧಾರವಾಗಿದ್ದು, ಇದು ದೇಶೀಯ ರಕ್ಷಣಾ ಉತ್ಪಾದನಾ ವಲಯವನ್ನು ಮತ್ತಷ್ಟು ಬಲಪಡಿಸುತ್ತದೆ" ಎಂದು ಸಿಂಗ್ ತಿಳಿಸಿದ್ದಾರೆ.

ಏರೋ ಇಂಡಿಯಾದ ಸಂದರ್ಭದಲ್ಲಿ ಸಹಿ ಹಾಕಲಾದ ಎಂಒಯುಗಳು ಮತ್ತು ತಂತ್ರಜ್ಞಾನ ವರ್ಗಾವಣೆ ಒಪ್ಪಂದಗಳು ದೇಶದ ರಕ್ಷಣಾ ಉತ್ಪಾದನೆಯ ಹೊಸ ಯುಗ ಆರಂಭಕ್ಕೆ ಸಹಕಾರಿಯಾಗಲಿದೆ ಎಂದು ಅವರು ಹೇಳಿದ್ದಾರೆ.

## ಗ್ರಾಮ ಪಂಚಾಯಿತಿಗಳಲ್ಲಿ ಖಾಲಿ ಇರುವ ಪುನರ್ವಸತಿ ಕಾರ್ಯಕರ್ತರ ಹುದ್ದೆಗಳ ನೇಮಕಾತಿ

ಬೆಳಗಾವಿ : ಬೆಳಗಾವಿ ಜಿಲ್ಲೆಯ ಖಾನಾಪೂರ ಮತ್ತು ರಾಯಬಾಗ ತಾಲೂಕಿನ ವ್ಯಾಪ್ತಿಯ ಗ್ರಾಮ ಪಂಚಾಯಿತಿಗಳಲ್ಲಿ ಖಾಲಿ ಇರುವ ಪುನರ್ವಸತಿ ಕಾರ್ಯಕರ್ತರ (ವ್ಹಿ,ಆರ್,ಡಬ್ಲ್ಯೂ) ಹುದ್ದೆಗಳ ನೇಮಕಾತಿಗಾಗಿ ಆಯಾ ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯ ಅರ್ಹ ವಿಕಲಚೇತನ ಅಭ್ಯರ್ಥಿಗಳಿಂದ ಇಲಾಖೆಯ ಗ್ರಾಮೀಣ ಪುನರ್ವಸತಿ ಯೋಜನೆ ಅಡಿ ಮಾಸಿಕ 9000 ರೂಗಳ ಗೌರವಧನ ಆಧಾರದ ಮೇಲೆ ನೇಮಕಾತಿಗಾಗಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಆಸಕ್ತಿಯುಳ್ಳ ವಿಕಲಚೇತನ ಅಭ್ಯರ್ಥಿಗಳು ಫೆಬ್ರವರಿ 17, 2023 ರ ಸಂಜೆ 5 ಗಂಟೆಗಳ ಒಳಗಾಗಿ ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲೂಕು ಪಂಚಾಯತ ಕಾರ್ಯಾಲಯ ಖಾನಾಪೂರ ಮತ್ತು ರಾಯಬಾಗ ಇವರಿಗೆ ಅಗತ್ಯ ದಾಖಲಾತಿಗಳೊಂದಿಗೆ ಅರ್ಜಿ ಸಲ್ಲಿಸಲು ಕೋರಲಾಗಿದೆ.

ಖಾನಾಪೂರ ತಾಲೂಕಿನ ನಾಗರಗಾಳಿ ಗ್ರಾಮ ಪಂಚಾಯಿತಿಯಲ್ಲಿ 1 ಹುದ್ದೆ ಖಾಲಿ ಇರುತ್ತದೆ. ರಾಯಬಾಗ ತಾಲೂಕಿನ ಬೆಕ್ಕೇರಿ(1), ಮೊರಬ(1) ಹಾಗೂ ಹುಬ್ಬರವಾಡಿ(1) ಗ್ರಾಮ ಪಂಚಾಯಿತಿಯಲ್ಲಿ ತಲಾ ಒಂದು ಹುದ್ದೆಗಳು ಖಾಲಿ ಇರುತ್ತವೆ.

**ಷರತ್ತುಗಳು:**

ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ವಿಕಲಚೇತನರಾಗಿದ್ದು, ಶೇಕಡ 40 ರಷ್ಟು ವಿಕಲತೆ ಪ್ರಮಾಣ ಹೊಂದಿರತಕ್ಕದ್ದು, ಗ್ರಾಮ ಪಂಚಾಯತಿಗಳ ವ್ಯಾಪ್ತಿಗೊಳಪಟ್ಟಿರಬೇಕು. ಅರ್ಜಿದಾರರು ಕನಿಷ್ಠ ಎಸ್ಸೆಸ್ಸೆಲ್ಸಿ ಉತ್ತೀರ್ಣ ಅಥವಾ ಅನುತ್ತೀರ್ಣರಾಗಿದ್ದು, ಕಂಪ್ಯೂಟರ್ ಜ್ಞಾನ ಹೊಂದಿರಬೇಕು. ಮತ್ತು ಅರ್ಜಿ ಸಲ್ಲಿಕೆಯ ಕೊನೆಯ ದಿನಾಂಕ ಫೆಬ್ರುವರಿ 17, 2023 ಕ್ಕೆ ಕನಿಷ್ಠ 18 ವರ್ಷ ಹಾಗೂ ಗರಿಷ್ಠ 45 ವರ್ಷ ವಯೋಮಿತಿಯಲ್ಲಿರಬೇಕು.

ವಿಕಲಚೇತನ ಮಹಿಳಾ, ಪ. ಜಾತಿ ಮತ್ತು ಪ. ಪಂಗಡದ ಅಭ್ಯರ್ಥಿಗಳು ಹಾಗೂ ಇಲಾಖೆಯ ಯೋಜನೆಗಳ ಬಗ್ಗೆ ಜ್ಞಾನ ಹೊಂದಿರುವ ಅಭ್ಯರ್ಥಿಗಳಿಗೆ ಆದ್ಯತೆ ನೀಡಲಾಗುವುದು ಎಂದು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ನಾಮದೇವ ಬಿಲ್ಕರ್ ಇವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮೆಟ್ರಿಕ್-ನಂತರದ ವಿದ್ಯಾರ್ಥಿವೇತನ ಶುಲ್ಕ ವಿನಾಯಿತಿ, ವಿದ್ಯಾಸಿರಿ-ಊಟ ಮತ್ತು ವಸತಿ ಸಹಾಯ ಯೋಜನೆ ಸೌಲಭ್ಯ

ಬೆಳಗಾವಿ: ನಗರದ ಮೆಟ್ರಿಕ್ ನಂತರದ ಕೋರ್ಸುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಅರ್ಹ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಹಾಗೂ ಪ್ರವರ್ಗ-1ರ ಅಲೆಮಾರಿ/ಅರೆಅಲೆಮಾರಿ ವಿದ್ಯಾರ್ಥಿಗಳಿಂದ, 2022-23ನೇ ಸಾಲಿಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೂಲಕ ನೀಡಲಾಗುತ್ತಿರುವ "ಮೆಟ್ರಿಕ್-ನಂತರದ ವಿದ್ಯಾರ್ಥಿವೇತನ", "ಶುಲ್ಕ ವಿನಾಯಿತಿ", "ವಿದ್ಯಾಸಿರಿ-ಊಟ ಮತ್ತು ವಸತಿ ಸಹಾಯ ಯೋಜನೆ", ಸೌಲಭ್ಯಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದ್ದು, ಜನವರಿ 31/2023ಕ್ಕೆ ಅರ್ಜಿ ಸಲ್ಲಿಸುವ ಅಂತಿಮ ದಿನಾಂಕವನ್ನು ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಫೆ,28/2023 ರವರೆಗೆ ವಿಸ್ತರಿಸಲಾಗಿದೆ.

ಹೆಚ್ಚಿನ ಮಾಹಿತಿಗಾಗಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬೇಕಾದ ವೆಬ್‌ಸೈಟ್ https://ssp.postmatric.karnataka.gov.in ಕಾರ್ಯಕ್ರಮಗಳ ವಿವರ ಅರ್ಹತೆ ಸಲ್ಲಿಸಬೇಕಾದ ದಾಖಲೆಗಳು ಹಾಗೂ ವಿದ್ಯಾರ್ಥಿವೇತನಕ್ಕೆ ಸಂಬಂಧಿಸಿದ ಸರ್ಕಾರಿ ಅದೇಶಗಳ ಬಗ್ಗೆ ಮಾಹಿತಿಗಾಗಿ ನೀಡಬೇಕಾದ ವೆಬ್ ಸೈಟ್ https://bcwd.karnataka.gov.in , ಇಲಾಖಾ ಸಹಾಯವಾಣಿ ಸಂಖ್ಯೆ : 8050770005. ಹಾಗೂ ಇಲಾಖಾ ಇಮೇಲ್ bcwdhelpline@gmail.com ಹಾಗೂ ರಾಜ್ಯ ವಿದ್ಯಾರ್ಥಿವೇತನ ತಂತ್ರಾಂಶದ ಸಹಾಯವಾಣಿ ಸಂಖ್ಯೆ: 080-35254757 ಇಮೇಲ್: postmetrichelp@karnataka.gov.in ಗೆ ಸಂಪರ್ಕಿಸಬಹುದು ಎಂದು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿಗಳಾದ ಲಕ್ಷ್ಮಣ ಬಬಲಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಫೆ. 25 ರವರೆಗೆ ಬೋಗಸ್ ಕಾರ್ಮಿಕ ಕಾರ್ಡ್ ನೋಂದಣಿ ರದ್ಧತಿ ಅಭಿಯಾನ

ಕೊಪ್ಪಳ: ಜಿಲ್ಲಾ ಕಾರ್ಮಿಕ ಇಲಾಖೆಯಿಂದ ನಕಲಿ ದಾಖಲಾತಿ ಸೃಷ್ಟಿಸಿ ಗುರುತಿನ ಚೀಟಿ ಪಡೆದ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರಲ್ಲದವರ ಕಾರ್ಡುಗಳನ್ನು ರದ್ದುಪಡಿಸಲು ಫೆಬ್ರವರಿ 25 ರವರೆಗೆ ಬೋಗಸ್ ಕಾರ್ಡ್ ನೋಂದಣಿ ರದ್ಧತಿ ಅಭಿಯಾನ ಕೈಗೊಳ್ಳಲಾಗಿದೆ.

ನಕಲಿ ದಾಖಲಾತಿ ಸೃಷ್ಟಿಸಿ ಗುರುತಿನ ಚೀಟಿ ಪಡೆದಿರುವ ಫಲಾನುಭವಿಗಳು ಸ್ವ-ಇಚ್ಛೆಯಿಂದ ಮಂಡಳಿಗೆ ಗುರುತಿನ ಚೀಟಿಯನ್ನು ಹಿಂತಿರುಗಿಸಿದಿದ್ದಲ್ಲಿ ಮುಂದಿನ ಕಾನೂನು ಕ್ರಮವನ್ನು ಕೈಬಿಡಲಾಗುವುದು ಎಂದು ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ, ಬೆಂಗಳೂರು ರವರು ಆದೇಶ ಹೊರಡಿಸಿದ್ದಾರೆ. ಈ ಹಿನ್ನೆಲೆಯಲ್ಲಿ ಪರಿಶೀಲನೆಗೆ ಒಳಗಾದ ಫಲಾನುಭವಿಯು ನಕಲು ದಾಖಲಾತಿಯನ್ನು ಸೃಷ್ಟಿಸಿ ನೋಂದಣಿಯಾಗಿರುವುದು ಕಂಡುಬಂದಲ್ಲಿ, ಸರ್ಕಾರದ ಅಧಿಸೂಚನೆ 2022ರ ಆಗಸ್ಟ್ 18ರ ತಿದ್ದುಪಡಿ ನಿಯಮ-20(7) ರನ್ವಯ ಕಾರ್ಮಿಕರ ನೋಂದಣಾಧಿಕಾರಿಯು ತನ್ನ ಅಧಿಕಾರವನ್ನು ಚಲಾಯಿಸಿ, ಸೇವಾಸಿಂಧು ತಂತ್ರಾಂಶದಲ್ಲಿ ಅಂತಹ ಫಲಾನುಭವಿಯ ನೋಂದಣಿಯನ್ನು 'ಫ್ರೀಜ್' ಮಾಡುವುದು ಮತ್ತು ಆ ಫಲಾನುಭವಿಯ ವೈಯಕ್ತಿಕ ಕಡತದಲ್ಲೂ ರದ್ಧತಿಯನ್ನು ದಾಖಲಿಸುವುದಾಗಿದೆ.

ಅಭಿಯಾನ ಸಂದರ್ಭದಲ್ಲಿ ಬೋಗಸ್ ಫಲಾನುಭವಿಯು ಸ್ವ-ಇಚ್ಛೆಯಿಂದ ನಕಲು ನೋಂದಣಿಯನ್ನು ಒಪ್ಪಿಕೊಂಡು ಗುರುತಿನ ಚೀಟಿಯನ್ನು ಹಿಂದಿರುಗಿಸದಿದ್ದಲ್ಲಿ, ಅವರಿಂದ ಒಪ್ಪಿಗೆ ಪತ್ರವನ್ನು ಪಡೆದು ಅವರ ಮೇಲಿನ ಮುಂದಿನ ಕಾನೂನು ಕ್ರಮವನ್ನು ಕೈಬಿಡುವುದು ಮತ್ತು ನೋಂದಣಿ ದಾಖಲೆಗಳನ್ನು ಆನ್‌ಲೈನ್‌ನಲ್ಲಿ ಫ್ರೀಜ್/ ರದ್ದು ಮಾಡುವುದು ಮತ್ತು ಕಡತದಲ್ಲಿ ರದ್ದುಗೊಳಿಸುವುದು ಹಾಗೂ ಈಗಾಗಲೇ ಪಡೆದಿರುವ ವಿವಿಧ ಸೌಲಭ್ಯಗಳನ್ನು ವಸೂಲಿ ಮಾಡಲು ಕ್ರಮಕೈಗೊಳ್ಳುವುದು.

ಅಭಿಯಾನದ ನಂತರವು ಸಂಬಂಧಪಟ್ಟ ತಾಲ್ಲೂಕಿನ ಕಾರ್ಮಿಕ ನಿರೀಕ್ಷಕರು ಅಥವಾ ನೋಂದಣಾಧಿಕಾರಿಯು ತಮ್ಮ ಕಾರ್ಯವ್ಯಾಪ್ತಿಯಲ್ಲಿ ಬೋಗಸ್ ಕಾರ್ಡುಗಳನ್ನು ಗುರುತಿಸಿ ರದ್ದುಗೊಳಿಸುವ ಕಾರ್ಯವನ್ನು ನಿರಂತರವಾಗಿ ನಿರ್ವಹಿಸುವರು.

ಈ ನಿಟ್ಟಿನಲ್ಲಿ ಫೆಬ್ರವರಿ 25 ರವರೆಗೆ ಬೋಗಸ್ ಕಾರ್ಡು ನೋಂದಣಿ ರದ್ಧತಿ ಅಭಿಯಾನ ನಡೆಯಲಿದೆ ಎಂದು ಜಿಲ್ಲಾ ಕಾರ್ಮಿಕ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕನ್ನಡದ ಮಹಾಪುರುಷರನ್ನು ಮರೆತ ತ್ರೀಮೂರ್ತಿಗಳು!!

ಬೆಳಗಾವಿ: ಚುನಾವಣೆ ಸಮೀಪಿಸುತ್ತಿದ್ದಂತೆ ಬೆಳಗಾವಿ ಜಿಲ್ಲೆಯಲ್ಲಿ ಮರಾಠಿ ಓಲೈಕೆ ಜೋರಾ-ಗಿಯೇ ನಡೆದಿದೆ. ಇದರ ಪರಿಣಾಮ ವಿವಿಧ ಕಡೆಗಳಲ್ಲಿ ಶಿವಾಜಿ ಮಹಾರಾಜರ ಪುತ್ಥಳಿಗಳು ಪ್ರತಿಷ್ಠಾಪನೆಗೊಳ್ಳುತ್ತಿವೆ. ಮರಾಠಿ ಮತದಾರರು ನಿರ್ಣಾಯಕರಾಗಿರುವ ಬೆಳಗಾವಿಯ ಮೂರು ವಿಧಾನಸಭೆ ಕ್ಷೇತ್ರಗಳಲ್ಲಿ ಬಿಜೆಪಿ ಹಾಗೂ ಕಾಂಗ್ರೆಸ್ ಪಕ್ಷದ ಶಾಸಕರಂತೂ ಕ್ಷೇತ್ರಗಳಲ್ಲಿ ಬೇರೆ ಮತದಾರರರೆ ಇಲ್ಲವೇನೋ ಎಂಬಂತೆ ಮರಾಠಾ ಮತರದಾರರ ಮನಗೆಲ್ಲಲು ಪೈಪೋಟಿ ನಡೆಸಿದ್ದಾರೆ.



**ಕನ್ನಡದ ಮಹಾಪುರುಷರನ್ನು ಮರೆತ ತ್ರೀಮೂರ್ತಿಗಳು**

ಮರಾಠಿಗರ ಮನಗೆಲ್ಲುವ ನಿಟ್ಟಿನಲ್ಲಿ ಬೆಳಗಾವಿ ದಕ್ಷಿಣ, ಬೆಳಗಾವಿ ಉತ್ತರ ಹಾಗೂ ಬೆಳಗಾವಿ ಗ್ರಾಮೀಣ ಕ್ಷೇತ್ರಗಳ ಶಾಸಕರು ಛತ್ರಪತಿ ಶಿವಾಜಿ ಮಹಾರಾಜರಿಗೆ ಬಹುಪರಾಕ್ ಹಾಕುತ್ತಿದ್ದಾರೆ. ಗ್ರಾಮೀಣ ಕ್ಷೇತ್ರದ ಶಾಸಕಿ ಲಕ್ಷ್ಮೀ ಹೆಬ್ಬಾಳ್ಕರ್ ರಾಜಹಂಸಘಡದಲ್ಲಿ ಶಿವಾಜಿ ಮಹಾರಾಜರ ಬೃಹತ್ ಪ್ರತಿಮೆ ನಿರ್ಮಿಸಿದ್ದು, ಭರ್ಜರಿ ಉದ್ಘಾಟನಾ ಸಮಾರಂಭ ಆಯೋಜಿಸಿ ಮರಾಠಿಗರ ಮನಗೆಲ್ಲುವ ತಂತ್ರ ಹೆಣೆದಿದ್ದಾರೆ. ಇನ್ನು ಬೆಳಗಾವಿ ದಕ್ಷಿಣ ಮತಕ್ಷೇತ್ರದ ಶಾಸಕ ಅಭಯ ಪಾಟೀಲ್ ಸಹ ಛತ್ರಪತಿ ಶಿವಾಜಿ ಮಹಾರಜರ ಜೀವನ ಚರಿತ್ರೆ ಮಹಾರಾಜರ ಇತಿಹಾಸದ ಗತವೈಭವವನ್ನು ಬಿಂಬಿಸುವ ಶಿವಚರಿತ್ರೆ ನಿರ್ಮಿಸಿದ್ದು ಇದರ ಉದ್ಘಾಟನೆಗೆ ಭರ್ಜರಿ ತಯಾರಿ ನಡೆಸಿದ್ದಾರ.

ಬೆಳಗಾವಿ ಉತ್ತರದ ಶಾಸಕ ಅನಿಲ ಬೆನಕೆ ಸಂಭಾಜಿ ವೃತ್ತದಲ್ಲಿ ಶಿವನೇರಿ ಕೋಟೆ ಮಾದರಿಯಲ್ಲಿ ಅಭಿವೃದ್ಧಿಪಡಿಸಿ ಈ ವೃತ್ತವನ್ನು ಲೋಕಾರ್ಪಣೆ ಮಾಡಿ, ಮರಾಠಿಗರಿಗೆ ಜೈ ಎಂದಿದ್ದಾರೆ.

**ನೆನಪಾಗದ ಕಿತ್ತೂರು ಚನ್ನಮ್ಮ, ಸಂಗೊಳ್ಳಿ ರಾಯಣ್ಣ;**

ಶಿವಾಜಿ ಮಹಾರಾಜರಿಗೆ ಏಕಿಷ್ಟು ಮಹತ್ವ ಅಂತಲ್ಲ. ನಗರದಲ್ಲಿ ಶಿವಾಜಿ ಮಹಾರಾಜರ ಹಾಗೆಯೇ ಈ ದೇಶದ ಸ್ವಾತಂತ್ರ್ಯಕ್ಕಾಗಿ ಪ್ರಾಣತ್ಯಾಗ ಮಾಡಿದ ಅನೇಕ ಮಹನೀಯರ ವರ್ತುಳಗಳಿವೆ. ಇವುಗಳೇಕೆ ಈ ಶಾಸಕರ ಕಣ್ಣಿಗೆ ಬೀಳುತ್ತಿಲ್ಲ ಎಂಬುದು ಯಕ್ಷ ಪ್ರಶ್ನೆಯಾಗಿದೆ. ನಗರದಲ್ಲಿ ವೀರರಾಣಿ ಕಿತ್ತೂರು ಚನ್ನಮ್ಮನ ವರ್ತುಳ ಇಡೀ ರಾಜ್ಯದ ಗಮನ ಸೆಳೆಯುತ್ತದೆ. ಆದರೆ, ಯಾವುದೇ ಶಾಸಕರು ಚನ್ನಮ್ಮಳ ವೃತ್ತವನ್ನು ಮತ್ತಷ್ಟು ಅಭಿವೃದ್ಧಿಪಡಿಸಲು ಮನಸ್ಸು ಮಾಡುತ್ತಿಲ್ಲ. ಚನ್ನಮ್ಮಳ ಬಲಗೈ ಬಂಟ ಶೂರ ಸಂಗೊಳ್ಳಿ ರಾಯಣ್ಣನ ವರ್ತುಳವಂತೂ ಇದ್ದೂ ಇಲ್ಲದಂತಿದೆ. ಕನಿಷ್ಟಪಕ್ಷ ವರ್ತುಳದಲ್ಲಿ ರಾಯಣ್ಣನ ಮೂರ್ತಿಯನ್ನಾದರೂ ಪ್ರತಿಷ್ಠಾಪಿಸುವ ಗೋಜಿಗೆ ಹೋಗಿಲ್ಲ. ಪೀರಣವಾಡಿಯಲ್ಲಿ ಅಭಿಮಾನಿಗಳೇ ಸಂಗೊಳ್ಳಿ ರಾಯಣ್ಣ ಪುತ್ಥಳಿ ನಿರ್ಮಿಸಿದ್ದರೂ ವಿವಾದ ತಲೆದೋರಿ ಯಾವುದೇ ಅಭಿವೃದ್ಧಿ ಕಾರ್ಯಗಳು ನಡೆದಿಲ್ಲ.

ಪಕ್ಕದ ಕೊಲ್ಲಾಪುರದಲ್ಲೂ ಇಲ್ಲ ಬೆಳಗಾವಿಯಷ್ಟು ಪ್ರತಿಮೆ: ಅಚ್ಚರಿಯ ಸಂಗತಿ ಎಂದರೆ ಕೆಲವು ಅಂಕಿಅಂಶಗಳ ಪ್ರಕಾರ ಮಹಾರಾಷ್ಟ್ರದ ಪ್ರಮುಖ ನಗರವೆನಿಸಿಕೊಂಡಿರುವ ಬೆಳಗಾವಿಯ ನೆರೆ-ಯ ನಗರ ಕೊಲ್ಲಾಪುರದಲ್ಲೂ ಸಹ ಬೆಳಗಾವಿ ನಗರದಲ್ಲಿ ಇರುವಷ್ಟು ಶಿವಾಜಿ ಮಹಾರಾಜರ ಪುತ್ಥಳಿಗಳು ಇಲ್ಲವೆಂಬ ಅಂಶ ಕಂಡುಬರುತ್ತದೆ. ಇದನ್ನು ನೋಡಿದರೆ ಸ್ಥಳೀಯ ಶಾಸಕರು ಯಾವ ಪ್ರಮಾಣದಲ್ಲಿ ಮರಾಠಿ ಮತಗಳ ಓಲೈಕೆಗೆ ಪೈಪೋಟಿ ನಡೆಸಿದ್ದಾರೆ ಎಂಬುದು ಗೊತ್ತಾಗುತ್ತದೆ.ಬೆಳಗಾವಿಯ ಕನ್ನಡಿಗರು ಛತ್ರಪತಿ ಶಿವಾಜಿ ಮಹಾರಾಜರ,ಸಂಬಾಜಿ ಮಹಾರಾಜರ ಪ್ರತಿಮೆಗಳ ನಿರ್ಮಾಣಕ್ಕೆ ಯಾವತ್ತೂ ವಿರೋಧ ಮಾಡಿಲ್ಲ.ಎಂದಿಗೂ ವಿರೋಧ ಮಾಡುವುದು ಇಲ್ಲ.ಆದ್ರೆ ಜನ ಪ್ರತಿನಿಧಿಗಳು ಕನ್ನಡದ ಮಹಾಪುರುಷರನ್ನು ನಿರ್ಲಕ್ಷ್ಯ ಮಾಡಿದ್ರೆ ಸಹಿಸುವದಿಲ್ಲ.

**ಕನ್ನಡಿಗರು ಲೆಕ್ಕಕ್ಕೇ ಇಲ್ಲವೇ ? :**

ಈ ಮೂರು ಕ್ಷೇತ್ರಗಳಲ್ಲಿ ಮರಾಠಿ ಮತಗಳು ನಿರ್ಣಾಯಕವಾಗಿದ್ದರೂ ಕನ್ನಡಿಗರೂ ಸಹ ಗಣನೀಯ ಪ್ರಮಾಣದಲ್ಲಿ ಇದ್ದಾರೆ. ಬೆಳಗಾವಿ ಉತ್ತರ ಹಾಗೂ ಗ್ರಾಮೀಣ ಮತಕ್ಷೇತ್ರಗಳಲ್ಲಿ ಕನ್ನಡಿಗ ಮತದಾರರೂ ನಿರ್ಣಾಯಕ ಸ್ಥಾನದಲ್ಲಿದ್ದಾರೆ. ಆದರೂ ಇಲ್ಲಿನ ಜನಪ್ರತಿಧಿನಿಗಳು ಕನ್ನಡಿಗರು ಲೆಕ್ಕಕ್ಕೇ ಇಲ್ಲದಂತೆ ವರ್ತಿಸುತ್ತಿದ್ದಾರೆ. ಇದಕ್ಕೆ ಪ್ರಮುಖ ಕಾರಣ ಕನ್ನಡಗರಲ್ಲಿನ ಒಗ್ಗಟ್ಟು ಕೊರತೆ. ಇದನ್ನು ಚೆನ್ನಾಗಿ ಅರಿತಿರುವ ಈ ಜನಪ್ರತಿನಿಧಿಗಳು ಕನ್ನಡಿಗರ ಮತಗಳನ್ನು ಸೆಳೆಯಲು ವಿಶೇಷವಾದ ಯಾವುದೇ ಪ್ರಯತ್ನ ನಡೆಸುತ್ತಿಲ್ಲ. ತಾಯ್ನಾಡಿಗಾಗಿ, ಜೀವನವನ್ನೇ ಸಮರ್ಪಿಸಿದ ವೀರನಾರಿ ಕಿತ್ತೂರು ಚನ್ನಮ್ಮ, ಶೂರ ಸಂಗೊಳ್ಳಿ ರಾಯಣ್ಣ, ಜಗಜ್ಯೋತಿ ಬಸವಣ್ಣ ಮಹರ್ಷಿ ವಾಲ್ಮೀಕಿ, ಡಾ.ಬಿ.ಆರ್. ಅಂಬೇಡ್ಕರ್, ಮುಂತಾದವರ ಹೆಸರು ಜಯಂತಿಗಳಲ್ಲಿ ಮಾತ್ರ ಕೇಳಿಬರುತ್ತವೆ.

## 16 ಕೋಟಿ ರೂ. ಆರ್ಡಿಪಿಆರ್ ಇಲಾಖೆಯ ರಸ್ತೆ ಸುಧಾರಣಾ ಕಾಮಗಾರಿಗಳಿಗೆ ಚಾಲನೆ

ಮೂಡಲಗಿ : ರಸ್ತೆಗಳ ಅಭಿವೃದ್ಧಿಗಾಗಿ ಆರ್ಡಿಪಿಆರ್ ಇಲಾಖೆಯಿಂದ 16 ಕೋಟಿ ರೂ. ಅನುದಾನ ಬಿಡುಗಡೆಗೊಂಡಿದ್ದು, ಮಾರ್ಚ ತಿಂಗಳೊಳಗೆ ರಸ್ತೆ ಕಾಮಗಾರಿಗಳನ್ನು ಪೂರ್ಣಗೊಳಿಸುವಂತೆ ಶಾಸಕ, ಕೆಎಂಎಫ್ ಅಧ್ಯಕ್ಷ ಬಾಲಚಂದ್ರ ಜಾರಕಿಹೊಳಿ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಸೋಮವಾರದಂದು ಇಲ್ಲಿಗೆ ಸಮೀಪದ ಗುರ್ಲಾಪೂರ ಕ್ರಾಸ್ ಹತ್ತಿರ 1.30 ಕೋಟಿ ರೂ. ವೆಚ್ಚದ ಗುರ್ಲಾಪೂರ-ಇಟ್ನಾಳ ರಸ್ತೆ ಸುಧಾರಣಾ ಕಾಮಗಾರಿಗೆ ಚಾಲನೆ ನೀಡಿ ಮಾತನಾಡಿದ ಅವರು, ಉತ್ತಮ ಗುಣಮಟ್ಟದ ಕಾಮಗಾರಿಗಳನ್ನು ಕೈಗೊಳ್ಳುವಂತೆ ಸೂಚಿಸಿದರು.



ಕಾಮಗಾರಿಗಳ ವಿವರ : ಯಾದವಾಡ-ಮಾನೋಮ್ಮಿ ರಸ್ತೆ ಸುಧಾರಣೆಗೆ 2.20 ಕೋಟಿ ರೂ, ಮುನ್ಯಾಳ ಗ್ರಾಮದಿಂದ ರಂಗಾಪೂರ ರಸ್ತೆ ಸುಧಾರಣೆಗೆ 1.10 ಕೋಟಿ ರೂ, ಹಳ್ಳೂರ ಕನ್ನಡ ಶಾಲೆಯಿಂದ ಮಹಾಲಿಂಗಪೂರ ರಸ್ತೆ ಸುಧಾರಣೆಗೆ 62.50 ಲಕ್ಷ ರೂ, ಬಳೋಬಾಳ ಗ್ರಾಮದಿಂದ ಸಂಗನಕೇರಿ-ಯಾದವಾಡ ಮುಖ್ಯ ರಸ್ತೆ ಸುಧಾರಣೆಗೆ 1.10 ಕೋಟಿ ರೂ, ಕೌಜಲಗಿ ಎನ್‌ಎಸ್‌ಎಫ್ ಶಾಲೆಯಿಂದ ಕೊಪ್ಪದ ರಸ್ತೆ ಸುಧಾರಣೆಗೆ 2 ಕೋಟಿ ರೂ, ಚಿಗಡೊಳ್ಳಿ ಗ್ರಾಮದಿಂದ ಬಸವನಗರ ರಸ್ತೆ ಸುಧಾರಣೆಗೆ 1.10 ಕೋಟಿ ರೂ, ಮೆಳವಂಕಿ ಗೌಡನ ಕ್ರಾಸ್ದಿಂದ ಬಸವನಗರ ರಸ್ತೆ ಸುಧಾರಣೆಗೆ 1.10 ಕೋಟಿ ರೂ, ರಡ್ಡೇರಹಟ್ಟಿ-ಯಾದವಾಡ ರಸ್ತೆ ಸುಧಾರಣೆಗೆ 55 ಲಕ್ಷ ರೂ, ನಾಗನೂರ-ಕಂಕಣವಾಡಿ ರಸ್ತೆ ಸುಧಾರಣೆಗೆ 80 ಲಕ್ಷ ರೂ, ಹೊಸಟ್ಟಿ ಕ್ರಾಸದಿಂದ ಕುಲಗೋಡ ರಸ್ತೆ ಸುಧಾರಣೆಗೆ 1.65 ಕೋಟಿ ರೂ, ಕುಲಗೋಡದಿಂದ ಹುಣಶ್ಯಾಳ ಪಿವಾಯ್ ರಸ್ತೆ ಸುಧಾರಣೆಗೆ 55 ಲಕ್ಷ ರೂ, ವಡೇರಹಟ್ಟಿ-ಜೋಕಾನಟ್ಟಿ ರಸ್ತೆ ಸುಧಾರಣೆಗೆ 77 ಲಕ್ಷ ರೂ, ಖಾನಟ್ಟಿ-ಮುನ್ಯಾಳ ರಸ್ತೆ ಸುಧಾರಣೆಗೆ 30 ಲಕ್ಷ ರೂ, ನಾಗನೂರ-ಹನುಮಾನ ನಗರ ರಸ್ತೆ ಸುಧಾರಣೆಗೆ 55 ಲಕ್ಷ ರೂ, ಅಡಿಬಟ್ಟಿ ಬಸವನಗರ ರಸ್ತೆ ಕಾಮಗಾರಿಗೆ 30 ಲಕ್ಷ ರೂ, ಸೇರಿದಂತೆ ಒಟ್ಟು 16 ಕೋಟಿ ರೂ, ಅನುದಾನ ಬಿಡುಗಡೆಯಾಗಿದೆ ಎಂದು ಶಾಸಕ ಬಾಲಚಂದ್ರ ಜಾರಕಿಹೊಳಿ ಅವರು ಮಾಹಿತಿ ನೀಡಿದರು.

ಪುರಸಭೆ ಅಧ್ಯಕ್ಷ ಹಣಮಂತ ಗುಡ್ಲಮನಿ, ಸದಸ್ಯ ಆನಂದ ಟಪಾಲ, ಮುಖಂಡರಾದ ಮಹಾದೇವ ಮುಗಳಖೋಡ, ಶಂಕರ ಮುಗಳಖೋಡ, ಮಹಾದೇವ ರಂಗಾಪೂರ, ಹಣಮಂತ ಶಿವಾಪೂರ, ಮಹಾದೇವ ಮುಕ್ಕುಂದ, ಶಿವಬಸು ಹಂಚಿನಾಳ, ಆರ್ಬಿ. ನೇಮಗೌಡರ, ರೇವಪ್ಪ ನೇಮಗೌಡರ, ಸಿದ್ದು ಗಡ್ಡೇಕರ, ಪ್ರಕಾಶ ಮುಗಳಖೋಡ, ಅನ್ವರ ನದಾಫ, ಸಿದ್ದಪ್ಪ ಮಗದುಮ್ಮ, ಪಾಂಡು ಮಹೇಂದ್ರಕರ, ಅಬ್ದುಲ್ಗಫಾರ ಡಾಂಗೆ, ಮರೆಪ್ಪ ಮರೆಪ್ಪಗೋಳ, ಪುರಸಭೆ ಸದಸ್ಯರು, ಅಧಿಕಾರಿಗಳು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

## ಸೊಸೈಟಿ ಗೋದಾಮಿಗೆ ನುಗ್ಗಿ 13 ಚೀಲ ಅಕ್ಕಿ ತಿಂದ ಆನೆ

ಹಾಸನ: ಜಿಲ್ಲೆಯಲ್ಲಿ ಕಾಡಾನೆಗಳ ಉಪಟಳ ಮಿತಿಮೀರಿದೆ. ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಎರಡು ಬಾಗಿಲನ್ನು ಒಡೆದು ಅಕ್ಕಿ ತಿಂದು ಹೋಗಿರುವ ಘಟನೆ ಹಾಸನ ಜಿಲ್ಲೆ ಬೇಲೂರು ತಾಲೂಕಿನ, ಅರೇಹಳ್ಳಿ ಹೋಬಳಿ, ಅನುಘಟ್ಟ ಗ್ರಾಮದಲ್ಲಿ ನಡೆದಿದೆ.



ಮುಂಜಾನೆ 4.15ರ ಸಮಯದಲ್ಲಿ ಗ್ರಾಮಕ್ಕೆ ಬಂದಿರುವ ರೇಡಿಯೋ ಕಾಲರ್ ಅಳವಡಿಸಿರುವ ಕಾಡಾನೆ, ಮುಂದಿನ ಹಾಗೂ ಹಿಂದಿನ ಬಾಗಿಲನ್ನು ಹೊಡೆದು 13 ಚೀಲ ಅಕ್ಕಿ ಎಳೆದಾಡಿ ತಿಂದು ಹೋಗಿದೆ. ಸೋಮವಾರವಷ್ಟೇ ಸೊಸೈಟಿಗೆ ಅಕ್ಕಿ ಲೋಡ್ ಬಂದಿತ್ತು. ಇಂದು ಬೆಳಗ್ಗೆ ಸೊಸೈಟಿ ಸೆಕ್ರೆಟರಿ ಸತೀಶ್ ಎಂಬವರು ಅಕ್ಕಿ ವಿತರಣೆಗೆ ಹೋದ ವೇಳೆ ಸೊಸೈಟಿಯ ಬಾಗಿಲುಗಳು ಮುರಿದಿದ್ದವು. ಈ ವೇಳೆ ಗಾಬರಿಗೊಂಡು ಸಿಸಿಟಿವಿ ಪರಿಶೀಲಿಸಿದಾಗ ಕಾಡಾನೆ ದಾಂಧಲೆ ನಡೆದಿರುವುದು ಬೆಳಕಿಗೆ ಬಂದಿದೆ.

ಕಳೆದ ಹತ್ತು ತಿಂಗಳ ಹಿಂದೆ 2022ರ ಏಪ್ರಿಲ್ 22ರಂದು ಇದೇ ಕಾಡಾನೆ ಇದೇ ಸೊಸೈಟಿ ಬಾಗಿಲು ಮುರಿದು ನಾಲ್ಕು ಕ್ವಿಂಟಾಲ್ ಅಕ್ಕಿ ತಿಂದು ಹೋಗಿತ್ತು. ಇಂದು ಮುಂಜಾನೆ ಮತ್ತೆ ಅದೇ ಅನುಘಟ್ಟ ಗ್ರಾಮದ ಸೊಸೈಟಿಗೆ ಬಂದಿರುವ ಕಾಡಾನೆ ಅಕ್ಕಿ ತಿಂದು ಹೋಗಿದೆ. ಕಾಡಾನೆ ಬಾಗಿಲು ಮುರಿದು ಅಕ್ಕಿ ತಿನ್ನುವ ದೃಶ್ಯ ಸಿಸಿಟಿವಿಯಲ್ಲಿ ಸೆರೆ-ಯಾಗಿದ್ದು, ಸ್ಥಳಕ್ಕೆ ಪೊಲೀಸರು, ಅರಣ್ಯ ಇಲಾಖೆ ಸಿಬ್ಬಂದಿ ಭೇಟಿ, ಪರಿಶೀಲನೆ ನಡೆಸಿದರು. ಅರೇಹಳ್ಳಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ.

## ನೇಕಾರ ಸಮ್ಮಾನ ಯೋಜನೆಯಡಿ ನೇಕಾರರು ಹಾಗೂ ಕಾರ್ಮಿಕರಿಗೆ ಆರ್ಥಿಕ ನೆರವು

ಬೆಳಗಾವಿ : ವಿದ್ಯುತ್ ಮಗ್ಗ ವಿದ್ಯುತ್ ಮಗ್ಗ ಹಾಗೂ ಮಗ್ಗಪೂರ್ವ ಘಟಕಗಳ ನೇಕಾರರು ಹಾಗೂ ಕಾರ್ಮಿಕರಿಗೆ ತಲಾ ರೂ.5,000/-ಗಳ ವಾರ್ಷಿಕ ಆರ್ಥಿಕ ನೆರವು ನೀಡುವ ನೇಕಾರ ಸಮ್ಮಾನ(ವಿದ್ಯುತ್ ಮಗ್ಗ) ಯೋಜನೆಯನ್ನು ಜಾರಿಗೊಳಿಸಲಾಗಿರುತ್ತದೆ.

ಸದರಿ ಯೋಜನೆಯಡಿ ನೆರವು ಪಡೆಯಲು ನೇಕಾರರ ಘಟಕಗಳು ವಿದ್ಯುತ್ ಮಗ್ಗ ಗಣತಿಯಲ್ಲಿ ನೋಂದಾಯಿಸಿಕೊಂಡಿರಬೇಕು. ಸದರಿ ಗಣತಿಯನ್ನು ಎ.ಐ.ಎಮ್.ಎಸ್ ಸಂಸ್ಥೆಯಿಂದ ಕೈಗೊಳ್ಳಲಾಗುತ್ತಿದ್ದು, ಗಣತಿಯಲ್ಲಿ ನೋಂದಾಯಿಸಲು ಬಿಟ್ಟು ಹೋದ ಘಟಕದವರು ಯಾವುದೇ ಮದ್ಯವರ್ತಿಗಳ ಆಸೆ-ಆಮಿಷಕ್ಕೆ ಒಳಗಾಗದೇ, ನೇರವಾಗಿ ಈ ಕಛೇರಿಯನ್ನು ಸಂಪರ್ಕಿಸಲು ತಿಳಿಸಲಾಗಿದೆ.

ನೇಕಾರ ಸಮ್ಮಾನ ಯೋಜನೆಯಡಿ ಆರ್ಥಿಕ ನೆರವನ್ನು ಪಡೆಯಲು ಯಾವುದೇ ಅರ್ಜಿ ಅಥವಾ ಆನ್‌ಲೈನ್ ಅರ್ಜಿ ಸಲ್ಲಿಸುವ ಅವಶ್ಯಕತೆ ಇರುವುದಿಲ್ಲ ಹಾಗೂ ಯಾವುದೇ ಶುಲ್ಕ ಇರುವುದಿಲ್ಲ.ಹೆಚ್ಚಿನ ಮಾಹಿತಿಗಾಗಿ ಈ ಕಛೇರಿ ದೂರವಾಣಿ ಸಂಖ್ಯೆ: 0831-2950674 ಗೆ ಸಂಪರ್ಕಿಸಬಹುದು ಎಂದು ಕೈಮಗ್ಗ ಮತ್ತು ಜವಳಿ ಇಲಾಖೆ ಜಿಲ್ಲಾ ಪಂಚಾಯತ್ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮಹಾದಾಯಿ ವಿಚಾರದಲ್ಲಿ ಬಿಜೆಪಿ ಸುಳ್ಳು ಹೇಳುತ್ತಲೇ ಬಂದಿದೆ



ಹುಬ್ಬಳ್ಳಿ: ಮಹಾದಾಯಿ ವಿಚಾರದಲ್ಲಿ ಬಿಜೆಪಿ ಸುಳ್ಳು ಹೇಳುತ್ತಲೇ ಬಂದಿದೆ. ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ಅವರು ದಿನಾಂಕವಿಲ್ಲದ, ಸಂಖ್ಯೆ ಇಲ್ಲದ ಕಡತ ಟ್ವೀಟ್ ಮಾಡಿದ್ದರು. ನೀವು ಜನರನ್ನು ಒಮ್ಮೆ ಮೂರ್ಖರನ್ನಾಗಿ ಮಾಡಬಹುದು ಯಾವಾಗಲೂ ಮೂರ್ಖರನ್ನಾಗಿ ಮಾಡಲು ಸಾಧ್ಯವಿಲ್ಲ ಎಂದು ಮಾಜಿ ಸಚಿವ ಎಚ್.ಕೆ. ಪಾಟೀಲ್ ವಾಗ್ದಾಳಿ ನಡೆಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ಕುರಿತು ಬಿಜೆಪಿ ಅಧ್ಯಕ್ಷ, ಕೇಂದ್ರ ಸಚಿವರು ಸುಳ್ಳು ಹೇಳಿದ್ದಾರೆ. ಬಿಜೆಪಿಯ ಸುಳ್ಳುಗಳನ್ನು ಕಾಂಗ್ರೆಸ್ ಬಹಿರಂಗಪಡಿಸುತ್ತಲೇ ಬಂದಿದೆ.

ಅರ್ಜಿ ಕೊಟ್ಟ ಕೂಡಲೇ ಅನುಮತಿ ಸಿಗುತ್ತದೆ ಎಂದು ಪ್ರಹ್ಲಾದ್ ಜೋಶಿ, ಸಿಎಂ ಬೊಮ್ಮಾಯಿ ಹೇಳಿದ್ದರು. ಹದಿನೈದು ದಿನದೊಳಗೆ ಕಾಮಗಾರಿ ಆರಂಭಿಸುವುದಾಗಿ ಪ್ರಚಾರ ಮಾಡಿದ್ದರು. ಪ್ರಹ್ಲಾದ್ ಜೋಶಿಯವರು ನನಗೆ ಮತ್ತು ಸಿದ್ದರಾಮಯ್ಯ ನವರಿಗೆ ಕಣ್ಣು ಕಾಣಿಸುವುದಿಲ್ಲ ಎಂದು ಹೇಳಿದ್ದರು. ನಮ್ಮ ರಾಜಕೀಯ ಸಂಸ್ಕೃತಿಗೆ ಅಪಹಾಸ್ಯ ಮಾಡಿ ಅವಮಾನ ಮಾಡಿದರು ಎಂದರು.

ಕಳಸಾ- ಬಂಡೂರಿ ಯೋಜನೆ ಜಾರಿಗೆ ಅರಣ್ಯ ಇಲಾಖೆಯಿಂದ ಪರವಾನಗಿ ಪಡೆದುಕೊಳ್ಳಬೇಕಾಗಿದೆ. ಕ್ಲಿಯರೆನ್ಸ್ ಇಲ್ಲದೆ ಕಾಮಗಾರಿ ಪ್ರಾರಂಭಿಸದಂತೆ ಕೋರ್ಟ್ ಆದೇಶ ನೀಡಿದೆ. ಕ್ರಮ ಕೈಗೊಳ್ಳಬೇಕಾದ ರಾಜ್ಯ ಸರ್ಕಾರ ಇದುವರೆಗೆ ಮಲಗಿದೆ. ಎಲ್ಲಿದೆ ನಿಮ್ಮ ಪೌರುಷ. ನಿಮ್ಮ ಹಸಿಸುಳ್ಳು ಬಹಿರಂಗಗೊಂಡಿದೆ ಎಂದು ಹೇಳಿದರು.

ಮಹಾದಾಯಿ ಆಗಿಯೇ ಬಿಟ್ಟಿತು ಎಂದು ವಿಜಯೋತ್ಸವ ಆಚರಿಸಿದ್ದರು. ಪಟಾಕಿ ಹಚ್ಚಿ ಸಂಭ್ರಮಿಸಿದರು. ಈಗ ಎಲ್ಲಿ ಹೋಯಿತು ನಿಮ್ಮ ಪೌರುಷ? ಸುಳ್ಳಿನ ಮೇಲೆ ಬಿಜೆಪಿ ಸವಾರಿ ಮಾಡುತ್ತಿದೆ ಎಂದರು. ಕೇಂದ್ರ ಗೃಹ ಸಚಿವ ಅಮಿತ್ ಶಾ, ಮಹಾದಾಯಿ ನಮ್ಮ ಬಿಜೆಪಿಯ ಕೊಡುಗೆ ಎಂದು ಹೇಳುತ್ತಾರೆ. ಈಗ ಅಮಿತ್ ಶಾ ಎಲ್ಲಿದ್ದಾರೆ? ನಿಮಗೆ ಮಹಾದಾಯಿ ಹೆಸರಲ್ಲಿ ಮತ ಕೇಳುವ ನೈತಿಕತೆಯಿಲ್ಲ. ಸುಪ್ರೀಂ ತೀಪು ಬಂದು ನೂರು ತಾಸುಗಳಾಯಿತು.

ಆದರೆ ರಾಜ್ಯಸರ್ಕಾರ ಮಾತ್ರ ನಿದ್ರೆ ಮಾಡುತ್ತಿದೆ. ಎಲ್ಲಾ ಅನುಮತಿ ಪಡೆದಿರುವುದಾಗಿ ಹೇಳಿದ್ದರು. ಆದರೆ ಈಗ ಗೋವಾ ವೈಲ್ಡ್ ಲೈಫ್ ಅನುಮತಿ ಬೇಕು ಎಂದು ಕೋರ್ಟ್ ಹೇಳಿದೆ. ಬಿಜೆಪಿಯ ಹಸಿಸುಳ್ಳು ಬಹಿರಂಗಗೊಂಡಿದೆ ಎಂದು ಹೇಳಿಕೆಯನ್ನು ಕೊಟ್ಟಿದ್ದಾರೆ.

## ನೀರಿನಲ್ಲಿ ಮುಳುಗಿ ಸಾವು ಪ್ರೇಮಿಗಳಿಬ್ಬರ ಸಾವು




ಗೋವಾ: ಪ್ರೇಮಿಗಳ ದಿನ ಆಚರಿಸಲು ಗೋವಾಗೆ ತೆರಳಿದ್ದ ಬೆಂಗಳೂರಿನ ದಂಪತಿ ಬೀಚ್‌ನಲ್ಲಿ ಮುಳುಗಿ ಮೃತಪಟ್ಟಿದ್ದಾರೆ.

ಬೆಂಗಳೂರಿನಲ್ಲಿ ನೆಲೆಸಿದ್ದ ಉತ್ತರ ಪ್ರದೇಶ ಮೂಲದ ಸುಪ್ರಿಯಾ ಹಾಗೂ ದೆಹಲಿಯಲ್ಲಿ ನೆಲೆಸಿದ್ದ ವಿಭು ಶರ್ಮಾ ಗೋವಾ ಪ್ಲ್ಯಾನ್ ಮಾಡಿದ್ದರು. ದಕ್ಷಿಣ ಗೋವಾದ ಪಲೋಲೆಮ್ ಬೀಚ್‌ನಲ್ಲಿ ಮುಳುಗಿ ಮೃತಪಟ್ಟಿದ್ದಾರೆ. ಪೊಲೀಸರು ಧಾವಿಸಿದ್ದು, ರಕ್ಷಕರ ನೆರವಿನೊಂದಿಗೆ ಮೃತದೇಹಗಳನ್ನು ಹೊರತೆಗೆದಿದ್ದಾರೆ.

## ಕಾರ್ಕಳ ಕ್ಷೇತ್ರಕ್ಕಾಗಿ ಸಚಿವ ಸುನಿಲ್ ಕುಮಾರ-ಪ್ರಮೋದ್ ಮುತಾಲಿಕ್ ಕಿತ್ತಾಟ

ಉಡುಪಿ: ಜಿಲ್ಲೆಯ ಕಾರ್ಕಳ ವಿಧಾನಸಭಾ ಕ್ಷೇತ್ರ ರಾಜ್ಯದ ಗಮನ ಸೆಳೆಯುತ್ತಿದ್ದು, ಸಚಿವ ಸುನಿಲ್ ಕುಮಾರ್ ಬಿಜೆಪಿಯ ಭದ್ರಕೋಟೆಯನ್ನು ಕಟ್ಟಿಕೊಂಡಿರುವಾಗ, ಶ್ರೀರಾಮ ಸೇನೆಯ ಸಂಸ್ಥಾಪಕ ಪ್ರಮೋದ್ ಮುತಾಲಿಕ್ ರಣಾಂಗಣಕ್ಕೆ ನುಸುಳಿದ್ದಾರೆ.

ಭಜರಂಗದಳದ ಗುರು-ಶಿಷ್ಯರು 2023ರಲ್ಲಿ ಎದುರಾಳಿಗಳಾಗುತ್ತಾರೆ ಎಂದು ಯಾವ ಚುನಾವಣಾ ಪಂಡಿತರೂ ಲೆಕ್ಕ ಹಾಕಿರಲಿಲ್ಲ. ಕಳೆದ ಮೂರು ತಿಂಗಳಿಂದ ಹೀಗೊಂದು ಚರ್ಚೆ ನಡೆಯುತ್ತಿದ್ದರೂ, ಕಚೇರಿ ತೆರೆದು ಪ್ರಚಾರದ ಓಡಾಟ ಶುರು ಮಾಡುವ ಮೂಲಕ ಮುತಾಲಿಕ್ ಸ್ಪರ್ಧೆಯನ್ನು ಪಕ್ಕಾ ಮಾಡಿದ್ದಾರೆ.





ಈ ನಡುವೆ ನನ್ನಲ್ಲಿ ಕಾಸಿಲ್ಲ ವೋಟಿನ ಜೊತೆ ನೂರು ರೂಪಾಯಿ ನೋಟು ಕೊಡಿ ಎಂದು ಬಹಿರಂಗವಾಗಿ ಬೇಡಿಕೆ ಇಟ್ಟಿದ್ದು ಚರ್ಚೆಗೆ ಕಾರಣವಾಗಿದೆ. ಸುನೀಲ್ ಕುಮಾರ್ ಹಿಂದುತ್ವ ಮತ್ತು ಭ್ರಷ್ಟಾಚಾರ ಮಾಡಿರುವ ಕಾರಣಕ್ಕೆ ನಾನು ಕ್ಷೇತ್ರಕ್ಕೆ ಪ್ರವೇಶ ಮಾಡಿದ್ದೇನೆ ಎಂದು ಪ್ರಮೋದ್ ಮುತಾಲಿಕ್ ಘೋಷಣೆ ಮಾಡಿದ್ದರು.

ಸುನೀಲ್ ಕುಮಾರ್ ಟ್ವೀಟ್: ಪ್ರಿಯ ಮುತಾಲಿಕ್ ಜೀ, ನೀವು ಆಮಿಷಕ್ಕೆ ಒಳಗಾಗಿಯೇ ಕಾರ್ಕಳದಿಂದ ಚುನಾವಣೆಗೆ ಸ್ಪರ್ಧಿಸಲು ಬಯಸಿದ್ದೀರಿ ಎಂದು ನಮಗೆ ಮೊದಲೇ ಅನುಮಾನವಿತ್ತು. ಅದೀಗ ನಿಜವಾಗಿದೆ!. ಸ್ವಂತ ಬುದ್ಧಿಯಿಂದ ನೀವು ನನ್ನ ವಿರುದ್ಧ ಚುನಾವಣೆಗೆ ಸ್ಪರ್ಧಿಸುತ್ತಿಲ್ಲ ಎಂಬುದು ಈಗ ಸ್ಪಷ್ಟವಾಗಿದೆ. ನೀವು ಕಾರ್ಕಳದಿಂದ ಸ್ಪರ್ಧೆಗೆ ಇಳಿಯುವುದನ್ನು ನಾನು ಮೊದಲೇ ಸ್ವಾಗತಿಸಿದ್ದೇನೆ. ಈಗ ನಿಮಗೆ ತನು ಮನ ಧನ ಸಹಾಯ ಮಾಡುವವರೂ ಕಾರ್ಕಳಕ್ಕೆ ಬಂದು ಪ್ರಚಾರ ಮಾಡಲಿ ಎಂದು ನಾನು ಆಶಿಸುತ್ತೇನೆ.

ನಿಮ್ಮ ಸ್ಪರ್ಧೆಯ ಉದ್ದೇಶ ಏನೆಂಬುದನ್ನು ಕೆಲ ದಿನಗಳ ಹಿಂದೆ "ವೋಟು, ನೋಟು" ಹೇಳಿಕೆಯ ಮೂಲಕ ತಿಳಿಸಿದ್ದಿರಿ. ಈಗ ತನುಮನಧನ ಸಹಾಯವಿದೆ ಎಂದು ಹೇಳುತ್ತಿದ್ದೀರಿ. ಒಟ್ಟಾರೆಯಾಗಿ ನಿಮ್ಮಈ ಸ್ಪರ್ಧೆಯ ಉದ್ದೇಶ ಕಾರ್ಕಳದ ಹಿತವಲ್ಲ, ಹಿಂದುತ್ವದ ಹಿತವಲ್ಲ, ಜನತೆಯ ಹಿತವೂ ಅಲ್ಲ. ಅದು "ತನು- ಮನ-ಧನ" ನೋಟಿಗಾಗಿ ಎಂಬುದು ನಿಮ್ಮ ಹೇಳಿಕೆಯಲ್ಲೇ ಸ್ಪಷ್ಟವಾಗಿದೆ.

ಈಗ ತನುಮನಧನ ಸಹಾಯವಿದೆ ಎಂದು ಹೇಳುತ್ತಿದ್ದೀರಿ. ಒಟ್ಟಾರೆಯಾಗಿ ನಿಮ್ಮಈ ಸ್ಪರ್ಧೆಯ ಉದ್ದೇಶ ಕಾರ್ಕಳದ ಹಿತವಲ್ಲ, ಹಿಂದುತ್ವದ ಹಿತವಲ್ಲ, ಜನತೆಯ ಹಿತವೂ ಅಲ್ಲ. ಅದು " ತನು- ಮನ-ಧನ" ನೋಟಿಗಾಗಿ ಎಂಬುದು ನಿಮ್ಮ ಹೇಳಿಕೆಯಲ್ಲೇ ಸ್ಪಷ್ಟವಾಗಿದೆ.

ಮುತಾಲಿಕ್ ಗರಂ: ಸಾಮಾಜಿಕ ಜಾಲತಾಣದಲ್ಲಿ ಸುನಿಲ್ ಕುಮಾರ್ ಅಪ್ಡೇಟ್ ಮಾಡುತ್ತಿದ್ದಂತೆ ಮುತಾಲಿಕ್ ಕಿಡಿಕಾರಿದ್ದಾರೆ.

ಕಾರ್ಕಳಕ್ಕೆ ಬರುವಾಗ ನೀವು ಹೇಗಿದ್ರಿ, ಈಗ ಹೇಗಿದ್ದೀರಿ ಎಂಬುದನ್ನು ಆತ್ಮಾವಲೋಕನ ಮಾಡಿಕೊಳ್ಳಿ. ಈ ಸಾರಿ ಅಸಲಿ ಮತ್ತು ನಕಲಿ ಹಿಂದುತ್ವದ ನಡುವೆ ವಾರ್ ಎಂದು ಮುತಾಲಿಕ್ ಎಚ್ಚರಿಸಿದ್ದಾರೆ.

## 6 ನೇ ತರಗತಿ ವಿದ್ಯಾರ್ಥಿಗಳ ಪ್ರವೇಶಾತಿಗೆ ಅರ್ಜಿ ಆಹ್ವಾನ

ಬೆಳಗಾವಿ: ರಾಮದುರ್ಗ ತಾಲೂಕಿನ ಕಟಕೋಳ ಸರಕಾರಿ ಆದರ್ಶ ಪ್ರೌಢ ಶಾಲೆ ಹಾಗೂ ಸವದತ್ತಿ ತಾಲೂಕಿನ ಯಡ್ರಾವಿ ಸರಕಾರಿ ಆದರ್ಶ ಪ್ರೌಢ ಶಾಲೆಯ 6 ನೇ ತರಗತಿ ಪ್ರವೇಶ ಪರೀಕ್ಷೆಗಾಗಿ ವಿದ್ಯಾರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಆಯಾ ತಾಲೂಕಿನಲ್ಲಿ 5 ನೇ ತರಗತಿ ಓದುತ್ತಿರುವ ವಿದ್ಯಾರ್ಥಿಗಳು ಫೆ.18 2023 ರಿಂದ ಮಾ.4 2023 ರ ವರೆಗೆ ಆನ್-ಲೈನ್ ಮೂಲಕ ಅರ್ಜಿಗಳನ್ನು ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಕಟಕೋಳ ಸರಕಾರಿ ಆದರ್ಶ ಪ್ರೌಢ ಶಾಲೆ ಮುಖ್ಯೋಪಾಧ್ಯಾಯರ ದೂರವಾಣಿ ಸಂಖ್ಯೆ 9980789428, ಅಥವಾ ಯಡ್ರಾವಿ ಸರಕಾರಿ ಆದರ್ಶ ಪ್ರೌಢ ಶಾಲೆ ಮುಖ್ಯೋಪಾಧ್ಯಾಯರ ದೂರವಾಣಿ ಸಂಖ್ಯೆ 9449624312 ಗೆ ಸಂಪರ್ಕಿಸಬಹುದು. ಕ್ಷೇತ್ರ ಶಿಕ್ಷಣಾಧಿಕಾರಿಗಳು, ಕ್ಷೇತ್ರ ಸಮನ್ವಯಾಧಿಕಾರಿಗಳು ರಾಮದುರ್ಗ ಮತ್ತು ಸವದತ್ತಿ ಇಲ್ಲಿಯೂ ಸಹ ಅಗತ್ಯ ಮಾಹಿತಿಯನ್ನು ಪಡೆಯಬಹುದು ಎಂದು ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ ಉಪನಿರ್ದೇಶಕರಾದ ಎಸ್.ಡಿ. ಗಾಂಜಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅಪರಿಚಿತ ವ್ಯಕ್ತಿಯ ಮೃತದೇಹ ಪತ್ತೆ

ಬೆಳಗಾವಿ: ಬೆಳಗಾವಿ ರೇಲ್ವೆ ಪೊಲೀಸ್ ಠಾಣೆಯ ದೇಸೂರ ನಿಲ್ದಾಣ ಮಧ್ಯೆ ಮಜಗಾಂವ 4ನೇ ಗೇಟ್ ಹತ್ತಿರ ಅಪರಚಿತ ವ್ಯಕ್ತಿ(45) ಮೇ. 13, 2021 ರಂದು ಚಲಿಸುವ ರೈಲು ಗಾಡಿಗೆ ಸಿಕ್ಕು ಮೃತಪಟ್ಟಿರುತ್ತಾನೆ. ಸದರಿ ಪ್ರಕರಣವನ್ನು ದಾಖಲಿಸಿಕೊಂಡು ತನಿಖೆ ಕೈಗೊಳ್ಳಲಾಗಿರುತ್ತದೆ.

ಮೃತನ ಚಹರೆ ಪಟ್ಟಿಯ ವಿವರ:

ಎತ್ತರ 5.2 ಪುಟ್, ಗೋಧಿ ಮೈ ಬಣ್ಣ, ದುಂಡು ಮುಖ, ದಪ್ಪ ಮೂಗು, ಮತ್ತು ಸಾಧಾರಣ ಶರೀರ ಹೊಂದಿರುತ್ತಾನೆ.

ಈ ರೀತಿ ಚಹರೆಯುಳ್ಳ ಅಪರಿಚಿತ ವ್ಯಕ್ತಿಯ ವಾರಸುದಾರರು ಇದ್ದಲ್ಲಿ ಬೆಳಗಾವಿ ರೈಲ್ವೆ ಪೋಲಿಸ್ ಠಾಣೆ ದೂರವಾಣಿ ಸಂಖ್ಯೆ: (0831) 2405273 ಪಿ.ಎಸ್.ಐ ಮೊಬೈಲ ನಂ :9480802127 ಅಥವಾ ರೈಲ್ವೆ ಪೊಲೀಸ್ ನಿಯಂತ್ರಣ ಕೊಠಡಿ ದೂರವಾಣಿ ಸಂಖ್ಯೆ. (080) 22871291 ಗೆ ಸಂಪರ್ಕಿಸಬಹುದು ಎಂದು ಬೆಳಗಾವಿ ರೈಲ್ವೆ ಪೋಲಿಸ್ ಠಾಣೆಯ ಆರಕ್ಷಕ ಉಪನಿರೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವ್ಯಕ್ತಿ ನಾಪತ್ತೆ

ಬೆಳಗಾವಿ: ಬೈಲಹೊಂಗಲ ತಾಲೂಕಿನ ಹನ್ನಿಕೇರಿ ಗ್ರಾಮದ ಅಂಬೇಡ್ಕರ ಗಲ್ಲಿ ಮೋದಗಾ ಇಲ್ಲಿನ ನಿವಾಸಿಯಾದ ಸುರೇಶ ಬಸಪ್ಪಾ ತಳಗೇರಿ ವಯಸ್ಸು(27) ಇವರು ಡಿಸೆಂಬರ್.7 2022 ರಂದು ಸಂಜೆ 4 ಗಂಟೆಗೆ ಮುತಗಾ ಗ್ರಾಮದಲ್ಲಿ ದೇಶಿ ತಡ್ಕಾ ದಾಬಾದಿಂದ ಮನೆಗೆ ಹೊಗುತ್ತೇನೆ ಎಂದು ಹೇಳಿ ಹೋದವನು ಮನೆಗೆ ಬರದೇ ಕಾಣೆಯಾಗಿದ್ದಾನೆ ಎಂದು ಇವರ ಸಹೋದರ ಅಡಿವೆಪ್ಪಾ ಬಸಪ್ಪಾ ತಳಗೇರಿ ಅವರು ದೂರು ದಾಖಲಿಸಿದ್ದಾರೆ.

**ಕಾಣೆಯಾದ ವ್ಯಕ್ತಿ ವಿವರ:**

ಕಾಣೆಯಾದ ವ್ಯಕ್ತಿಯು ಸುಮಾರು 5.2 ಘುಟ ಎತ್ತರವಿದ್ದು, ಸಾದಾ ಗಪ್ಪು ಮೈಬಣ್ಣ, ಉದ್ದ ಮುಖ, ಅಗಲ ಮೂಗು ಹೊಂದಿರುತ್ತಾನೆ. ಬಲಗೈ ಮುಂಗೈ ಹತ್ತಿರ ಹಳೆ ನೋವಿನ ಕಲೆ ಇರುತ್ತದೆ. ಕಪ್ಪು ಬಣ್ಣದ ಟೀ ಶರ್ಟ್ ಹಾಗೂ ನೀಲಿ ಬಣ್ಣದ ಜೀನ್ಸ್ ಪ್ಯಾಂಟ್ ಧರಿಸಿದ್ದು, ಕನ್ನಡ ಮತ್ತು ಹಿಂದಿ ಭಾಷೆ ಮಾತನಾಡುತ್ತಾರೆ.

ಈ ಪ್ರಕಾರ ಚಹರೆಯುಳ್ಳ ವ್ಯಕ್ತಿಯ ಬಗ್ಗೆ ಮಾಹಿತಿ ದೊರೆಕಿದಲ್ಲಿ ಮಾರೀಹಾಳ ಪೊಲೀಸ್ ಠಾಣೆ ದೂರವಾಣಿ ಸಂಖ್ಯೆ 0831-2405239 ಅಥವಾ ಮೋ.ಸಂಖ್ಯೆ 9480804111 ಗೆ ಸಂಪರ್ಕಿಸಬಹುದು ಎಂದು ಮಾರಿಹಾಳ ಪೊಲೀಸ್ ಠಾಣೆಯ ತನಿಖಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಹಕಾರ ಸಂಘಗಳಿಂದ ಮಾಹಿತಿ ಸಲ್ಲಿಸಲು ಸೂಚನೆ

ಬೆಳಗಾವಿ: ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ 1959 ನಿಯಮ 1960 ರನ್ವಯ ಜ.1 2023 ರಿಂದ ಡಿ.31 2023 ರವರೆಗೆ ಆಡಳಿತ ಮಂಡಳಿಯ ಅವಧಿಯು ಮುಕ್ತಾಯವಾಗುವ ಸಹಕಾರ ಸಂಘಗಳ/ಸೌಹಾರ್ದ ಸಹಕಾರಿಗಳ ಮಾಹಿತಿಯನ್ನು ಸಹಕಾರ ಇಲಾಖೆಗೆ ನಿಗದಿತ ನಮೂನೆಯಲ್ಲಿ ಆರು ತಿಂಗಳು ಮುಂಚೆ ಮಾಹಿತಿ ಸಲ್ಲಿಸುವುದು ಅವಶ್ಯಕವಾಗಿರುತ್ತದೆ.

ಕಾರಣ ಬೆಳಗಾವಿ ಉಪವಿಭಾಗದಲ್ಲಿನ ಬೆಳಗಾವಿ, ಖಾನಾಪೂರ ಹಾಗೂ ಹುಕ್ಕೇರಿ ತಾಲೂಕಿನಲ್ಲಿರುವ ಸಹಕಾರ ಸಂಘಗಳ/ ಸೌಹಾರ್ದ ಸಹಕಾರಿಗಳ ಕಾರ್ಯದರ್ಶಿಗಳು ಆಡಳಿತ ಮಂಡಳಿ ಅವಧಿ ಮುಕ್ತಾಯವಾಗುವ 6 ತಿಂಗಳ ಮುಂಚಿತವಾಗಿ ಮಾಹಿತಿಯನ್ನು ಸಹಕಾರ ಸಂಘಗಳ ಸಹಾಯಕ ನಿಬಂಧಕರು, ಬೆಳಗಾವಿ ಉಪವಿಭಾಗ, ಜಕ್ಕೇರಿಹೊಂಡ, ಗೋವಾವೇಶ ಹತ್ತಿರ ಬೆಳಗಾವಿ ಈ ಕಚೇರಿಗೆ ಸಲ್ಲಿಸಬೇಕು ಎಂದು ಬೆಳಗಾವಿ ಉಪವಿಭಾಗದ ಸಹಕಾರ ಸಂಘಗಳ ಸಹಾಯಕ ನಿಬಂಧಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಾರಿಗೆ ಅದಾಲತ್ ಫೆ.17 ರಂದು

ಬೆಳಗಾವಿ: ಸಾರ್ವಜನಿಕರಿಗೆ, ವಾಹನ ಮಾಲೀಕರಿಗೆ, ವಾಹನ ವಿತರಕರಿಗೆ ಹಾಗೂ ಚಾಲನಾ ಅನುಜ್ಞಾಪತ್ರ ಹೊಂದಿದ/ಹೊಂದುವ ಸಾರ್ವಜನಿಕರಿಗೆ ಬೆಳಗಾವಿಯ ಪ್ರಾದೇಶಿಕ ಸಾರಿಗೆ ಕಛೇರಿಯ ಆವರಣದಲ್ಲಿ ಫೆ.17, 2023 ರಂದು ಬೆಳಿಗ್ಗೆ 11 ಗಂಟೆಯಿಂದ 1 ಗಂಟೆಯವರೆಗೆ ಸಾರಿಗೆ ಅದಾಲತ್ ಹಮ್ಮಿಕೊಳ್ಳಲಾಗಿದೆ.

ಆದ್ದರಿಂದ ಸಾರ್ವಜನಿಕರು ಸಾರಿಗೆ ಅದಾಲತ್ ಕಾರ್ಯಕ್ರಮದಲ್ಲಿ ಭಾಗವಹಿಸಿ ತಮ್ಮ ಕುಂದು ಕೊರತೆಗಳನ್ನು ಪರಿಹರಿಸಿಕೊಳ್ಳಲು ಹಾಗೂ ಈ ಕಛೇರಿಯಲ್ಲಿ ಅರ್ಜಿಗಳು ವಿಲೇವಾರಿಗೆ ಬಾಕಿ ಇದ್ದಲ್ಲಿ ಸೂಕ್ತ ದಾಖಲೆಗಳೊಂದಿಗೆ ಹಾಜರಾಗಿ ತಮ್ಮ ಅರ್ಜಿಯನ್ನು ವಿಲೇವಾರಿಗೊಳಿಸಬೇಕು ಎಂದು ಬೆಳಗಾವಿ ಪ್ರಾದೇಶಿಕ ಸಾರಿಗೆ ಅಧಿಕಾರಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬಹಿರಂಗ ಹರಾಜು ಪ್ರಕ್ರಿಯೆ

ಬೆಳಗಾವಿ: ಕರ್ನಾಟಕ ರಿಯಲ್ ಎಸ್ಟೇಟ್ ಪ್ರಾಧಿಕಾರ ಬೆಂಳೂರು ಇವರಿಗೆ ಲೋಟಸ್ ಲ್ಯಾಂಡ್ ಮಾರ್ಕ್ ಪ್ರೈ.ಲಿ.ಲೋಟಸ್ ಕೌಂಟಿ ರಿಸನಂ 124/2, ಮಂಡೋಳಿ ರೋಡ್ ಚೌಗಲೆವಾಡಿ ಬೆಳಗಾವಿ ಇವರಿಂದ 20,04,425 ರೂ ಗಳ ಮೊತ್ತವು ಬಾಕಿ ಇರುವುದರಿಂದ ಸದರಿ ಮೊತ್ತವನ್ನು ಭೂ ಕಂದಾಯ ಬಾಕಿ ಎಂದು ಪರಿಗಣಿಸಿ, ವಸೂಲಿ ಮಾಡಲು ಜಿಲ್ಲಾಧಿಕಾರಿಗಳಿಂದ ಆದೇಶವಾಗಿರುತ್ತದೆ.

ಸದರಿ ಮೊತ್ತದ ವಸೂಲಾತಿಗಾಗಿ ಬಾಕಿದಾರ ಮಾಲಕರು ಬೆಳಗಾವಿ. ರಿಸನಂ 124*/2 ಆಸ್ತಿ ಫೆ.16 2023 ರಂದು ಬೆಳಿಗ್ಗೆ 11 ಗಂಟೆಗೆ ಬೆಳಗಾವಿ ತಹಸೀಲ್ದಾರ್ ಅವರಿಂದ ಅಧಿಕಾರ ಪಡೆದ ಅಧಿಕಾರಿಯ ಸಮ್ಮುಖದಲ್ಲಿ ಬಹಿರಂಗ ಹರಾಜು ಮಾಡುವುದರ ಮೂಲಕ ವಸೂಲಾತಿ ಕೈಗೊಳ್ಳಲಾಗುವುದು. ಆಸಕ್ತಯುಳ್ಳವರು ಹಾರಜು ಪ್ರಕ್ರಿಯೆಯಲ್ಲಿ ಭಾಗಹಿಸಬಹುದು ಎಂದು ಬೆಳಾಗಾವಿಯ ತಹಿಸೀಲ್ದಾರ್ ಅವರು ಪ್ರಕಣೆಯಲ್ಲಿ ತಿಳಿಸಿದ್ದಾರೆ.

# ಬಾದಾಮಿ ಕ್ಷೇತ್ರದಲ್ಲಿ ಜೆಡಿಎಸ್‌ಗೆ ಉತ್ತಮ ವಾತಾವರಣವಿದೆ: ಮಾವಿನಮರದ



ಗುಳೇದಗುಡ್ಡ : ಮುಂಬರುವ ವಿಧಾನಸಭೆ ಚುನಾವಣೆ ರಾಜ್ಯದಲ್ಲಿ ಮಹತ್ವದ ಘಟ್ಟವಾಗಿದೆ. ಜೆಡಿಎಸ್ ಪಕ್ಷ ರೂಪಿಸಿರುವ ಪಂಚರತ್ನ ಯೋಜನೆಗಳು ಹಿಂದುಳಿದವರ, ಅಲ್ಪಸಂಖ್ಯಾತರ, ನೇಕಾರರ, ರೈತರ, ಕೂಲಿ ವರ್ಗದವರ ಹೀಗೆ ಒಟ್ಟಾರೆ ಸಮಾಜದ ಬಡವರ ಬದುಕಿಗೆ ವರದಾನವಾಗಿದೆ. ಅದರ ಮಾಹಿತಿ ಪ್ರತಿ ಮತದಾರರಿಗೆ ತಲುಪಿಸುವ ಮಹತ್ವದ ಕಾರ್ಯ ನಮ್ಮೆಲ್ಲರ ಹೆಗಲ ಮೇಲಿದೆ ಎಂದು ಜೆಡಿಎಸ್ ಜಿಲ್ಲಾಧ್ಯಕ್ಷ ಹಾಗೂ ಬಾದಾಮಿ ಮತಕ್ಷೇತ್ರದ ಘೋಷಿತ ಅಭ್ಯರ್ಥಿ ಹನಮಂತ ಮಾವಿನಮರದ ಹೇಳಿದರು.

ಅವರು ಪಟ್ಟಣದ ಅಕ್ಕಲಕೋಟೆ ಶಿವಶರಣರ ಮಠದ ಕಲ್ಯಾಣ ಮಂಟಪದಲ್ಲಿ ಜರುಗಿದ ಮನೆ ಮನೆಗೆ ಪಂಚರತ್ನ ಯೋಜನೆಯ ಪೂರ್ವಭಾವಿ ಸಭೆಯಲ್ಲಿ ಮಾತನಾಡಿ, ಫೆ. 19ರಿಂದ 23ರವರೆಗೆ ಜೆಡಿಎಸ್ ಪಕ್ಷ ಸಂಕಲ್ಪ ಮಾಡಿಕೊಂಡಿರುವ ಪಂಚರತ್ನ ಯೋಜನೆಗಳ ಮಹತ್ವವನ್ನು ಎಲ್ಲ ಮುಖಂಡರು ಹಾಗೂ ಕಾರ್ಯಕರ್ತರು ಪ್ರತಿ ಬೂತ್ ವ್ಯಾಪ್ತಿಯ ಮನೆ, ಮನೆಗೆ ಭೇಟಿ ನೀಡಿ ಮಾಹಿತಿಯನ್ನು ಭಿತ್ತಿಪತ್ರದ ಮೂಲಕ ತಲುಪಿಸಬೇಕು. ಪಂಚರತ್ನ ಯೋಜನೆಯಲ್ಲಿನ ಕಾರ್ಯಕ್ರಮಗಳನ್ನು ಜನರಿಗೆ ತಿಳಿಸಲು ಪ್ರತಿಯೊಬ್ಬ ಕಾರ್ಯಕರ್ತರು ಮುಂದಾಗಬೇಕು. ಪ್ರತಿ ಬೂತ್ ಮಟ್ಟದಲ್ಲಿ ಕಾರ್ಯಕರ್ತರು 50 ಮನೆಗಳಿಗೆ ಭೇಟಿ ನೀಡಬೇಕು. ಐದು ದಿನಗಳಲ್ಲಿ ಕ್ಷೇತ್ರದಲ್ಲಿರುವ ಜನರ ಮನೆ ಬಾಗಿಲಿಗೆ ತಲುಪಬೇಕು.

ಜನರು ಜೆಡಿಎಸ್‌ಗೆ ಕಡೆಗೆ ಹೆಚ್ಚಿನ ಒಲವು ತೋರಿಸಿದ್ದಾರೆ. ಅವುಗಳು ಮತಗಳಾಗಿ ಪರಿವರ್ತನೆಯಾಗುವ ರೀತಿಯಲ್ಲಿ ಕಾರ್ಯಕರ್ತರು ಶ್ರಮವಹಿಸಬೇಕು. ಫೆ.25 ರಂದು ತಾಲೂಕಿನ ನೆರೆಪಿಡಿತ ಗ್ರಾಮಗಳಾದ ಇಂಜಿನವಾರಿಯಿಂದ ಕರ್ಲಕೊಪ್ಪದವರೆಗೆ ಪಾದಯಾತ್ರೆ ಮಾಡಲಾಗುವುದು ಎಂದರು.

ಜೆಡಿಎಸ್ ಮುಖಂಡ ಶೇಖರ ರಾಠೋಡ ಮಾತನಾಡಿ, ಈ ಭಾರಿ ಕ್ಷೇತ್ರದಲ್ಲಿ ಪಕ್ಷ ಹಾಗೂ ಹನಮಂತ ಮಾವಿನಮರದ ಅವರ ಪರವಾದ ಅಲೆ ಇದೆ. ಅವರು ಸ್ನೇಹ ಜೀವಿ. ಅಜಾತಶತ್ರು. ಎಲ್ಲರ ಸಮಸ್ತೆಗಳಿಗೆ ತಕ್ಷಣ ಸ್ಪಂದಿಸುವ ವ್ಯಕ್ತಿ.

ಅವರ ಬಗ್ಗೆ ಈ ಸಲ ಮತದಾರರು ಕೈ ಹಿಡಿದು ಮನೆ ಮಗನಂತೆ ಕಂಡು ಆಶೀರ್ವಾದ ಮಾಡಲಿದ್ದಾರೆ. ಆದರೆ ಎಲ್ಲ ಮುಖಂಡರು ಹಾಗೂ ಕಾರ್ಯಕರ್ತರು ಶ್ರಮವಹಿಸಿ ಹಗಲಿರುಳು ಕೆಲಸ ಮಾಡಬೇಕು ಎಂದರು.

ಪಕ್ಷದ ಮುಖಂಡರಾದ ಅನ್ವರಖಾನ ಪಠಾಣ, ಶಿವು ವಾಲೀಕಾರ, ಪಿಂಟು ರಾಠೋಡ, ಹನಮಂತ ಚೌಹ್ವಾಣ, ನೇಕಾರ ಸಮುದಾಯದ ರಾಜ್ಯ ಮುಖಂಡ ಚಂದ್ರಕಾಂತ ಶೇಖಾ, ಚನ್ನಪ್ಪ ಮೇಟಿ ಮುಂತಾದವರು ಸಭೆಯಲ್ಲಿ ತಮ್ಮ ಅಭಿಪ್ರಾಯ ಹಂಚಿಕೊಂಡು ಹನಮಂತ ಮಾವಿನಮರದ ಅವರ ಆಯ್ಕೆಗೆ ಎಲ್ಲ ರೀತಿಯಿಂದ ಪೂರ್ವಸಿದ್ಧತೆ ಮಾಡಿಕೊಳ್ಳಲು ಹಾಗೂ ಪಂಚರತ್ನ ಯೋಜನೆಗಳ ಕುರಿತಾಗಿ ಮನವರಿಕೆ ಮಾಡಿದರು.

ಜೆಡಿಎಸ್ ಮುಖಂಡರಾದ ಮುಪ್ಪಣ್ಣ ಶೀಲವಂತ, ಪ್ರಕಾಶ ವಾಳದವುಂಕಿ, ಯುವ ಘಟಕದ ಅಧ್ಯಕ್ಷ ಪುಂಡಲೀಕ ಕಂಠಿ, ರಾಘು ಬಳಿಗೇರ, ತಮ್ಮಣ್ಣೆಪ್ಪ ಬೆನಕಟ್ಟಿ, ರಾಘು ಪತ್ತಾರ, ಸಚಿನ್ ರಾಂಪೂರ, ಮಂಜು ರಾಜನಾಳ, ಶ್ರೀಕಾಂತ ಹುನಗುಂದ ಹಾಗೂ ಗುಳೇದಗುಡ್ಡ ತಾಲೂಕಿನ ನೂರಾರು ಮುಖಂಡರು ಭಾಗವಹಿಸಿದ್ದರು.

## ಕಾರಂಜಾ ಸಂತ್ರಸ್ತರಿಗೆ ಬಜೆಟ್ ನಲ್ಲೇ ಪರಿಹಾರ ಘೋಷಿಸಿ: ಬಂಡೆಪ್ಪ ಖಾಶೆಂಪುರ್



ಬೀದರ್ : ಬೀದರ್ ಜಿಲ್ಲೆಯ ಕಾರಂಜಾ ಸಂತ್ರಸ್ತರು ಕಳೆದ ಅನೇಕ ತಿಂಗಳುಗಳಿಂದ ನಿರಂತರವಾಗಿ ಧರಣಿ ಸತ್ಯಾಗ್ರಹ ನಡೆಸುತ್ತಿದ್ದಾರೆ. ಇದೇ ಬಜೆಟ್ ನಲ್ಲಿ ಸರ್ಕಾರ ಅವರಿಗೆ ಪರಿಹಾರ ಘೋಷಣೆ ಮಾಡಬೇಕು ಎಂದು ಮಾಜಿ ಸಚಿವರು, ಜೆಡಿಎಸ್ ಶಾಸಕಾಂಗ ಪಕ್ಷದ ಉಪನಾಯಕರು, ಜೆಡಿಎಸ್ ಕೋರ್ ಕಮಿಟಿಯ ಅಧ್ಯಕ್ಷರು, ಬೀದರ್ ದಕ್ಷಿಣ ವಿಧಾನಸಭಾ ಕ್ಷೇತ್ರದ ಶಾಸಕರಾಗಿರುವ ಬಂಡೆಪ್ಪ ಖಾಶೆಂಪುರ್ ರವರು ಸದನದಲ್ಲಿ ಸರ್ಕಾರಕ್ಕೆ ಮನವಿ ಮಾಡಿದರು.

ಬೆಂಗಳೂರಿನ ವಿಧಾನಸೌಧದಲ್ಲಿ ಮಂಗಳವಾರ ನಡೆದ ಬಜೆಟ್ ಅಧಿವೇಶನದ ಮೂರನೇ ದಿನದ ಕಲಾಪದಲ್ಲಿ ಪಾಲ್ಗೊಂಡು, ಗಮನ ಸೆಳೆಯುವ ಸೂಚನೆಗಳ ಸಂದರ್ಭದಲ್ಲಿ ಕಾರಂಜಾ ಜಲಾಶಯದ ಸಂತ್ರಸ್ತರಿಗೆ ವೈಜ್ಞಾನಿಕವಾಗಿ ದೊರಕಬೇಕಾದ ಪರಿಹಾರ ಒದಗಿಸುವ ವಿಷಯಕ್ಕೆ ಸಂಬಂಧಿಸಿದಂತೆ ಸರ್ಕಾರದ ಗಮನ ಸೆಳೆದು ಮಾತನಾಡಿದರು.

ಬೀದರ್ ನಲ್ಲಿ ಒಂದೇ ಒಂದು ಜಲಾಶಯವಿದೆ. 7 ಟಿಎಮ್ಸಿಯ ಕಾರಂಜಾ ಶಲಾಯಶಯದಲ್ಲಿ ಸುಮಾರು 28 ಹಳ್ಳಿಗಳು ಮುಳುಗಡೆಯಾಗಿವೆ. ಮುಳುಗಡೆಯಾಗಿರುವ ಬಹಳಷ್ಟು ಹಳ್ಳಿಗಳು ನನ್ನ ಕ್ಷೇತ್ರದಲ್ಲಿವೆ. ಬೀದರ್, ಭಾಲ್ಕಿ, ಔರಾದ್ ಸೇರಿದಂತೆ ಜಿಲ್ಲೆಯ ಜನತೆಗೆ ಈ ಜಲಾಯಶಯದಿಂದಲೇ ಕುಡಿಯುವ ನೀರನ್ನು ಒದಗಿಸಲಾಗುತ್ತಿದೆ. ಜಲಾಶಯದ ನೀರು ನೀರಾವರಿಗೂ ಬಳಕೆ-ಯಾಗುತ್ತಿದೆ.

ಈ ಜಲಾಶಯಕ್ಕಾಗಿ ಭೂಮಿ ನೀಡಿದವರಲ್ಲಿ ಕೆಲವರೂ ಕೋರ್ಟ್ ಗೆ ಹೋಗಿ ಪರಿಹಾರ ಪಡೆದುಕೊಂಡಿದ್ದಾರೆ. ಇನ್ನೂ ಅನೇಕರು ಕೋರ್ಟ್ ಗೆ ಹೋಗದ ಕಾರಣ ಪರಿಹಾರ ತೆಗೆದುಕೊಂಡಿಲ್ಲ. ಅವರಿಗೆ ಎಕರೆಗೆ ಮೂರು ಸಾವಿರ ರೂ. ನೀಡಿದ ಪರಿಹಾರವೇ ಕೊನೆಯಾಗಿದೆ. ಅವರು ಕಳೆದ ಅನೇಕ ತಿಂಗಳುಗಳಿಂದ ರೈತ ಸಂಘಗಳ ನೇತೃತ್ವದಲ್ಲಿ ಬೀದರ್ ಜಿಲ್ಲಾ ಉಸ್ತುವಾರಿ ಸಚಿವರ ಕಛೇರಿ ಮುಂಭಾಗದಲ್ಲಿ ಧರಣಿ ನಡೆಸುತ್ತಿದ್ದಾರೆ.

ಈ ಹಿಂದೆ ನಾನು ಎರಡು ಬಾರಿ ಸಚಿವನಾಗಿದ್ದಾಗ ಅಂದಿನ ಮುಖ್ಯಮಂತ್ರಿ ಕುಮಾರಸ್ವಾಮಿರವರ ನೇತೃತ್ವದಲ್ಲಿ ಪರಿಹಾರದ ವಿಷಯದಲ್ಲಿ ಮಹತ್ವದ ಸಭೆಗಳನ್ನು ಮಾಡಿದ್ದೆ. ಆದ್ರೆ ನಮ್ಮ ಸರ್ಕಾರ ಮುಂದುವರೆಯದ ಕಾರಣ ಇದುವರೆಗೂ ನ್ಯಾಯಯುತವಾಗಿ ಪರಿಹಾರ ಒದಗಿಸಲಾಗಿಲ್ಲ. ಆಗಾಗಿ ಯಾವುದಾದರೂ ಒಂದು ರೂಪದಲ್ಲಿ ಭೂಮಿ ಕಳೆದುಕೊಂಡ ರೈತರಿಗೆ ಮತ್ತು ಹೆಚ್ಚುವರಿ ನೀರು ನಿಂತು ಬೆಳೆ ಕಳೆದುಕೊಳ್ಳುತ್ತಿರುವ ರೈತರಿಗೆ ಪರಿಹಾರ ಒದಗಿಸಬೇಕಿದೆ. ಕಳೆದ ಮೂರು ವರ್ಷದಿಂದ ಪರಿಹಾರ ನೀಡುತ್ತೇವೆ ಅಂತ ಸರ್ಕಾರ ಹೇಳುತ್ತಾ ಬಂದಿದೆ. ಆದ್ರೆ ಇದುವರೆಗೂ ಸೂಕ್ತ ಪರಿಹಾರ ನೀಡಿಲ್ಲ. ಅಲ್ಲದೇ ಮುಳುಗಡೆಯಿಂದ ಸ್ಥಳಾಂತರಗೊಂಡ ಹಳ್ಳಿಗಳ ಜನರಿಗೆ ಸರಿಯಾದ ಮೂಲಭೂತ ಸೌಕರ್ಯಗಳು ದೊರೆಯುತ್ತಿಲ್ಲವೆಂದು ಶಾಸಕ ಬಂಡೆಪ್ಪ ಖಾಶೆಂಪುರ್ ರವರು ಬೇಸರ ವ್ಯಕ್ತಪಡಿಸಿದರು.

ಉತ್ತರ ನೀಡಿ ಮಾತನಾಡಿದ ಸಚಿವ ಮಾಧುಸ್ವಾಮಿರವರು, ಈ ಪ್ರಕರಣದಲ್ಲಿ ನಾವು ಪರಿಹಾರ ಒದಗಿಸುವುದು ಕಷ್ಟಸಾಧ್ಯವಾಗಿದೆ. ನ್ಯಾಯಾಲಯಕ್ಕೆ ಹೋದವರು ಪರಿಹಾರ ಪಡೆದುಕೊಂಡಿದ್ದಾರೆ. ಪ್ರಕರಣ ಈಗಾಗಲೇ ಮುಗಿದು ಹೋಗಿರುವ ಕಾರಣ ಮತ್ತೆ ರಿ ಓಪನ್ ಮಾಡಲಾಗಲ್ಲ. ಇದೇ ರೀತಿಯ ಪ್ರಕರಣಗಳು ಬೇರೆ ಬೇರೆ ಕ್ಷೇತ್ರಗಳಲ್ಲಿವೆ. ಆದರೇ ಇದರಲ್ಲಿ ನಮಗೆ ಕಾನೂನಿನಲ್ಲಿ ಅವಕಾಶವಿಲ್ಲ. ಬೇರೆ ಬೇರೆ ರೀತಿಯಲ್ಲಿ ಹೆಚ್ಚುವರಿ ಜಮೀನುಗಳಲ್ಲಿ ನೀರು ನಿಂತ ಪ್ರಕರಣಗಳಿಗೆ ಪರಿಹಾರ ಒದಗಿಸುತ್ತೇವೆ ಎಂದರು.2018ರಲ್ಲಿ ಕುಮಾರಸ್ವಾಮಿರವರು ಮುಖ್ಯಮಂತ್ರಿ ಇದ್ದಾಗ ನಾವು ಅವರ ಅಧ್ಯಕ್ಷತೆಯಲ್ಲಿ ನೀರಾವರಿ ಸಚಿವರು ಮತ್ತು ಸಂಬಂಧಿಸಿದ ಅಧಿಕಾರಿಗಳನ್ನೊಳಗೊಂಡು ಸಭೆ ನಡೆಸಿ, ಪರಿಹಾರಕ್ಕೆ ಕ್ರಮಕೈಗೊಳ್ಳಲು ಆದೇಶ ನೀಡಿದ್ದೇವು. ಮಾನವೀಯತೆಯ ದೃಷ್ಟಿಯಿಂದಲಾದರು ಪರಿಹಾರ ಒದಗಿಸಬೇಕಾಗಿದೆ. ಆಗಾಗಿ ಈ ಬಜೆಟ್ ನಲ್ಲಿ ಕಾರಂಜಾ ಸಂತ್ರಸ್ತರಿಗೆ ಪರಿಹಾರ ಘೋಷಣೆ ಮಾಡಬೇಕೆಂದು ಶಾಸಕ ಬಂಡೆಪ್ಪ ಖಾಶೆಂಪುರ್ ರವರು ಸರ್ಕಾರಕ್ಕೆ ಮನವಿ ಮಾಡಿದರು. ನೀರಾವರಿ ಸಚಿವ ಗೋವಿಂದ ಕಾರಜೋಳರವರೊಂದಿಗೆ ಮಾತನಾಡಿ ಕ್ರಮಕೈಗೊಳ್ಳುತ್ತೇವೆಂದು ಸಚಿವ ಮಾಧುಸ್ವಾಮಿರವರು ಭರವಸೆ ನೀಡಿದರು.

## ಡಾ, ಅಂಬೇಡ್ಕರ್ ಸ್ಪರ್ಧಾತ್ಮಕ ಪರೀಕ್ಷಾ ಪೋಸ್ಟರ್ ಬಿಡುಗಡೆ



ಧಾರವಾಡ : ಆಯುಕ್ತರು ಸಮಾಜ ಕಲ್ಯಾಣ ಇಲಾಖೆ ಬೆಂಗಳೂರು ಇವರು ಪ್ರಕಟಿಸಿದ ದಲಿತ ವಿದ್ಯಾರ್ಥಿ ಪರಿಷತ್ ನಡೆಸುತ್ತಿರುವ ಅಂಬೇಡ್ಕರ್ ಸ್ಪರ್ಧಾತ್ಮಕ ಪರೀಕ್ಷೆಗೆ ಸಮಾಜ ಕಲ್ಯಾಣ ಇಲಾಖೆಯ ಅಧೀನದಲ್ಲಿ ಬರುವ ಎಲ್ಲಾ ವಸತಿ ನಿಲಯಗಲ್ಲಿ ವಾಸಿಸುತ್ತಿರುವ ಎಲ್ಲಾ ಸಮುದಾಯದ ವಿದ್ಯಾರ್ಥಿಗಳು ಅಂಬೇಡ್ಕರ್ ಸ್ಪರ್ಧಾತ್ಮಕ ಪರೀಕ್ಷೆಗೆ ಹೆಚ್ಚಿನ ಸಂಖ್ಯೆಯಲ್ಲಿ ನೋಂದಣಿ ಮಾಡಿಕೊಳ್ಳುವ ಮೂಲಕ ಅವಕಾಶವನ್ನು ಸದುಪಯೋಗ ಮಾಡಿಕೊಳ್ಳಲು ಸಂಬಂಧಿಸಿದ ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರ ಮೂಲಕ ಎಲ್ಲಾ ನಿಲಯ ಪಾಲಕರಿಗೆ ತಲುಪಿಸಿ ವಿದ್ಯಾರ್ಥಿಗಳಿಗೆ ಹೆಚ್ಚಿನ ಸಂಖ್ಯೆಯಲ್ಲಿ ನೋಂದಣಿಗೆ ಸಹಕರಿಸುವಂತೆ ಆಯುಕ್ತರ ನೋಟೀಸ್ ಅನ್ನು ಧಾರವಾಡ ತಾಲೂಕ ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರ ಗಮನಕ್ಕೆ ತಂದು ಅಂಬೇಡ್ಕರ್ ಸ್ಪರ್ಧಾತ್ಮಕ ಪರೀಕ್ಷೆಯ ಪೋಸ್ಟರ್ ಅನ್ನು ಬಿಡುಗಡೆಗೊಳಿಸಲಾಯಿತು.

ಈ ವೇಳೆ ಜಿಲ್ಲಾ ಸಂಚಾಲಕ ಹನುಮಂತ ದಾಸರ, ಬಿಜೆಪಿ ಯುವ ಮೋರ್ಚಾದ ಯಾದಗಿರಿ ಜಿಲ್ಲಾ ಉಪಾಧ್ಯಕ್ಷ ಸುರೇಶ್ ಕೋರಿ, ಯುವ ನ್ಯಾಯವಾದಿಗಳಾದ ವಿಜಯ್ ಯಾದವ್ ಹಾಗೂ ಪದಾಧಿಕಾರಿಗಳು ಭಾಗಿಯಾಗಿದ್ದರು.

## ಕೆನರಾ ಬ್ಯಾಂಕ ಸಿಬ್ಬಂದಿ ವಿರುದ್ದ ಹಿಡಿಶಾಪ ಹಾಕಿದ ಬೆಳಗುಂದಿ ಗ್ರಾಮಸ್ಥರು




ಬೆಳಗಾವಿ : ಬೆಳಗಾವಿ ತಾಲೂಕಿನಲ್ಲಿ ಬರುವ ಗ್ರಾಮಿಣ ಬಾಗದಲ್ಲಿ ಸಾರ್ವ ಜನಿಕರು ತಮ್ಮ ವ್ಯವಹಾರಗಳ ನಡೆಸಲು ಬ್ಯಾಂಕಗಳು ಬೇಕೆ ಬೇಕು ರೈತರಿಗೆ ಪ್ರತಿ ಓಬ್ಬರಿಗೂ ವ್ಯವಹಾರಿಕವಾಗಿ ತಮ್ಮ ತಮ್ಮ ಖಾತೆಗಳನ್ನು ಬ್ಯಾಂಕಿನಲ್ಲಿ ತೆರೆದು ವ್ಯವಹಾರಗಳನ್ನು ನಡೆಸುವುದು ಸರ್ವೇಸಾಮಾನ್ಯ ಇಲ್ಲೊಂದು ಬ್ಯಾಂಕು ಸಾರ್ವಜನಿಕರಿಗೆ ಗುಂಡಾವರ್ತನೆ ತೋರುತ್ತಿದ್ದಾರೆ ಎಂದು ಹೇಳಲಾಗುತ್ತಿದೆ.

ಬೆಳಗಾವಿಯ ತಾಲೂಕಿನಲ್ಲಿ ಬರುವ ಬೆಳಗುಂದಿ ಗ್ರಾಮದಲ್ಲಿ ಗ್ರಾಮೀಣ ಜನರಿಗೆ ಸೂಕ್ತ ಮಾಹಿತಿ ನೀಡುವಲ್ಲಿ ಅವರ ಬ್ಯಾಂಕ್ ಖಾತೆಯ ವ್ಯವಹಾರಗಳನ್ನು ತಿಳಿಸಿಕೊಡುವಲ್ಲಿ ಸರಿಯಾಗಿ ಸಾರ್ವಜನಿಕರ ಜೊತೆಯಲ್ಲಿ ವರ್ತಿಸದೆ ಇರುವದು ಬೆಳಕಿಗೆ ಬಂದಿದೆ.

ಹೌದು ಬೆಳಗುಂದಿ ಗ್ರಾಮದಲ್ಲಿ ಕೆನರಾ ಬ್ಯಾಂಕ್ ಸಿಬ್ಬಂದಿಗಳು ಸಾರ್ವಜನಿಕರ ಜೊತೆ ಸರಿಯಾಗಿ ವರ್ತಿಸುತ್ತಿಲ್ಲಾ ಎಂದು ಸಾರ್ವಜನಿಕರು, ಪದೇಪದೇ ಹೇಳುತ್ತಾನೆ ಇದ್ದಾರೆ.

ಆದರೆ ಇವರಿಗೆ ಮೂಗುದಾರ ಹಾಕುವರು ಯಾರು ಎನ್ನುವ ಪ್ರಶ್ನೆ ಸಾರ್ವಜನಿಕರಲ್ಲಿ ಕಾಡುತ್ತಿದೆ.

ರೈತರಿಗೆ ವೃದ್ಧಾಪವೇತನ ವೃದ್ಧರಿಗೆ ಅಂಗವಿಕಲರಿಗೆ ಎಲ್ಲ ಸಾರ್ವಜನಿಕರಿಗೆ ಸರಿಯಾಗಿ ವ್ಯವಹಾರಗಳ ಬಗ್ಗೆ ಕೇಳಿದರೆ ತಿಳಿಸದೆ.

ಬ್ಯಾಂಕಿಗೆ ಬಂದರೆ ಸರಿಯಾಗಿ ವರ್ತಿಸದೇ ಅವಾಜ್ ಹಾಕುತ್ತಾ ವರ್ತಿಸುವುದು ದಿನ ನಿತ್ಯ ಈ ಬ್ರಾಂಚ್ ಶಾಖೆಯಲ್ಲಿ ನಡೆಯುತ್ತಿದೆ ಎಂದು ಸಾರ್ವಜನಿಕರು ಕಿಡಿಕಾರಿದ್ದಾರೆ.

ಆದರೆ ಇತ್ತ ಗಮನ ಹರಿಸಿ ಗ್ರಾಮೀಣ ಜನರಿಗೆ ವ್ಯವಹಾರಗಳ ಮಾಹಿತಿ ಹಾಗೂ ಸಾರ್ವಜನಿಕರ ಜೊತೆ ಪ್ರೀತಿ ಬಾಂಧವ್ಯದಿಂದ ವರ್ತಿಸಲು ಸೂಕ್ತ ಕ್ರಮ ತೆಗೆದುಕೊಂಡು ಹಿಂತವರ ವಿರುದ್ದ ನಿರ್ದಾಕ್ಷಿನವಾಗಿ ಕ್ರಮ ಕೈಗೊಂಡು ಗ್ರಾಮಿಣ ಬಾಗದ ಸಾರ್ವಜನಿಕರಿಗೆ ಸಹಕರಿಸುವ ನಿಟ್ಟಿನಲ್ಲಿ ಕೆಲಸ ಮಾಡಬೇಕಾಗಿದೆ ಬ್ಯಾಂಕ್ ಖಾತೆದಾರರಿಗೆ ಏಕ ವಚನದಲ್ಲಿ ಮಾತನಾಡುವುದು ಕುಚೆಷ್ಟೆಮಾಡಿ ನಗುವುದು ನಗುವುದೆ ಇವರ ಕೆಲಸವಗಿದೆ. ಈ ವಿಚಾರಗಳನ್ನೆಲ್ಲಾ ಪರಿಸಿಲನೆ ಮಾಡಿ

ಜಿಲ್ಲಾಧಿಕಾರಿಗಳು ಕೆನರಾ ಬ್ಯಾಂಕ್ ಸಿಬ್ಬದ್ದಿಗಳ ಮೇಲೆ ಕ್ರಮ ಕೈಗೊಳ್ಳುತಾರಯೇ ಎಂದು ಕಾದು ನೋಡಬೇಕಾಗಿದೆ.

## ದಾಸರಹಳ್ಳಿ ಬಿಜೆಪಿ ಮಂಡಲ ಅಧ್ಯಕ್ಷ ಲೋಕೇಶ್ ಗೌಡ ನೇತೃತ್ವದಲ್ಲಿ ಶ್ರೀನಿವಾಸ ಕಲ್ಯಾಣೋತ್ಸವ



ಪೀಣ್ಯ ದಾಸರಹಳ್ಳಿ: ಭಾರತೀಯ ಸಂಸ್ಕೃತಿ ಸಂಪ್ರದಾಯ ಹೊಂದಿದ ದೇಶ ಎಂದರೆ ಭಾರತ ದೇಶ. ಈಗಿನ ಪರಿಸ್ಥಿತಿಯಲ್ಲಿ ಸಮಾಜ ನಿರ್ಮಾಣ ಮಾಡಲು ಧಾರ್ಮಿಕ ಕಾರ್ಯಕ್ರಮಗಳು ಅಗತ್ಯ ಎಂದು ಪಟ್ಟನಾಯಕನಹಳ್ಳಿಯ ಶ್ರೀಸ್ಪಟಿಕಪುರಿ ಮಹಾಸಂಸ್ಥಾನ ಮಠದ ಪೀಠಾಧ್ಯಕ್ಷರಾದ ಶ್ರೀ ನಂಜಾವಧೂತ ಸ್ವಾಮಿ ಜೀ ಹೇಳಿದರು.

ರಾಜಗೋಪಾಲನಗರದ ಪೀಣ್ಯ 2ನೇ ಹಂತದ ಜಿಕೆಡಬ್ಲ್ಯೂ ಲೇಔಟ್ ಮುಖ್ಯ ರಸ್ತೆಯಲ್ಲಿರುವ ಶ್ರೀ ರಾಮ ದೇವಸ್ಥಾನ ಬಳಿ ಮುನಿಗಂಗಪ್ಪ ಮೈದಾನದಲ್ಲಿ ದಾಸರಹಳ್ಳಿ ವಿಧಾನಸಭಾ ಕ್ಷೇತ್ರದ ಬಿಜೆಪಿ ಅಧ್ಯಕ್ಷ ಎನ್ ಲೋಕೇಶ್ ಗೌಡರ ನೇತೃತ್ವದಲ್ಲಿ ಆಯೋಜಿಸಿದ್ದ ಶ್ರೀನಿವಾಸ್ ಕಲ್ಯಾಣೋತ್ಸವದಲ್ಲಿ ಪಾಲ್ಗೊಂಡು ಆಶೀರ್ವಚನ ನೀಡಿದರು.

ಈ ಶ್ರೀನಿವಾಸ್ ಕಲ್ಯಾಣೋತ್ಸವದಲ್ಲಿ ಧಾರ್ಮಿಕ ವಿಧಿ ವಿಧಾನಗಳು ಹೋಮ ಹವನ ಗೋವಿಂದನ ಕೀರ್ತನೆ ಹಾಡು ಭಕ್ತಿ ಗೀತೆಗಳು ಮತ್ತು ವೇದಾ ಘೋಷಣೆಗಳೊಂದಿಗೆ ಮಹಾ ಮಂಗಳಾರತಿ ಜರುಗಿದವು ವಿಶೇಷವಾಗಿ 12ಸಾವಿರ ತಿರುಪತಿ ಲಾಡು ಪ್ರಸಾದ್ 10ಸಾವಿರ ಜನರಿಗೆ ಬಟ್ಟೆ ಮತ್ತು ಲಾಡು ವಿತರಿಸಲಾಯಿತು.

ಈ ಕಾರ್ಯಕ್ರಮದಲ್ಲಿ ಆದಿಚುಂಚನಗಿರಿ ಮಹಾಸಂಸ್ಥಾನ ಮಠದ ವಿಜಯನಗರ ಶಾಖೆ-ಯ ಶ್ರೀ ಸೌಮ್ಯನಾಥ್ ಸ್ವಾಮಿ ಜಿ, ಮಾಜಿ ಮುಖ್ಯಮಂತ್ರಿಗಳು ಬೆಂಗಳೂರು ಉತ್ತರ ಲೋಕಸಭಾ ಸದಸ್ಯ ಡಿವಿ ಸದಾನಂದ ಗೌಡರು, ದಾಸರಹಳ್ಳಿ ವಿಧಾನಸಭಾ ಕ್ಷೇತ್ರದ ಬಿಜೆಪಿ ಮಾಜಿ ಶಾಸಕ ಹಾಗೂ ರಾಜ್ಯ ಬಿಜೆಪಿ ಕಾರ್ಯಕಾರಿಣಿ ಸದಸ್ಯ ಎಸ್ ಮುನಿರಾಜು, ಜಿಲ್ಲಾ ಪಂಚಾಯಿತಿ ಮಾಜಿ ಅಧ್ಯಕ್ಷ ಜಿ.ಮರಿಸ್ವಾಮಿ, ಬೆಂಗಳೂರು ಜಿಲ್ಲಾ ಬಿಜೆಪಿ ಅಧ್ಯಕ್ಷ ನಾರಾಯಣ ಗೌಡ,ಮಾಜಿ ಪಾಲಿಕೆ ಸದಸ್ಯರಾದ ಹೆಚ್.ಎನ್ ಗಂಗಾಧರ್ತಿಮ್ಮನಂಜಯ್ಯ, ನರಸಿಂಹ ನಾಯಕ್, ಗಂಗರಾಜು, ಶ್ರೀಮತಿ ಭಾಗ್ಯಮ್ಮ ಕೃಷ್ಣಯ್ಯ, ಕ್ಷೇತ್ರದ ಬಿಜೆಪಿ ಹಿರಿಯ ನಾಯಕ ಬಿ ಎಲ್ ಸಿಂಹ, ಶ್ರೀನಿವಾಸ್ ಜೆವಿಎಸ್, ಕ್ಷೇತ್ರದ ಬಿಜೆಪಿ ಯುವ ಮೋರ್ಚಾ ಅಧ್ಯಕ್ಷ ಸತೀಶ್ ಜೆವಿಎಸ್, ವಾರ್ಡ್ ಅಧ್ಯಕ್ಷರಾದ ನರಸಿಂಹ ಮೂರ್ತಿ ಮಂಗಳ ವಾಟರ್, ಬಿ ಸುರೇಶ್, ನಿಸರ್ಗ ಕೆಂಪರಾಜು, ನಾಗೇಶ್, ಹಿರಿಯರಾದ ರಾಧಾಕೃಷ್ಣ ಶೆಟ್ಟಿ, ಪುಟ್ಟಸ್ವಾಮಿ, ದಿನೇಶ್,ವಿಠಲ್ ಬಿರೆದಾರ್, ಸಹಸ್ರಾರು ಭಕ್ತಾದಿಗಳು ಭಾಗವಹಿಸಿದ್ದರು.

## ಮಾರ್ಚ-20 ರಂದು ಬೃಹತ್ ಸಮಾವೇಶ



ಗಂಗಾವತಿ: ಕರ್ನಾಟಕ ದಲಿತ ಸಂಘರ್ಷ ಸಮಿತಿ (ರಿ) ಪ್ರೋ. ಬಿ. ಕೃಷ್ಣಪ್ಪ ಸ್ಥಾಪಿತ ಸಂಘಟನೆಯ ಕಲಬುರ್ಗಿ ವಿಭಾಗ ಮಟ್ಟದ ಪದಾಧಿಕಾರಿಗಳ ಸಭೆಯಲ್ಲಿ ತೆಗೆದುಕೊಂಡ ನಿರ್ಣಯದ ಮೇರೆಗೆ ಮುಂಬರುವ ಮಾರ್ಚ-20 ರಂದು ಕಲಬುರ್ಗಿ ನಗರದಲ್ಲಿ ವಿಭಾಗ ಮಟ್ಟದ ಒಳ ಮೀಸಲಾತಿಯಲ್ಲಿ ಬರುವ ಹೊಲೆಯ ಮಾದಿಗ ಮತ್ತು ಅಲೆಮಾರಿ ಜನಾಂಗವನ್ನು ಸೇರಿಸಿ ಬೃಹತ್ ಸಮಾವೇಶ ಮಾಡಲು ತೀರ್ಮಾನಿಸಲಾಗಿದೆ ಎಂದು ಸಂಘಟನೆಯ ಕೊಪ್ಪಳ ಜಿಲ್ಲಾ ಸಂಚಾಲಕರಾದ ಬಿ. ಸಂಜೀವಪ್ಪ ಪ್ರಕಟಣೆಯಲ್ಲಿ ತಿಳಿಸಿದರು.

ವಿಭಾಗ ಮಟ್ಟದ ವ್ಯಾಪ್ತಿಯಲ್ಲಿ ಬರುವ 8 ವಿಧಾನಸಭಾ ಕ್ಷೇತ್ರಗಳ ಮೀಸಲಾತಿ ಹಂಚಿಕೆಯಲ್ಲಿ ಹೊಲೆಯ ಮತ್ತು ಮಾದಿಗ ಜಾತಿಗಳಿಗೆ ಪ್ರಾತಿನಿಧ್ಯ ಸಿಕ್ಕಿರುವುದಿಲ್ಲ. ಏಕೆಂದರೆ ಎಂಟು ಮೀಸಲಾತಿ ಕ್ಷೇತ್ರಗಳಲ್ಲಿ ನಾಲ್ಕು ಕ್ಷೇತ್ರಗಳಲ್ಲಿ ಲಮಾಣಿ-4, ಹೊಲೆಯ-1, ಮಾದಿಗ-1, ವಡ್ಡ-1, ಸಮಗಾರ-1 ಒಟ್ಟು 8 ಕ್ಷೇತ್ರಗಳಲ್ಲಿ ಜನಸಂಖ್ಯೆಗನುಗುಣವಾಗಿ ಇರಬೇಕಾದ ಮೀಸಲಾತಿ ಕೈತಪ್ಪಿದೆ. ನಮ್ಮನ್ನು ಆಳುವ ರಾಜಕೀಯ ಪಕ್ಷಗಳು ಜಾತಿ ಜನಾಂಗಕ್ಕೆ ಅನುಗುಣವಾಗಿ ಟಿಕೆಟ್ ಹಂಚಿಕೆ ಮಾಡದೇ ಹೊಲೆಯ ಮತ್ತು ಮಾದಿಗರಿಗೆ ಅನ್ಯಾಯ ಮಾಡಿದ್ದಾರೆ.

ಈ ಸಮಸ್ಯೆಯನ್ನು ಸರಿಪಡಿಸುವ ಮಾರ್ಗ ಎ.ಜೆ ಸದಾಶಿವ ಆಯೋಗದ ವರದಿ ಅಂಗೀಕರಿಸಿ, ಕೇಂದ್ರ ಸರ್ಕಾರಕ್ಕೆ ಸಲ್ಲಿಸಿದಲ್ಲಿ ರಾಜ್ಯದಲ್ಲಿರುವ ಜಾತಿ ಜನಸಂಖ್ಯೆಗೆ ಅನುಗುಣವಾಗಿ ಮೀಸಲಾತಿ ಹಂಚಿಕೆಯಾಗಲು ಸಾಧ್ಯವಾಗುತ್ತದೆ. ಜಾತಿಗಳನ್ನು ಒಂದುಗೂಡಿಸಿ ಸಮಾವೇಶ ಮಾಡುವ ಮುಖಾಂತರ ನಮ್ಮ ಜನಾಂಗವನ್ನು ಎಚ್ಚರಗೊಳಿಸುವ ಕೆಲಸ ಕರ್ನಾಟಕ ದಲಿತ ಸಂಘರ್ಷ ಸಮಿತಿ ಪ್ರೋ. ಬಿ. ಕೃಷ್ಣಪ್ಪ ಸ್ಥಾಪಿತ ಸಂಘಟನೆ ಹೋರಾಟ ಮಾಡುತ್ತದೆ ಎಂದು ತಿಳಿಸಿದರು.

ಬೆಂಗಳೂರಿನ ಫ್ರೀಡಂ ಪಾರ್ಕ್ನಲ್ಲಿ ಸಮಾವೇಶಗೊಳ್ಳಲಿರುವ ಒಳಮೀಸಲಾತಿ ಹೋರಾಟಕ್ಕೆ ನಮ್ಮ ಸಮಿತಿ ಸಂಪೂರ್ಣ ಬಂಬಲವಿದೆ. ಬೆಂಗಳೂರಿನ ಜೈನ್ ವಿಶ್ವವಿದ್ಯಾಲಯದಲ್ಲಿ ಬಾಬಾಸಾಹೇಬ್ ಅಂಬೇಡ್ಕರ್ರವರ ಹೆಸರನ್ನು ಅವಹೇಳನ ಮಾಡಿದ್ದಕ್ಕಾಗಿ ಪ್ರತಿಭಟಿಸಿ ವಿಶ್ವವಿದ್ಯಾಲಯವನ್ನು ರದ್ದುಗೊಳಿಸಲು ರಾಜ್ಯಪಾಲರಿಗೆ ಒತ್ತಾಯಿಸಿ, ಕರ್ನಾಟಕ ದಲಿತ ಸಂಘರ್ಷ ಸಮಿತಿ ಮಾನ್ಯ ಜಿಲ್ಲಾಧಿಕಾರಿಗಳು ಕೊಪ್ಪಳ ಇವರ ಮುಖಾಂತರ ಘನವೆತ್ತ ರಾಜ್ಯಪಾಲರಿಗೆ ದಿನಾಂಕ: 14.02.2023 ರಂದು ಮನವಿ ಸಲ್ಲಿಸಲಾಗಿದೆ ಎಂದು ತಿಳಿಸಿದರು. ಈ ಸಂದರ್ಭದಲ್ಲಿ ಸಂಘಟನೆಯ ಜಿಲ್ಲಾ ಸಂಘಟನಾ ಸಂಚಾಲಕರಾದ ಮುತ್ತಣ್ಣ ಹುಡೇವು, ಮರಿಯಪ್ಪ ನಾಗನಕಲ್, ಜಿಲ್ಲಾ ಖಜಾಂಚಿಯಾದ ದುರುಗಪ್ಪ ಐಹೊಳೆ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

## ವಿದ್ಯಾರ್ಥಿಗಳಿಗೆ 112 ಕುರಿತು ಪೊಲೀಸರಿಂದ ಜಾಗೃತಿ




ಕೊಪ್ಪಳ: ತುರ್ತು ಸ್ಪಂದನ ಸಹಾಯ ವ್ಯವಸ್ಥೆ ಆರಂಭಿಸ ಲಾಗಿದ್ದು, ವಿದ್ಯಾರ್ಥಿಗಳು ಯಾವುದೇ ತುರ್ತು ಸಂದರ್ಭದಲ್ಲಿ 112ಗೆ ಕರೆ ಮಾಡಿ ಸಹಾಯ ಪಡೆಯಬಹುದಾಗಿದೆ ಎಂದು ಗ್ರಾಮೀಣ ವೃತ್ತದ ಸಿಪಿಐ ಮಹಾಂತೇಶ ಸಜ್ಜನ್ ಹೇಳಿದರು.

ಇಂದು ಬೆಳಿಗ್ಗೆ ಮುನಿರಾಬಾದ್ ಪೊಲೀಸ್ ಠಾಣೆಯಲ್ಲಿ ಮಕ್ಕಳ ಹಕ್ಕುಗಳ ಬಗ್ಗೆ ಹಾಗೂ ತುರ್ತು ಸಂದರ್ಭ ಸಹಾಯಕ್ಕಾಗಿ 112ಕ್ಕೆ ಕರೆ ಮಾಡಿ ಎಂಬ ವಿದ್ಯಾರ್ಥಿಗಳಿಗೆ ಜಾಗೃತಿ ಕಾರ್ಯಕ್ರಮದಲ್ಲಿ ಮಾತನಾಡಿದರು.

ಈ ಮೊದಲು ನೋಂದವರು, ಮಹಿಳೆಯರು, ಹಿರಿಯ ನಾಗರಿಕರು ತುರ್ತು ಸಮಯದಲ್ಲಿ ಪೊಲೀಸ್ ಇಲಾಖೆ, ಅಗ್ನಿಶಾಮಕ ಹಾಗೂ ಆಂಬುಲೆನ್ಸ್ ಸೇವೆಗಳಿಗಾಗಿ ಬೇರೆ ಬೇರೆ ಸಂಖ್ಯೆಗೆ ಕರೆ ಮಾಡಬೇಕಾಗಿತ್ತು. ಇದೀಗ ಎಲ್ಲ ಇಲಾಖೆಗಳಿಗೆ ಒಂದೇ ತುರ್ತು ಕರೆ ಸಂ-ಖ್ಯೆ ಗೊತ್ತುಪಡಿಸಲಾಗಿದೆ. ತುರ್ತು ಸಮಯದಲ್ಲಿ ತೊಂದರೆಗೊಳಗಾದ ವ್ಯಕ್ತಿಯನ್ನು ಮೊದಲು ಪೊಲೀಸ್ ಸಿಬ್ಬಂದಿಯೇ ಸಂಪರ್ಕಿಸಲಿದ್ದಾರೆ. ಅಪಘಾತ, ಅಪರಾಧ ಹಾಗೂ ವಿಪತ್ತು ಸಂಭವಿಸಿದಾಗ ಆ ಸ್ಥಳಕ್ಕೆ ಬಂದು ತಕ್ಷಣಕ್ಕೆ ಬೇಕಾದ ನೆರವು ನೀಡಿ ರಕ್ಷಣೆ ಮಾಡಲಿದ್ದಾರೆ ಎಂದು ವಿದ್ಯಾರ್ಥಿಗಳಿಗೆ ಮಾಹಿತಿ ನೀಡಿದರು.

### ಶ್ರೀ ಸಂತ್ ಸೇವಾಲಾಲ್ ಜಯಂತಿ–2023

## ಸಮಾಜದ ಏಳಿಗೆಗಾಗಿ ಶ್ರಮಿಸಿದ ಸಂತ ಸೇವಾಲಾಲ್ ಕೊಡುಗೆ ಅಪಾರ: ಶೋಭಾ ಸೋಮನಾಚೆ

ಬೆಳಗಾವಿ: ಶ್ರೀ ಸಂತ ಸೇವಾಲಾಲ್ ಅವರು ಪವಾಡ ಪುರುಷರು. ಸತ್ಯ, ಅಹಿಂಸೆಯ ಮೂಲಕ ಅನೇಕ ಸಂದೇಶಗಳನ್ನು ನೀಡಿ–ದ್ದಾರೆ. ಸಮಾಜದ ಏಳಿಗೆಗಾಗಿ ನಿರಂತರ ಶ್ರಮಿಸಿದ ಅವರ ಕೊಡುಗೆ ಅಪಾರ" ಎಂದು ಮಹಾನಗರ ಪಾಲಿಕೆಯ ಮೇಯರ್ ಶೋಭಾ ಸೋಮನಾಚೆ ಅವರು ತಿಳಿಸಿದರು.

ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಮಹಾನರ ಪಾಲಿಕೆಯ ವತಿಯಿಂದ ನಗರದ ಕುಮಾರ ಗಂಧರ್ವ ಕಲಾಮಂದಿರದಲ್ಲಿ ಬುಧವಾರ (ಫೆ.15) ನಡೆದ ಶ್ರೀ ಸಂತ್ ಸೇವಾಲಾಲ್ ಜಯಂತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಇದೇ ಸಂದರ್ಭದಲ್ಲಿ ವಿಶೇಷ ಉಪನ್ಯಾಸ ನೀಡಿದ ನಾರಾಯಣ ರಾಠೋಡ ಅವರು, ಶ್ರೀ ಸಂತ ಸೇವಾಲಾಲ್ ಬಂಜಾರ ಸಮುದಾಯದ ರಕ್ಷಕರಾಗಿ ಸಂಸ್ಕೃತಿ ಪರಂಪರೆಯ ಉಳವಿಗಾಗಿ ಹೋರಾಡಿದ



ಮಹಾ ತಪಸ್ವಿ, ಸಮಾಜ ಸುಧಾರಕರು ಎಂದು ಹೇಳಿದರು

ಸಂತ್ ಸೇವಾಲಾಲ್ ಅವರ ಪವಾಡ, ಜೀವನ ಚರಿತ್ರೆಯ ಕುರಿತು ಎಲ್ಲರೂ ತಿಳಿದುಕೊಳ್ಳಬೇಕು. ಬಂಜಾರ ಸಮುದಾಯದವರು ವೀರ, ಶೂರರು ಮಾತ್ರವಲ್ಲದೇ ವ್ಯಾಪಾರ ಮಾಡುವುದರಲ್ಲಿ ಬ್ರಿಟಿಷರನ್ನು ಮೀರಿಸಿದ್ದಾರೆ. ಸಂತ ಸೇವಾಲಾಲ್ ಅವರು ಕೇವಲ ಒಂದು ಸಮುದಾಯಕ್ಕೆ ಸೀಮಿತವಾಗಿರದೇ ಇಡೀ ಮಾನವ ಸಮಾಜಕ್ಕೆ ಹಾಗೂ ಎಲ್ಲ ಜೀವರಾಶಿಗಳು ಸುಖವಾಗಿ ಇರಬೇಕು ಎಂದು ಬಯಸಿದವರು.

ಜಾತಿ,ಧರ್ಮ ಎಂಬ ಬೇದ ಭಾವ ಇಲ್ಲದೆ ಎಲ್ಲರು ಒಂದೇ ಸಮಾನರು ಎಂದು ವಿಶ್ವ ಮಾನವ ಸಂದೇಶ ಸಾರುವ ಮೂಲಕ ಸಮಾಜದಲ್ಲಿ ಅನೇಕ ಒಳ್ಳೆಯ ಕಾರ್ಯಗಳನ್ನು ಮಾಡಿದ್ದಾರೆ. ಅದೇ ರೀತಿಯಲ್ಲಿ ಎಲ್ಲ ಜನಾಂಗದವರು ಒಂದೇ ಎಂಬ ಭಾವನೆಯಿಂದ ಬಂಜಾರ ಸಮುದಾಯದವರು ಇದಾರೆ ಎಂದು ಹೇಳಿದರು. ಸಮಾಜದಲ್ಲಿ ಇರುವ ಎಲ್ಲ ಹೆಣ್ಣು ಮಕ್ಕಳನ್ನು ಸಹೋದರಿಯರಂತೆ ಕಾಣುವ ಮೂಲಕ ಮದುವೆ ಆಗದೆ ಸನ್ಯಾಸತ್ವ ಸ್ವೀಕರಿಸಿ, ಸಂತ ಸೇವಾಲಾಲ್ ರಾಗಿ ಸಮಾಜಕ್ಕಾಗಿ ಶ್ರಮಿಸಿದ್ದಾರೆ ಎಂದು ಪ್ರೊ. ನಾರಾಯಣ ರಾಠೋಡ ಅವರು ಉಪನ್ಯಾಸದಲ್ಲಿ ತಿಳಿಸಿದರು.

ಇದೇ ಸಂದರ್ಭದಲ್ಲಿ ಬಂಜಾರ ಸಮುದಾಯದ ಹಿರಿಯರಿಗೆ ಮುಖಂಡರಿಗೆ, ಸನ್ಮಾನಿಸಲಾಯಿತು.

ಮಹಾನಗರ ಪಾಲಿಕೆಯ ಉಪ ಮೇಯರ ರೇಷ್ಮಾ ಪಾಟೀಲ, ಕಾರ್ಪೊರೇಟರ ಲಕ್ಷ್ಮಿ ರಾಠೋಡ ,ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಉಪ ನಿರ್ದೇಶಕರಾದ ವಿದ್ಯಾವತಿ ಭಜಂತ್ರಿ, ಹಾಗೂ ಸಮುದಾಯದ ಹಿರಿಯರು, ಮುಖಂಡರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು

**ಸಂತ ಸೇವಾಲಾಲ್ ಭಾವಚಿತ್ರದ ಮೆರವಣಿಗೆ:**

ಇದಕ್ಕೂ ಮುನ್ನ ಕಿಲ್ಲಾ ಕೋಟೆ ಕೆರೆಯಿಂದ ನಗರದ ಕುಮಾರ ಗಂಧರ್ವ ಕಲಾಮಂದಿರದವರೆಗೆ ನಡೆದ ಶ್ರೀ ಸಂತ್ ಸೇವಾಲಾಲ್ ಅವರ ಭಾವಚಿತ್ರದ ಭವ್ಯ ಮೆರವಣಿಗೆಗೆ ಸಂಸದೆ ಮಂಗಳಾ ಅಂಗಡಿ ಅವರು ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಬೆಳಗಾವಿ ಉತ್ತರ ವಿಧಾನಸಭಾ ಮತಕ್ಷೇತ್ರದ ಶಾಸಕರಾದ ಅನೀಲ ಬೆನಕೆ, ಅಪರ ಜಿಲ್ಲಾಧಿಕಾರಿ ಕೆ.ಟಿ ಶಾಂತಲಾ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಉಪ ನಿರ್ದೇಶಕರಾದ ವಿದ್ಯಾವತಿ ಭಜಂತ್ರಿ, ಹಾಗೂ ಸಮಾಜದ ಮುಖಂಡರು ಹಾಜರಿದ್ದರು.

## 260ನೇ ಮಾಸಿಕ ಶಿವಾನುಭವ ಹಾಗೂ ಮಹಾಶಿವರಾತ್ರಿ ಕಾರ್ಯಕ್ರಮ

ಬೆಳಗಾವಿ: ನಗರದ ಕಾರಂಜಿ ಮಠದಲ್ಲಿ ಬರುವ ಶನಿವಾರ 18 ರಂದು ಸಾಯಂಕಾಲ 6ಗಂಟೆಗೆ 260ನೇ ಮಾಸಿಕ ಶಿವಾನುಭವ ಹಾಗೂ ಮಹಾಶಿವರಾತ್ರಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದ್ದು ಸಾಹಿತಿ ಪ್ರಕಾಶ ಗಿರಿಮಲ್ಲನವರ ಅವರಿಂದ ಉಪನ್ಯಾಸ ಜರುಗಲಿದೆ.

ಕಾರ್ಯಕ್ರಮದ ಸಾನಿಧ್ಯವನ್ನು ಶ್ರೀಮಠದ ಗುರುಸಿದ್ಧ ಮಹಾಸ್ವಾಮಿಗಳು ವಹಿಸಲಿದ್ದು, ಬೆಳಗಾವಿ ನಾಗನೂರು ರುದ್ರಾಕ್ಷಿಮಠದ ಡಾ. ಅಲ್ಲಮಪ್ರಭು ಮಹಾಸ್ವಾಮಿಗಳ ನೇತೃತ್ವ, ಶ್ರೀ ಶಿವಯೋಗಿ ದೇವರ ಸಮ್ಮುಖದಲ್ಲಿ ಜರುಗಲಿದ್ದು ಅಧ್ಯಕ್ಷತೆಯನ್ನು ಸಂಸದೆ ಶ್ರೀಮತಿ ಮಂಗಳಾ ಅಂಗಡಿ ವಹಿಸಲಿದ್ದಾರೆ.

ಇದೇ ಸಂದರ್ಭದಲ್ಲಿ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತರಾದ ಹಿರಿಯ ಸಾಹಿತಿ ಡಾ. ರಾಮಕೃಷ್ಣ ಮರಾಠೆ ಹಾಗೂ ಸಮಾಜ ಸೇವಕ ಗುರುದೇವ ಪಾಟೀಲ ಅವರನ್ನು ಸತ್ಕರಿಸಲಾಗುವುದು. ನಂತರ ರೂಪಾ ಖನಗಾವಿ ಅವರಿಂದ ವಚನ ಗಾಯನ ಜರುಗಲಿದ್ದು ಹೆಚ್ಚಿನ ಸಂಖ್ಯೆಯಲ್ಲಿ ಶ್ರೀಮಠದ ಭಕ್ತರು ಪಾಲ್ಗೊಳ್ಳಬೇಕೆಂದು ಶ್ರೀಮಠದ ಪ್ರಕಟಣೆಯಲ್ಲಿ ತಿಳಿಸಲಾಗಿದೆ.




ಬೆಳಗಾವಿ: ಕ್ರಾಂತಿ ಮಹಿಳಾ ಮಂಡಳ ಹಿಂದವಾಡಿ ಬೆಳಗಾವಿ ಮಂಡಳವು ವಿವಿಧ ಕ್ಷೇತ್ರಗಳಲ್ಲಿ ಮಾಡಿರುವ ಮಾಡುತ್ತಿರುವ ಸಾಮಾಜಿಕ ಕಳಕಳಿ ಮತ್ತು ಸಮಾಜಕಲ್ಯಾಣ ಕಾರ್ಯಗಳನ್ನು ಗುರುತಿಸಿ ಹುತಾತ್ಮ ಅಪಂಗ ಬಹು ಉದ್ದೇಶಿಯ ವಿಕಾಸ ಕಲ್ಯಾಣಕಾರಿ ಸಂಸ್ಥೆ ಕರಾಡ್ಇವರ ವತಿಯಿಂದ" ಪ್ರೈಡ್ಆಫ್ಕರ್ನಾಟಕ "ಎನ್ನುವ ಪ್ರಸಿದ್ಧವಾದ ನ್ಯಾಷನಲ್ ಲೆವೆಲ್ ಪ್ರಶಸ್ತಿಯನ್ನು ಕೊಡಲಾಯಿತು.

## ಭಾರತ ರಾಮ ಭಕ್ತರಿಗೆ ಮಾತ್ರ: ಬಿಜೆಪಿ ರಾಜ್ಯಾಧ್ಯಕ್ಷ ಕಟೀಲ್

ಕೊಪ್ಪಳ: ಟಿಪ್ಪು ಸುಲ್ತಾನ್ ವಂಶಸ್ಥರ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದ ಬಿಜೆಪಿ ರಾಜ್ಯಾಧ್ಯಕ್ಷ ನಳೀನ್ ಕುಮಾರ್ ಕಟೀಲ್ ಅವರು, "ನಾವು ಶ್ರೀರಾಮ ಮತ್ತು ಹನುಮಂತನ ಭಕ್ತರು. ನಮ್ಮದು ಟಿಪ್ಪುವಿನ ಸಂತತಿಯಲ್ಲ. ಅವರ ವಂಶಸ್ಥರನ್ನು ನಾವು ವಾಪಸ್ ಕಳುಹಿಸುತ್ತೇವೆ ಎಂದರು.

ಕೊಪ್ಪಳ ಜಿಲ್ಲೆಯ ಯಲಬುರ್ಗಾದಲ್ಲಿ ವಿಜಯ ಸಂಕಲ್ಪ ಸಮಾವೇಶದಲ್ಲಿ ಮಾತನಾಡಿದ ಕಟೀಲ್, ಈ ರಾಜ್ಯಕ್ಕೆ ಟಿಪ್ಪು ಸಂತಾನ ಬೇಕಾ? ಅಥವಾ ಹನುಮಂತ, ಶ್ರೀರಾಮನ ಭಕ್ತರು ಬೇಕಾ? ಎಂಬ ಯೋಚನೆ ಮಾಡಿ ಯಲಬುರ್ಗಾ ಜನರನ್ನು ಕೇಳುತ್ತೇನೆ ಎಂದರು.

ನಾನು ಹನುಮಂತನ ನೆಲದಲ್ಲಿ ಸವಾಲು ಹಾಕುತ್ತೇನೆ –– ಟಿಪ್ಪುವನ್ನು ಪ್ರೀತಿಸುವ ಜನರು



ಇಲ್ಲಿ ಉಳಿಯಬಾರದು.

ಭಗವಾನ್ ರಾಮನ ಭಜನೆಗಳನ್ನು ಹಾಡುವ ಮತ್ತು ಭಗವಾನ್ ಹನುಮಂತನನ್ನು ಆಚರಿಸುವ ಜನರು ಮಾತ್ರ ಇಲ್ಲಿ ವಾಸಿಸಬೇಕು ಎಂದು ಕಟೀಲ್ ಮತ್ತೊಂದು ವಿವಾದಾತ್ಮಕ ಹೇಳಿಕೆ ನೀಡಿದ್ದಾರೆ.

ಬಿಜೆಪಿಗೆ ಹನುಮಮಾಲೆ, ದತ್ತಮಾಲೆ ಮೇಲೆ ನಂಬಿಕೆ ಇದೆ. ಆದರೆ ಕಾಂಗ್ರೆಸ್‌ಗೆ ಟಿಪ್ಪು ಮಾಲೆ ಮೇಲೆ ನಂಬಿಕೆ ಇದೆ.

ರಾಜ್ಯದ ಬೇರೆಡೆಯಂತೆ ಯಲಬುರ್ಗಾ ಕ್ಷೇತ್ರವೂ ಕಾಂಗ್ರೆಸ್ ಮುಕ್ತ ಆಗುತ್ತದೆ ಎಂದು ಗುಡುಗಿದರು.

ಈ ಹಿಂದೆ ರಸ್ತೆ, ಚರಂಡಿಯಂತಹ ಸಣ್ಣ ವಿಷಯಗಳ ಬಗ್ಗೆ ಮಾತನಾಡಬೇಡಿ. ಆದರೆ ಲವ್ ಜಿಹಾದ್‌ನಂತಹ ದೊಡ್ಡ ವಿಷಯಗಳ ಬಗ್ಗೆ ಮಾತನಾಡಿ ಎಂದು ಹೇಳುವ ಮೂಲಕ ಕಟೀಲ್ ಹೊಸ ವಿವಾದವನ್ನು ಹುಟ್ಟುಹಾಕಿದ್ದರು.

## ರೈತ ಸಂಘದಿಂದ ತಹಶಿಲ್ದಾರರಿಗೆ ಸನ್ಮಾನ




ದೇವರ ಹಿಪ್ಪರಗಿ : ನೂತನವಾಗಿ ದೇವರಹಿಪ್ಪರಗಿ ತಾಲೂಕಿನ ದಂಡಾಧಿಕಾರಿಗಳಾಗಿ ಆಗಮಿಸಿರುವ ಶ್ರೀಮತು ಕವಿತಾ ಆರ್ ಅವರಿಗೆ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆಯಿಂದ ಸನ್ಮಾನಿಸಿ, ತಾಲೂಕಿನಲ್ಲಿಯ ರೈತರ ಸಮಸ್ಯೆಗಳನ್ನು ಕುರಿತು ಚರ್ಚಿಸಲಾಯಿತು.

ಈ ವೇಳೆ ತಾಲೂಕು ಅಧ್ಯಕ್ಷರಾದ ಈರಪ್ಪ ಶಾ ಕುಳಕುಮಟಗಿ, ಮಲ್ಲಪ್ಪ ಸುಂಬಡ್,ಗುರಣ್ಣ ಹಂಗರಗಿ, ಸಂಗು ಹುಣಸಗಿ, ಅಪ್ಪ ಸಾಬ್ ಹರವಾಳ, ಸುಪುತ್ರಪ್ ಗೌಡ ಪಾಟೀಲ್, ಮಲ್ಲನಗೌಡ ಪಾಟೀಲ್,ಬಾಬುಗೌಡ ಪಾಟೀಲ್, ನಿಂಗನಗೌಡ ಸಾಸಾಬಾಳ್ ಇದ್ದರು.

## ವಿದ್ಯಾರ್ಥಿಗಳ ಸ್ವಾಗತ ಸಮಾರಂಭ





ಬೆಳಗಾವಿ: ಸಮಾರಂಭಕ್ಕೆ ಮುಖ್ಯ ಅತಿಥಿಯಾಗಿ ಆಗಮಿಸಿದ ಮೃಣಾಲಿನಿ ಇಂಗ್ಲಿಷ ಅಕಾಡೆಮಿ ಮತ್ತು ಕೋರಾ ಟೆಕ್ನಾಲಾಜಿ ಆಡಳಿತ ಮುಖ್ಯಸ್ಥೆ ಕೋಮಲ ಕೋಳೀಮಠ ಅವರು ವಿದ್ಯಾರ್ಥಿಗಳನ್ನು ಉದ್ದೇಶಿಸಿ ಮಾತನಾಡಿ, ವಿದ್ಯಾರ್ಥಿಗಳು ಉನ್ನತ ಶಿಕ್ಷಣ ಪಡೆಯುವ ಸಂದರ್ಭದಲ್ಲಿ ಓದುವ ಕಡೆ ಹೆಚ್ಚಿನ ಗಮನ ನೀಡಬೇಕು. ನಿಮ್ಮಲ್ಲಿರುವ ಪ್ರತಿಭೆಯನ್ನು ಅನಾವರಣಗೊಳಿಸಲು ಮುಂದಾಗಬೇಕೆಂದು ಅವರು ತಿಳಿಸಿದರು.

ಮಹಾವಿದ್ಯಾಲಯದ ಪ್ರಾಚಾರ್ಯ ಸುನಿತಾ ದೇಶಪಾಂಡೆ ಅವರು ಸಮಾರಂಭದ ಅಧ್ಯಕ್ಷತೆಯನ್ನು ವಹಿಸಿದ್ದರು. ನೀತಾ ಗಂಗರೆಡ್ಡಿ ಅತಿಥಿಗಳನ್ನು ಸ್ವಾಗತಿಸಿದರು. ಅಕ್ಷತಾ ಪಾಟೀಲ ಪರಿಚಯಿಸಿದರು. ಇಬ್ತಿಸಮ್ ಬಾಳೆಕುಂದ್ರಿ ವಂದಿಸಿದರು. ಭಾರತಿ ಮುಚ್ಚಂಡಿ ಕಾರ್ಯಕ್ರಮ ನಿರೂಪಿಸಿದರು.

## ಪಾಲಕರು, ಶಿಕ್ಷಕರು ಮಕ್ಕಳ ಪ್ರತಿಭೆ ಪ್ರೋತ್ಸಾಹಿಸುವ ಕೆಲಸವನ್ನು ಕಾಳಜಿಯಿಂದ ಮಾಡಬೇಕು: ಚನ್ನರಾಜ ಹಟ್ಟಿಹೊಳಿ

ಬೆಳಗಾವಿ: ಮಕ್ಕಳಲ್ಲಿರುವ ಪ್ರತಿಭೆಗಳನ್ನು ಗುರುತಿಸಿ ಅವುಗಳನ್ನು ಹೊರಗಿನ ಪ್ರಪಂಚಕ್ಕೆ ಪರಿಚಯಿಸುವುದಕ್ಕೆ ಕಲಿಕಾ ಹಬ್ಬದಂತಹ ಕಾರ್ಯಕ್ರಮಗಳು ಸಹಕಾರಿ ಎಂದು ವಿಧಾನ ಪರಿಷತ್ ಸದಸ್ಯ ಚನ್ನರಾಜ ಹಟ್ಟಿಹೊಳಿ ಹೇಳಿದರು.

ಬುಧವಾರ ಬೆಳಗಾವಿ ಗ್ರಾಮೀಣ ಕ್ಷೇತ್ರದ ಮಾಸ್ತಮರ್ಡಿಯಲ್ಲಿ ನಡೆದ ಪ್ರಾಥಮಿಕ ಹಾಗೂ ಪ್ರೌಢಶಾಲೆಯ ಜಿಲ್ಲಾ ಮಟ್ಟದ ಕಲಿಕಾ ಹಬ್ಬ 2023ರ ಸಮಾರೋಪ ಸಮಾರಂಭದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು. ಪಾಲಕರು ಅತ್ಯಂತ ಕಾಳಜಿಯಿಂದ ಮಕ್ಕಳನ್ನು ಬೆಳೆಸುತ್ತಾರೆ. ಶಿಕ್ಷಕರು ಅವರಲ್ಲಿರುವ ಪ್ರತಿಭೆಗಳನ್ನು



ಗುರುತಿಸುವ ಕೆಲಸ ಮಾಡುತ್ತಾರೆ. ವಿವಿಧ ಕಾರ್ಯಕ್ರಮಗಳನ್ನು ಹಾಗೂ ಸ್ಪರ್ಧೆಗಳನ್ನು ಏರ್ಪಡಿಸುವ ಮೂಲಕ ಪ್ರತಿಭೆಗಳು ಹೊರಗೆ ಬರಲು ಮತ್ತು ಬೆಳೆಯಲು ಅವಕಾಶವಾಗುತ್ತದೆ. ಪಾಲಕರು ಮತ್ತು ಶಿಕ್ಷಕರು ಇಬ್ಬರೂ ಮಕ್ಕಳನ್ನು ಪ್ರೋತ್ಸಾಹಿಸುವ ಕೆಲಸವನ್ನು ಕಾಳಜಿಯಿಂದ ಮಾಡಬೇಕು ಎಂದು ಚನ್ನರಾಜ ಹಟ್ಟಿಹೊಳಿ ಸಲಹೆ ನೀಡಿದರು.

ಬೆಳಗಾವಿ ಗ್ರಾಮೀಣ ಕ್ಷೇತ್ರದ್ಯಾಂತ ಶಾಸಕಿ ಲಕ್ಷ್ಮೀ ಹೆಬ್ಬಾಳಕರ್ ಅವರು ಶಿಕ್ಷಣಕ್ಕೆ ಹೆಚ್ಚಿನ ಆದ್ಯತೆ ನೀಡಿ ಕೆಲಸ ಮಾಡುತ್ತಿದ್ದಾರೆ. ಕ್ಷೇತ್ರದ್ಯಾಂತ ಹೆಚ್ಚುವರಿ ಕೊಠಡಿಗಳ ನಿರ್ಮಾಣ, ಹೊಸ ಶಾಲಾ ಕಟ್ಟಡಗಳ ನಿರ್ಮಾಣ, ಹಳೆಯ ಶಾಲೆಗಳ ದುರಸ್ತಿ, ಶಾಲೆಗಳಿಗೆ ಪೇಂಟಿಂಗ್ ವ್ಯವಸ್ಥೆ, ಸ್ಮಾರ್ಟ್ ಕ್ಲಾಸ್ ಗಳ ನಿರ್ಮಾಣ ಮತ್ತಿತರ ಕಾರ್ಯಗಳನ್ನು ಈಗಾಗಲೇ ಪೂರ್ಣಗೊಳಿಸಿದ್ದಾರೆ. ಬರುವ ದಿನಗಳಲ್ಲಿ ಶಿಕ್ಷಣ ಕ್ಷೇತ್ರಕ್ಕೆ ಇನ್ನೂ ಹೆಚ್ಚಿನ ಗಮನವನ್ನು ಹರಿಸಲಾಗುವುದು ಎಂದು ಅವರು ತಿಳಿಸಿದರು.

ಕಾರ್ಯಕ್ರಮದಲ್ಲಿ ಡಿಡಿಪಿಆಯ್ ಬಸವರಾಜ ಎಮ್ ನಾಲತವಾಡ್, ಡಿವೈಪಿಸಿ ಬಿ ಎಚ್ ಮಿಲ್ಲಾನಟ್ಟಿ, ಯುವ ಕಾಂಗ್ರೆಸ್ ಮುಖಂಡ ಮೃಣಾಲ ಹೆಬ್ಬಾಳಕರ್, ಶಿಕ್ಷಣಾಧಿಕಾರಿಗಳಾದ ಎಲ್ ಎಸ್ ಹಿರೇಮಠ, ಎಸ್ ಪಿ ದಾಸಪ್ಪನವರ, ಬಸವರಾಜ ಥೋರ್ಲಿ, ರೇಣುಕಾ ಕುರುಬರ, ಪ್ರಶಾಂತ ಕಲ್ಲನಾಚೆ, ಬಾಳು ಕುರಂಗಿ, ಮಹಾನಂದಾ ಮರಿಕಟ್ಟಿ, ಮಾರುತಿ ಚಿಂಗಳಿ, ಸಾಗರ ಕುರಂಗಿ ಹಾಗೂ ಗ್ರಾಮದ ಪ್ರಮುಖರು, ಎಲ್ಲ ಶಿಕ್ಷಕ ವೃಂದದವರು ಉಪಸ್ಥಿತರಿದ್ದರು.

## ದೇಶದ 10 ಲಕ್ಷ ಸರ್ಕಾರಿ ಶಾಲೆಗಳಲ್ಲಿ ಶೇ.20 ರಲ್ಲಿ ಮಾತ್ರ ಇಂಟರ್ನೆಟ್ ಸೌಲಭ್ಯ: ಲೋಕಸಭೆಗೆ ಸರ್ಕಾರ ಮಾಹಿತಿ

ನವದೆಹಲಿ: ಭಾರತದಲ್ಲಿ 10 ಲಕ್ಷಕ್ಕೂ ಹೆಚ್ಚು ಸರಕಾರಿ ಶಾಲೆಗಳಿವೆ, ಆದರೆ ಕೇವಲ 2 ಲಕ್ಷ ಶಾಲೆಗಳಲ್ಲಿ ಮಾತ್ರ ಇಂಟರ್‌ನೆಟ್ ಸೌಲಭ್ಯವಿದೆ ಎಂದು ಶಿಕ್ಷಣ ಖಾತೆ ರಾಜ್ಯ ಸಚಿವ ಸುಭಾಸ್ ಸರಕಾರ್ ಲೋಕಸಭೆಗೆ ಮಾಹಿತಿ ನೀಡಿದ್ದಾರೆ.

ಎಲ್ಲಾ 2,762 ಸರ್ಕಾರಿ ಶಾಲೆಗಳು ಇಂಟರ್ನೆಟ್ ಸೌಲಭ್ಯ ಹೊಂದಿರುವ ಏಕೈಕ ರಾಜ್ಯ ದೆಹಲಿ. ಪುದುಚೇರಿ (422) ಮತ್ತು ಚಂಡೀಗಢದಲ್ಲಿ (123) ಎಲ್ಲಾ ಸರ್ಕಾರಿ ಶಾಲೆಗಳು ಇಂಟರ್ನೆಟ್ ಸಂಪರ್ಕವನ್ನು ಹೊಂದಿವೆ ಎಂದು ಸರಕಾರ್ ಲಿಖಿತ ಉತ್ತರದಲ್ಲಿ ತಿಳಿಸಿದ್ದಾರೆ.

ಶಿಕ್ಷಣ ಸಚಿವಾಲಯವು ಅಭಿವೃದ್ಧಿಪಡಿಸಿದ ದತ್ತಸಂಚಯವಾದ ಶಿಕ್ಷಣಕ್ಕಾಗಿ ಏಕೀಕೃತ ಜಿಲ್ಲಾ ಮಾಹಿತಿ ವ್ಯವಸ್ಥೆಯ ಪ್ರಕಾರ, 38 ಶಾಲೆಗಳಲ್ಲಿ 37 ಶಾಲೆಗಳಲ್ಲಿ ಲಕ್ಷದ್ವೀಪ ಇಂಟರ್ನೆಟ್ ಸಂಪರ್ಕವನ್ನು ಹೊಂದಿದೆ. ರಾಜ್ಯಗಳಲ್ಲಿ, ಕೇರಳದಲ್ಲಿ, 5,010 ಸರ್ಕಾರಿ ಶಾಲೆಗಳಲ್ಲಿ 4,738 ರಲ್ಲಿ ಇಂಟರ್ನೆಟ್ ಇದೆ. ಆದರೆ ದಕ್ಷಿಣದ ಇತರ ರಾಜ್ಯಗಳು ಪಟ್ಟಿಯಲ್ಲಿ ಕಡಿಮೆ ದರದಲ್ಲಿವೆ.

ಕರ್ನಾಟಕದಲ್ಲಿರುವ 49,679 ಸರ್ಕಾರಿ ಶಾಲೆಗಳಲ್ಲಿ 5,308 ಶಾಲೆಗಳಲ್ಲಿ ಮಾತ್ರ ಅಂತರ್ಜಾಲ ಸೌಲಭ್ಯವಿದೆ. ತಮಿಳುನಾಡಿನಲ್ಲಿ, 37,636 ರಲ್ಲಿ 9,292 ಸರ್ಕಾರಿ ಶಾಲೆಗಳು ಮತ್ತು ಆಂಧ್ರಪ್ರದೇಶದಲ್ಲಿ, 45,137 ರಲ್ಲಿ 20,313 ಶಾಲೆಗಳಲ್ಲಿ ಇವೆ.

ಉತ್ತರ ಪ್ರದೇಶ (137,024 ಶಾಲೆಗಳಲ್ಲಿ 12,074), ಮಧ್ಯಪ್ರದೇಶ (92,695 ಶಾಲೆಗಳಲ್ಲಿ 16,469) ಮತ್ತು ಬಿಹಾರ (75,558 ಶಾಲೆಗಳಲ್ಲಿ 4,421) ಕಳಪೆಯಾಗಿವೆ. ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯು ಎಲ್ಲಾ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಿಗೆ ಬಿಎಸ್‌ಎನ್‌ಎಲ್‌ನೊಂದಿಗೆ ಒಪ್ಪಂದಕ್ಕೆ ಸಹಿ ಹಾಕಲು ಮತ್ತು ಎಲ್ಲಾ ಸರ್ಕಾರಿ ಶಾಲೆಗಳಿಗೆ ಎಫ್‌ಟಿಟಿಎಚ್ ಇಂಟರ್ನೆಟ್ ಸಂಪರ್ಕವನ್ನು ಒದಗಿಸಲು ಸಲಹೆಯನ್ನು ನೀಡಿದೆ ಎಂದು ಸರ್ಕಾರ್ ಹೇಳಿದರು.

## ಬೃಹತ್ ಹಳದಿ ಕುಂಕುಮ ಕಾರ್ಯಕ್ರಮ : ಶಾಸಕ ಅನಿಲ ಬೆನಕೆ ಭಾಗಿ

ಬೆಳಗಾವಿ : ಬೆಳಗಾವಿ ನಗರದ ಬಸವಣಕುಡಚಿಯಲ್ಲಿ ಶಾಸಕ ಅನಿಲ ಬೆನಕೆ ಅವರ ನೇತೃತ್ವದಲ್ಲಿ ಬೃಹತ್ ಹಳದಿ ಕುಂಕುಮ ಕಾರ್ಯಕ್ರಮಆಯೋಜನೆ ಮಾಡಲಾಗಿತ್ತು.ಬಸವಣ ಕುಡಚಿಗ್ರಾಮದ ಬಸವಣ್ಣ ಮಂದಿರಆವರಣದಲ್ಲಿಆಯೋಜನೆ ಮಾಡಲಾದಕಾರ್ಯಕ್ರಮದಲ್ಲಿಎರಡು ಸಾವಿರಕ್ಕೂ ಹೆಚ್ಚು ಮಹಿಳೆಯರು ಹಳದಿ ಕುಂಕುಮ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು. ಕಾರ್ಯಕ್ರಮವನ್ನುದೀಪ ಪ್ರಜ್ವಲನೆ ಮಾಡುವುದರ ಮೂಲಕ ಚಾಲನೆ ನೀಡಿದರು.

ಈ ವೇಳೆ ಮಾತನಾಡಿದ ಶಾಸಕ ಅನಿಲ ಬೆನಕೆರವರು ನಾನು ಶಾಸಕನಾಗುವ ಮುಂಚೆಯಿಂದಲೂ ಬಸವಣಕುಡಚಿಜನ ನನ್ನ ಮೇಲೆ ತುಂಬಾ ಪ್ರೀತಿ ವಿಶ್ವಾಸವನ್ನುಇಟ್ಟಿದ್ದು, 2018 ರಚುನಾವಣೆಗೆ ನಾನು ಸ್ಪರ್ದೆ ಮಾಡಿದಾಗಲೂ ನನಗೆ ಪ್ರತಿಶತ 100% ರಷ್ಟು ಮತದಾನ ಮಾಡಿದ ಫಲವಾಗಿ ನಾನು ಶಾಸಕನಾಗಿದ್ದೇನೆಎಂದಅವರು ನಿಮ್ಮ ಪ್ರೀತಿ ವಿಶ್ವಾಸವು ನನ್ನ ಮೇಲೆ ಹೀಗೆಯೇಇರಲಿ ಎಂದರು. ನಾನು ಶಾಸಕನಾದ ಮೇಲೆ ಬಸವಣಕುಡಚಿಯಲ್ಲಿ 1 ಕೋಟಿ ವೆಚ್ಚದಲ್ಲಿ ಹೊಲಗಳಿಗೆ ಸಂಪರ್ಕಕಲ್ಪಿಸುವಬ್ರಿಡ್ಜ್ ನಿರ್ಮಾಣ, ಕನ್ನಡ ಮತ್ತು ಮರಾಠಿ ಶಾಲೆಗಳ ನಿರ್ಮಾಣ, 15 ಲಕ್ಷ



ವೆಚ್ಚದಲ್ಲಿಅಂಗನವಾಡಿ ನಿರ್ಮಾಣ,20 ಲಕ್ಷ ವೆಚ್ಚದಲ್ಲಿ ಸ್ಮಶಾನ ನಿರ್ಮಾಣ, ಗ್ರಾಮದಲ್ಲಿ 1ಕೋಟಿಗೂ ಅಧಿಕ ವೆಚ್ಚದಲ್ಲಿರಸ್ತೆ ಮತ್ತುಗಟಾರು ನಿರ್ಮಾಣ, ದೇವರಾಜಅರಸ ಕಾಲೋನಿಯಲ್ಲಿ 3 ಕೋಟಿಗೂಅಧಿಕ ವೆಚ್ಚದಲ್ಲಿರಸ್ತೆಕಾಮಗಾರಿಕೈಗೊಂಡಿದ್ದು, ಕರ್ನಾಟಕ ಹೌಸಿಂಗ ಬೋರ್ಡನಲ್ಲಿರಸ್ತೆ, ಬೀದಿ ದೀಪ ಅಳವಡಿಕೆ ಸೇರಿದಂತೆಒಟ್ಟಾರೆಯಾಗಿಗ್ರಾಮದಲ್ಲಿ ಸುಮಾರು 10 ಕೋಟಿಗೂ ಹೆಚ್ಚು ಅಭಿವೃದ್ಧಿಕಾಮಗಾರಿಗಳನ್ನು ಕೈಗೊಂಡಿದ್ದೇನೆಎಂದು ಮಾಹಿತಿ ನೀಡಿದರು.

ಬಸವಣ ಕುಡಚಿಯಲ್ಲಿ ಮಹಿಳೆಯರಿಗಾಗಿ ಆರೋಗ್ಯ–ಕೇಂದ್ರ ಸ್ಥಾಪನೆಗೆ ಹಣ ಬಿಡುಗಡೆಆಗಿದ್ದು, ಕಟ್ಟಡ ನಿರ್ಮಾಣಕ್ಕೆಜಮೀನುಅವಶ್ಯಕವಿರುವುದರಿಂದ ಬಸವಣಕುಡಚಿಯಲ್ಲಿಜಮೀನು ಸಿಕ್ಕ ತಕ್ಷಣಆರೋಗ್ಯಕೇಂದ್ರ ಸ್ಥಾಪನೆ ಮಾಡಲಾಗುವುದುಎಂದರು. ಬರುವ ದಿನಗಳಲ್ಲಿ ಮಹಿಳೆಯರು ಸ್ವಾವಲಂಭಿ ಆಗಬೇಕು ಅದಕ್ಕಾಗಿ ಹೆಣ್ಣು ಮಕ್ಕಳ ಉನ್ನತ ಶಿಕ್ಷಣವನ್ನು ಪಡೆದುಕೊಳ್ಳಬೇಕೆಂದರು. ನಾನು ಇಂದುಯಾವುದೇಆಮೀಶವನ್ನು ನೀಡಿಲ್ಲಆದರೂಸಾವಿರಾರು ಮಹಿಳೆಯರು ಇಂದು ಹಳದಿ ಕುಂಕುಮ ಕಾರ್ಯಕ್ರಮಕ್ಕೆ ಬಂದಿದ್ದು, ತುಂಬಾ ಸಂತೋಷಆಗಿದ್ದು ನಿಮ್ಮ ಆಶೀರ್ವಾದ ನನ್ನ ಮೇಲೆ ಇರಲಿಎಂದು ತಿಳಿಸಿದರು.ಈ ಸಂದರ್ಭದಲ್ಲಿ ನಗರ ಸೇವಕರಾದ ಬಸವರಾಜ ಮೋದಗೇಕರ, ಲಕ್ಷ್ಮಿ ಮೋದಗೇಕರ, ಸಮಾಜ ಸೇವಕಿ ಸುವರ್ಣಾ ಬೇಡಕಾ, ರಾಧಿಕಾ ಮೂತಗೇಕರ, ಸುನಂದಾ ಮುನ್ನೋಳ್ಳಿ, ರೇಖಾ ಸೂರ್ಯವಂಶಿ, ವೈಶಾಲಿ ಏಕನೇಕರ, ಸುಜಾತಾ ಚೌಗುಲೆ, ನಿರ್ಮಲಾಗಿರಿ, ರೂಪಾ ಚೌಗುಲಾ, ಕಾಂಚನ ದಿವಟೆ, ಮಂಜುಳಾ ಬೆಕ್ಕಡಿ, ಜ್ಯೋತಿ ಬೇಡಕಾ, ರಜನಿ ಮೋದಗೇಕರ, ಜೈಶೀಲಾ ದೇಸಾಯಿ ಸೇರಿಂದತೆ ಸಾವಿರಾರು ಮಹಿಳೆಯರು, ಬಿಜೆಪಿ ಕಾರ್ಯಕರ್ತರು ಉಪಸ್ಥಿತರಿದ್ದರು.

## ಡಾ.ಬಿ.ಆರ್. ಅಂಬೇಡ್ಕರ್ ಅವರಿಗೆ ಅವಮಾನ: ವಿದ್ಯಾರ್ಥಿಗಳ ವಿರುದ್ಧ ಸೂಕ್ತ ಕಠಿಣ ಕ್ರಮ ಕೈಗೊಳ್ಳುವಂತೆ ಒತ್ತಾಯ

ಬೆಳಗಾವಿ: ಬೆಂಗಳೂರಿನ ಜಯನಗರದಲ್ಲಿರುವ ಜೈನ್ ಕಾಲೇಜಿನಲ್ಲಿ ನಡೆದ ಯೂತ್ ಫೆಸ್ಟ್‌ನಲ್ಲಿ ಸಂವಿಧಾನ ಶಿಲ್ಪಿ ಡಾ. ಬಿ.ಆರ್ ಅಂಬೇಡ್ಕರ್ ಅವರಿಗೆ ಅವಹೇಳನ ಮಾಡಲಾಗಿದ್ದು, ಕಾಲೇಜ ಹಾಗೂ ವಿದ್ಯಾರ್ಥಿಗಳ ವಿರುದ್ಧ ಸೂಕ್ತ ಕಠಿಣ ಕ್ರಮ ಕೈಗೊಳ್ಳುವಂತೆ ವಿವಿಧ ದಲಿತ ಸಂಘಟನೆಗಳಿಂದ ಒತ್ತಾಯಿಸಿ ಜಿಲ್ಲಾಡಳಿತ ಮುಖಾಂತರ ಮುಖ್ಯಮಂತ್ರಿಗಳಿಗೆ ಮನವಿಯನ್ನು ಸಲ್ಲಿಸಲಾಯಿತು.

ಇದಕ್ಕೂ ಮೊದಲು ಇಲ್ಲಿನ ಚನ್ನಮ್ಮ ವೃತ್ತದಿಂದ ಜಿಲ್ಲಾಧಿಕಾರಿಗಳ ಕಚೇರಿವರೆಗೆ ಪ್ರತಿಭಟನಾ ರ್ಯಾಲಿ ನಡೆಸಿದ ವಿವಿಧ ದಲಿತ ಸಂಘಟನೆಗಳು ಜೈನ್ ಕಾಲೇಜು ಹಾಗೂ ವಿದ್ಯಾರ್ಥಿಗಳ ವಿರುದ್ಧ ಆಕ್ರೋಶ ಹೊರಹಾಕಿದರು.

ಈ ವೇಳೆ ಕರ್ನಾಟಕ ವಾಲ್ಮೀಕಿ ಯುವವೇದಿಕೆ ರಾಜಾಧ್ಯಕ್ಷ ವಿಜಯ ತಳವಾರ ಮಾತನಾಡಿ, ಜೈನ್ ಕಾಲೇಜಿನಲ್ಲಿ ಫೆ.6ರಂದು ಕಾಲೇಜು ಫೆಸ್ಟ್ ನಡೆಸಲಾಗಿತ್ತು. ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳು ಡಾ. ಬಿ.ಆರ್. ಅಂಬೇಡ್ಕರ್



ಅಲ್ಲ. ಅವರು 'ಬಿಯರ್ ಅಂಬೇಡ್ಕರ್' ಎಂದು ಅವಹೇಳನ ಮಾಡಿದ್ದಾರೆ. ಸ್ಕಿಟ್ ನಲ್ಲಿ ದಲಿತ ಯುವತಿ ಬಗ್ಗೆಯೂ ಅವಮಾನ ಮಾಡಿದ್ದು, 'ಡೋಂಟ್ ಟಚ್ ಮಿ, ಟಚ್ ಮಿ' ಎಂಬ ಹಾಡನ್ನು ಹಾಕಿ ಗೇಲಿ ಮಾಡಿದ್ದಾರೆ. 'ನೀವು ಡಿ–ಲಿಟ್ ಆಗಿರುವಾಗ ದಲಿತರಾಗಿರಲು ಕಾರಣವೇನು' ಎಂದು ವಿವಾದಾತ್ಮಕವಾಗಿ ನುಡಿದಿರುವುದು ಖಂಡನೀಯವಾಗಿದೆ ಎಂದರು.

ಕಿರು ನಾಟಕವೊಂದರಲ್ಲಿ ಡಾ. ಬಿ.ಆರ್. ಅಂಬೇಡ್ಕರ್ ಅವರಿಗೆ ಅವಮಾನ ಮಾಡಿ, ಜೈನ್ ವಿವಿಯ ಉತ್ಸವದಲ್ಲಿ ಅದನ್ನು ಪ್ರದರ್ಶನ ಮಾಡಿ ಸಂಭ್ರಮಿಸಿದೆ.

ಈ ಹಿನ್ನಲೆಯಲ್ಲಿ ವಿಶ್ವವಿದ್ಯಾಲಯದ ಮಾನ್ಯತೆಯನ್ನು ಕೂಡಲೇ ರದ್ದು ಮಾಡಬೇಕು. ಯುಜಿಸಿ ಇದನ್ನು ಗಂಭೀರವಾಗಿ ಪರಿಗಣಿಸಿ ಯುಜಿಸಿ ನಿಯಮಗಳ ಅಡಿ ವಿವಿಗೆ ನಿರ್ಬಂಧ ವಿಧಿಸಬೇಕು ಎಂದು ಒತ್ತಾಯಿಸಿದರು.

ಭಾರತದಲ್ಲಿ ಶತಶತಮಾನಗಳಿಂದಲೂ ಅಸ್ತಿತ್ವದಲ್ಲಿದ್ದಂತಹ ಅಸ್ಪೃಶ್ಯತೆ, ಜಾತಿ ಪದ್ಧತಿಯನ್ನು ತೊಡೆದು ಹಾಕಿ ಸಮಾನತೆಯನ್ನು ಸಾರಿ, ಇಡೀ ವಿಶ್ವಕ್ಕೆ ಮಾದರಿಯಾದಂತಹ ಡಾ. ಬಿ.ಆರ್ ಅಂಬೇಡ್ಕರ್ ರವರನ್ನು ಅತ್ಯಂತ ಕೀಳಾಗಿ ಚಿತ್ರಿಸಿರುವುದು ದಲಿತರ ಮನಸ್ಸಿಗೆ ಅಶಾಂತಿಯನ್ನು ಉಂಟು ಮಾಡಿದ್ದು, ಅವರು ಡಾ. ಬಿ.ಆರ್ ಅಂಬೇಡ್ಕರ್ ಅವರಿಗೆ ಅವಮಾನವನ್ನು ಮಾಡಿದವರ ವಿರುದ್ಧ ಕಠೀಣ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಜೈನ್ ವಿಶ್ವವಿದ್ಯಾಲಯದ ಆಡಳಿತ ಮಂಡಳಿಯ ವಿರುದ್ಧ ಎಸ್ಸಿ/ಎಸ್ಟಿ ದೌರ್ಜನ್ಯ ಕಾಯ್ದೆ 1989ರ ಅಡಿಯಲ್ಲಿ ಮತ್ತು ಭಾರತೀಯ ದಂಡ ಸಂಹಿತೆ 1860ರ ಅಡಿಯಲ್ಲಿ ದೇಶದ್ರೋಹದ ಪ್ರಕರಣವನ್ನು ದಾಖಲಿಸಿ, ಕಾನೂನಿನ ಅನುಸಾರ ಕ್ರಮವನ್ನು ಕೈಗೊಳ್ಳಬೇಕು.

ದೇಶದ ಯಾವುದೇ ಶೈಕ್ಷಣಿಕ ಸಂಸ್ಥೆಗಳಲ್ಲಿ ಇಂತಹ ಘಟನೆ ಮರುಕಳಿಸದಂತೆ ಸರಕಾರ ಎಚ್ಚರಿಕೆಯನ್ನು ವಹಿಸಬೇಕು ಎಂದು ತಿಳಿಸಿದರು.

ಸಂವಿಧಾನ ಶಿಲ್ಪಿ ಡಾ. ಬಿಆರ್ ಅಂಬೇಡ್ಕರ್ ಅವರಿಗೆ ಅವಹೇಳನ ಮಾಡಿರುವರ ವಿರುದ್ಧ ಎಸ್‌ಸಿ ಸೆಕ್ಷನ್ 3ರ ಅಡಿಯಲ್ಲಿ ಹಾಗೂ ಎಸ್ಟಿ ಕಾಯ್ದೆ, ಹಾಗೇಯೆ ಭಾರತೀಯ ದಂಡ ಸಂಹಿತೆಯ ಸೆಕ್ಷನ್ 153, 153ಎ, 295, 499, 500, 503, 504, 506 ಮತ್ತು 34ರ ದೂರನ್ನು ಪರಿಗಣಿಸಿ ಪ್ರದರ್ಶಕರು ಮತ್ತು ವಿಶ್ವವಿದ್ಯಾಲಯ ಅಧಿಕಾರಿಗಳ ವಿರುದ್ಧ ದೂರನ್ನು ದಾಖಲಿಸಿಕೊಂಡು ಕಠಿಣ ಕ್ರಮ ಕೈಗೊಳ್ಳಲು ಮುಂದಾಗಬೇಕು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಕರೆಪ್ಪಾ ಗುಡೆನ್ನವರ, ಬಸವರಾಜ ನಾಯಕ, ಆಕಾಶ ಬೆವಿನಕಟ್ಟಿ, ದಯಾನಂದ ಪವಾರ, ಮಹಾದೇವ ತಳವಾರ, ಸಂತೋಷ ಹಲಗೌರರ, ರವಿ ಬಸ್ತವಾಡಕರ್, ಸರಳಾ ಸಾತಪುತೆ, ದೀಕ್ಷಾ ಪೂಜಾರಿ, ಪ್ರವೀಣ ಮಾದರ, ಯಲ್ಲಪ್ಪಾ ಭಜಂತ್ರಿ, ಡಿ ಕಾಂಬಳೆ ಹಾಗೂ ಇತರರು ಇದ್ದರು.

BELAGAVI VARADI KANNADA DAILY MORNING : Editor, Printer, Publisher & Owned By : Satish Basavani Gudagenatti, Basavani House No.53, Ashray Colony, Sarathi Nagar, Tv Center - 590019, TQ & DIST Belagavi, Karnataka.
Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089